ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-ಸಂಪುಟ:12 | ISSUE- ಸಂಚಿಕೆ: 357 | PAGE- ಪುಟ 8 | ಗುರುವಾರ 30.01.2025 | RS.ಬೆಲೆ 2/-

# ಕುಂಭ ಮೇಳ ಕಾಲ್ತುಳಿತ

## ರಾಜ್ಯದ ನಾಲ್ವರು ಸೇರಿ 30 ಭಕ್ತರ ಸಾವು, 60 ಮಂದಿಗೆ ಗಾಯ



ಪ್ರಯಾಗರಾಜ್:ಜ.29:ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಕಳೆದ ಎರಡು ವಾರಗಳಿಂದ ಮಹಾಕುಂಭ ಮೇಳ ನಡೆ- ಯುತ್ತಿದ್ದು,ಮೌನಿ ಅಮಾವಾಸ್ಯೆ ಹಿನ್ನೆಲೆಯಲ್ಲಿ ಬುಧವಾರ ಭಕ್ತರ ಸಂಖ್ಯೆ ದಿಢೀರ್ ಹೆಚ್ಚಾದ ಪರಿಣಾಮ ಕಾಲ್ತುಳಿತ ಸಂಭವಿಸಿದೆ.

ಮಹಾಕುಂಭಮೇಳದಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಕಾಲ್ತುಳಿತದಲ್ಲಿ ಒಟ್ಟು 30 ಭಕ್ತರು ಮೃತಪಟ್ಟಿದ್ದಾರೆ ಮತ್ತು 60 ಭಕ್ತರು ಗಾಯಗೊಂಡಿದ್ದಾರೆ ಎಂದು ಉತ್ತರಪ್ರದೇಶ ಪೊಲೀಸ್ ಮಹಾ ನಿರ್ದೇಶಕ ವೈಭವ್ ಕೃಷ್ಣ ಅವರು ಹೇಳಿದ್ದಾರೆ.

ಇದುವರೆಗೆ ಇಪ್ಪತ್ತೈದು ಮೃತದೇಹಗಳನ್ನು ಗುರುತಿಸಲಾಗಿದೆ

(2ನೇ ಪುಟ ನೋಡಿ)

### ತಾಯಿ, ಮಗಳು ಸೇರಿ ಬೆಳಗಾವಿಯ ನಾಲ್ವರು ಸಾವು



ಇಂದು ಸಂಭವಿಸಿದ ಕಾಲ್ತುಳಿತದಲ್ಲಿ ಕರ್ನಾಟಕದಿಂದ ಕುಂಭ ಮೇಳಕ್ಕೆ ತೆರಳಿದ್ದ ಬೆಳಗಾವಿಯ ತಾಯಿ, ಮಗಳು ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ.

ಬೆಳಗಾವಿಯ ವಡಗಾವಿ ನಿವಾಸಿ ಜ್ಯೋತಿ ಹತ್ತರವಾಠ(50) ಮತ್ತು ಅವರ ಮಗಳು ಮೇಘಾ(18) ಹತ್ತರವಾಠ ಕಾಲ್ತುಳಿತದಲ್ಲಿ ಸಾವನ್ನಪ್ಪಿದ್ದಾರೆ ಎಂದು ಅವರ ಸಂಬಂಧಿ ಗುರುರಾಜ ಹುದ್ದಾರ ಅವರು ಮಾಹಿತಿ ನೀಡಿದ್ದಾರೆ.

ಕಾಲ್ತುಳಿತದಲ್ಲಿ ಬೆಳಗಾವಿಯ ಮತ್ತೋರ್ವ ವ್ಯಕ್ತಿ ಹಾಗೂ ಮಹಿಳೆ ಮೃತಪಟ್ಟಿದ್ದಾರೆ. ಶೆಟ್ಟಿಗಲ್ಲಿಯ ಅರುಣ್ ಕೋಪರ್ಡೆ ಹಾಗೂ ಮಹಾದೇವಿ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಮೂರು ದಿನಗಳ ಹಿಂದೆ ಸಾಯಿರಥ ಟ್ರಾವೆಲ್ ಏಜೆನ್ಸಿ ಮೂಲಕ 13 ಜನರ ತಂಡದಲ್ಲಿ ಅವರು ತೆರಳಿದ್ದರು ಎಂದು ತಿಳಿದು ಬಂದಿದೆ. ಕಾಲ್ತುಳಿತದಲ್ಲಿ ಸರೋಜಿನಿ ನಡುವಿನಹಳ್ಳಿ, ಕಾಂಚನ್ ಕೋಪಾರ್ಡೆ ಸೇರಿದಂತೆ ಇನ್ನೂ ಕೆಲವರು ಗಾಯಗೊಂಡಿದ್ದಾರೆ ಎಂದು ತಿಳಿದುಬಂದಿದೆ.

## ಶಾಲೆಗಳ ಮಕ್ಕಳ ದಾಖಲಾತಿ, ಹಾಜರಾತಿ,

### ಬಿಸಿಯೂಟದಲ್ಲಿನ ಲೋಪ ಗಂಭೀರವಾಗಿ ಪರಿಗಣನೆ :ಕೋಸಂಬೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ:29:ಶಾಲೆಗಳ ಮಕ್ಕಳ ದಾಖಲಾತಿ,ಹಾಜರಾತಿ ಮತ್ತು ಬಿಸಿಯೂಟದಲ್ಲಿನ ಲೋಪವನ್ನು ಗಂಭೀರವಾಗಿ ಪರಿಗಣಿಸಲಾಗುತ್ತದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ



ಶ್ರೀ ಶಶಿಧರ್ ಕೋಸಂಬೆ ಅವರು ಹೇಳಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಏರ್ಪಡಿಸಲಾಗಿದ್ದ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ– 2009ರ ಕುರಿತ ಕಾರ್ಯಗಾರವನ್ನು

(2ನೇ ಪುಟ ನೋಡಿ)

## ಡಿಕೆಶಿ ವಿರುದ್ಧ ಅಕ್ರಮ ಆಸ್ತಿ ಪ್ರಕರಣ: ಸಿಬಿಐ ತನಿಖೆ ಕೋರಿದ್ದ ಯತ್ನಾಳ್‌ಗೆ ಸುಪ್ರೀಂಕೋರ್ಟ್ ತರಾಟೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜ.29: ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧದ ಅಕ್ರಮ ಆಸ್ತಿಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಬುಧವಾರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ತೀವ್ರ ತರಾಟೆಗೆ ತೆಗೆದು- ಕೊಂಡಿದೆ.

ಡಿಕೆಶಿ ವಿರುದ್ಧ ಸಿಬಿಐ ತನಿಖೆಗೆ ನೀಡಿದ್ದ ಅನುಮತಿಯನ್ನು ಹಿಂಪಡೆದಿದ್ದ ಕಾಂಗ್ರೆಸ್ ಸರ್ಕಾರದ ಕ್ರಮ ಪ್ರಶ್ನಿಸಿ

(2ನೇ ಪುಟ ನೋಡಿ)

## ಒಂದೇ ದಿನ ರೈತರಿಬ್ಬರ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 29 : ಸಾಲ ತೀರಿಸಲಾಗದೆ ಮನನೊಂದು ಒಂದೇ ದಿನ ಜಿಲ್ಲೆಯ ಇಬ್ಬರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಭಾಲ್ಕಿ ತಾಲ್ಲೂಕಿನ ಖಾನಾಪೂರದ ಯುವ ರೈತ ಕಾರ್ತಿಕ್ (21) ಹಾಗೂ ಬಸವಕಲ್ಯಾಣ ತಾಲ್ಲೂಕಿನ





ಇಲ್ಲಾಳ ಗ್ರಾಮದ ರೈತ

(2ನೇ ಪುಟ ನೋಡಿ)

## ಕಂದಾಯ ನ್ಯಾಯಾಲಯಗಳಲ್ಲಿ ಸಮರೋಪಾದಿಯಲ್ಲಿ ಪ್ರಕರಣಗಳ ವಿಲೇವಾರಿ:ಸಿಎಂ ಖುಷ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜ.29:ಕಂದಾಯ ನ್ಯಾಯಾಲಯಗಳಲ್ಲಿ ಇರುವ ಪ್ರಕರಣಗಳು ಸಮರೋಪಾದಿಯಲ್ಲಿ ವಿಲೇವಾರಿಯಾಗಿರುವುದನ್ನು ಪರಿಶೀಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂತಸ ವ್ಯಕ್ತಪಡಿಸಿದರು.

ಇಂದು ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣದಲ್ಲಿ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದ ಮುಖ್ಯಮಂತ್ರಿಗಳು ಬರೀ ಪ್ರಮಾಣದ ವಿಲೇವಾರಿ ಸಾಲದು,ಗುಣಮಟ್ಟದ ವಿಲೇವಾರಿ ಆದರೆ ಮಾತ್ರ ಮೇಲ್ಮನವಿಗಳಿಗೆ ಬ್ರೇಕ್ ಬೀಳುತ್ತದೆ. ಈ ದಿಕ್ಕಲ್ಲಿ ಹೆಚ್ಚಿನ ಗಮನ ಹರಿಸುವಂತೆ ಕಂದಾಯ ಇಲಾಖೆಯ ಸಚಿವರಾದ ಕೃಷ್ಣಬೈರೇಗೌಡರಿಗೆ ಸೂಚಿಸಿದರು.

10 ವರ್ಷ, 5 ವರ್ಷ ಕ್ಕೂ ಅಧಿಕ ಅವಧಿಯಿಂದ ಬಾಕಿ ಇದ್ದ ಮುಕ್ಕಾಲು ಪ್ರಕರಣಗಳಿಗೆ ಒಂದೂವರೆ ವರ್ಷದಲ್ಲಿ ಮುಕ್ತಿ ಸಿಕ್ಕಿದೆ ನಮ್ಮ ಸರ್ಕಾರ ಬಂದಾಗ 10 ಸಾವಿರಕ್ಕೂ ಮಿಕ್ಕಿ ಅವಧಿ ಮೀರಿದ ಪ್ರಕರಣಗಳು ಇದ್ದವು. ಈಗ ಕೇವಲ 369 ಪ್ರಕರಣಗಳು ಮಾತ್ರ ತಹಶೀಲ್ದಾರ್ ನ್ಯಾಯಾಲಯಗಳಲ್ಲಿವೆ ಎಂದು ಮುಖ್ಯಮಂತ್ರಿಗಳಿಗೆ ದಾಖಲೆ ಸಮೇತ ಸಚಿವ ಕೃಷ್ಣಬೈರೇಗೌಡ ಅವರು ವಿವರಿಸಿದರು.

ಖಾತೆ ಬದಲಾವಣೆ ಪ್ರಕ್ರಿಯೆಯನ್ನು ಶೇ.65 ಪ್ರಕರಣಗಳಲ್ಲಿ ಒಂದು ದಿನದ ಒಳಗಾಗಿ ಮಾಡಲಾಗುತ್ತಿರುವುದು ಒಳ್ಳೆಯ ಸಂಗತಿ. ಆಟೋ ಮ್ಯುಟೇಶನ್ ಮೂಲಕ ಇದು ಸಾಧ್ಯವಾಗಿದೆ. ಭೂಪರಿವರ್ತನೆ ಸಂಪೂರ್ಣ ಪ್ರಕ್ರಿಯೆಯನ್ನು ಒಂದು ತಿಂಗಳ ಒಳಗಾಗಿ ಪೂರ್ಣಗೊಳಿಸಬೇಕು. ಮಾಸ್ಟರ್ ಪ್ಲಾನ್ ಆದ ಕಡೆ ಮತ್ತೆ ಭೂ ಪರಿವರ್ತನೆ ಅಗತ್ಯವಿಲ್ಲ ಎಂದು ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ಈ ಕುರಿತು ಆದೇಶವನ್ನು ಆದಷ್ಟು ಬೇಗನೆ ಹೊರಡಿಸುವಂತೆ ಸೂಚಿಸಿದರು.

ನಗರಪ್ರದೇಶಗಳಲ್ಲಿನ ಮಾಸ್ಟರ್ ಪ್ಲಾ???ಗಳನ್ನು ಕಾಲದಿಂದ ಕಾಲಕ್ಕೆ ನವೀಕರಿಸಬೇಕು. ಮ್ಯುಟೇಶನ್, ಭೂ ಪರಿವರ್ತನೆ ಪ್ರಕರಣಗಳಲ್ಲಿ ಜನಸಾಮಾನ್ಯರಿಗೆ ಯಾವುದೇ ಕಿರುಕುಳ, ಅನಗತ್ಯ ವಿಳಂಬವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿಗಳು ಖಡಕ್ ಸೂಚನೆ ನೀಡಿದರು.

ಆದಷ್ಟು ಬೇಗನೆ ಮಾಸ್ಟರ್ ಪ್ಲಾನ್ ಸಿದ್ದಪಡಿಸಬೇಕು:

ಕಂದಾಯ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ಆದ್ಯತೆ ಮೇರೆಗೆ ವಿಲೇವಾರಿ ಮಾಡಬೇಕು. ವಿಳಂಬಕ್ಕೆ ಅವಕಾಶ ಇರಬಾರದು. ತಹಶೀಲ್ದಾರ್ ನ್ಯಾಯಾಲಯಗಳಲ್ಲಿ 3 ತಿಂಗಳ ಒಳಗಾಗಿ ಪ್ರಕರಣಗಳ ವಿಲೇವಾರಿ ಮಾಡಬೇಕು.

ಈ ಹಿಂದೆ 10 ಸಾವಿರಕ್ಕೂ ಹೆಚ್ಚು ಅವಧಿ ಮೀರಿದ ಪ್ರಕರಣಗಳು ಇದ್ದವು. ಈಗ ಕೇವಲ 369 ಪ್ರಕರಣಗಳು ಮಾತ್ರ ತಹಶೀಲ್ದಾರ್ ನ್ಯಾಯಾಲಯಗಳಲ್ಲಿವೆ. ಪ್ರಕರಣಗಳ ವಿಲೇವಾರಿ ತ್ವರಿತಗೊಳಿಸುವ ಜತೆಗೆ ನ್ಯಾಯದಾನದ ಗುಣಮಟ್ಟ ಸಹ ಸುಧಾರಿಸಬೇಕು. ಜಿಲ್ಲಾಧಿಕಾರಿ ನ್ಯಾಯಾಲಯಗಳಲ್ಲಿ ಹತ್ತಾರು ವರ್ಷಗಳಿಂದ ಬಾಕಿ ಉಳಿದಿದ್ದ ಪ್ರಕರಣಗಳಲ್ಲಿ ಕೇವಲ ಒಂದು ವರ್ಷದಲ್ಲಿ ಶೇಕಡ 36 ರಷ್ಟು ಪ್ರಕರಣಗಳ ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದರು.

ತಹಶೀಲ್ದಾರ್ –ಜಿಲ್ಲಾಧಿಕಾರಿ ಕೋರ್ಟ್‌ಗಳಲ್ಲಿ ಪ್ರಕರಣಗಳು

(2ನೇ ಪುಟ ನೋಡಿ)

## ಪ್ರತಿ ಕ್ಷೇತ್ರದಲ್ಲಿ ರಾಜ್ಯ ಪ್ರಗತಿ : ರೈಲ್ವೆ ಕ್ಷೇತ್ರದ ಅಭಿವೃದ್ಧಿಗೆ 7,560 ಕೋ.ರೂ ಬಜೆಟ್ ಮೀಸಲು: ಸಚಿವ ವಿ ಸೋಮಣ್ಣ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ :29: ಕರ್ನಾಟಕ ರಾಜ್ಯವು ಪ್ರತಿ ಕ್ಷೇತ್ರದಲ್ಲಿ ಅಭೂತಪೂರ್ವ ಪ್ರಗತಿಯನ್ನು ಕಾಣುತ್ತಿದ್ದು, 2024 –25 ನೇ ಸಾಲಿಗೆ 7,560 ಕೋ.ರೂ ಗಳನ್ನು ರೈಲ್ವೆ ಆಯವ್ಯಯ ಅನುದಾನ ಸಹ ಒದಗಿಸಲಾಗಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವರಾದ ಶ್ರೀ ವಿ. ಸೋಮಣ್ಣ ಅವರು ಹೇಳಿದರು.

ಹಜರತ್ ನಿಜಾಮುದ್ದೀನ್ –ಕೆಎಸ್ ಆರ್ ಬೆಂಗಳೂರು ರಾಜಧಾನಿ ಎಕ್ಸ್‌ಪ್ರೆಸ್ ರೈಲು ,ಯಾದಗಿರಿ ರೈಲ್ವೆ ನಿಲ್ದಾಣದಲ್ಲಿ ಪ್ರಾಯೋಗಿಕವಾಗಿ ನಿಲುಗಡೆ ಕಾರ್ಯಕ್ರಮದ ಅಂಗವಾಗಿ ವಿಡಿಯೋ ಕಾನ್ಫರೆನ್ಸ್ ಮೂಲಕ ಹಸಿರು ನಿಶಾನೆ ತೋರಿ ಚಾಲನೆ ನೀಡುವ ಮೂಲಕ ಅವರು ಮಾತನಾಡಿದರು.

ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿ ಅವರ ಘನ ನೇತೃತ್ವದಲ್ಲಿ ಕರ್ನಾಟಕ ರಾಜ್ಯವು ಎಲ್ಲ ಕ್ಷೇತ್ರಗಳಲ್ಲಿ



ಗಣನೀಯ ಪ್ರಗತಿ ಕಾಣುತ್ತಿದೆ. ವಿಶೇಷವಾಗಿ ರೈಲ್ವೆ ಕ್ಷೇತ್ರದ ಅಭಿವೃದ್ಧಿಗಾಗಿ 2024– 25 ನೇ ಸಾಲಿಗೆ 7,560 ಕೋ.

(2ನೇ ಪುಟ ನೋಡಿ)

# ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ 'ಕಲಾ ಕುಂಭ'



ಮಲ್ಲಮ ನುಡಿ ವಾರ್ತೆ ಬೀದರ. ಜ. 29 : ಪಾಲಕರು ತಮ್ಮ ಮಕ್ಕಳನ್ನು ಉತ್ತಮ ಸಂಸ್ಕಾರ ಕೊಡಬೇಕು. ವಿಶೇಷವಾಗಿ ಮೊಬೈಲ್‌ನಿಂದ ದೂರವಿಡಬೇಕೆಂದು ಬೀದರ ವಿಶ್ವವಿದ್ಯಾಲಯದ ರೆಜಿಸ್ಟ್ರಾರ್ ಶ್ರೀಮತಿ ಸುರೇಖಾ ಸಲಹೆ ನೀಡಿದರು. ಶಾಲೆಯ ಶಿಕ್ಷಕರು ಹಾಗೂ ಟ್ಯೂಶನ್ ಶಿಕ್ಷಕರ ಮೇಲೆ ಅವಲಂಬಿತರಾಗದೆ ಮಕ್ಕಳ ಜವಾಬ್ದಾರಿ ಪಾಲಕರೇ ಹೊರಬೇಕು. ಮಗು ಅಳುತ್ತಿದೆ ಎಂದು ಪದೇ ಪದೇ ಮೊಬೈಲ್ ಕೊಟ್ಟರೆ ಅದು ಮಾನಸಿಕವಾಗಿ ಕುಗ್ಗುತ್ತದೆ. ಮಕ್ಕಳ ಚಲನವಲನದ ಮೌಲ್ಯಮಾಪನ ಪಾಲಕರು ಮಾಡಬೇಕೆಂದು ಪ್ರತಿಪಾದಿಸಿದರು.

ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ಬರುವ ಕರ್ನಾಟಕ ಪಬ್ಲಿಕ್ ಶಾಲೆಯ ವಾರ್ಷಿಕೋತ್ಸವದ ಪ್ರಯುಕ್ತ ಆಯೋಜಿಸಿದ 'ಕಲಾ ಕುಂಭ' ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ದಿವ್ಯ ಸಾನಿಧ್ಯ ವಹಿಸಿದ್ದ ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಶ್ರೀ ಜ್ಯೋತಿರ್ಮಯಾನಂದ ಸ್ವಾಮೀಜಿ ಮಾತನಾಡಿ ಮಕ್ಕಳನ್ನು ಒತ್ತಡದ ಬದುಕಿನಿಂದ ದೂರ ಇಡಬೇಕು. ಅಂಕ ಗಳಿಸುವ ಯಂತ್ರ ಮಾಡದೆ ಸ್ವತಂತ್ರವಾಗಿ ಬೆಳೆಸಬೇಕೆಂದು ಸಲಹೆ ನೀಡಿದರು. ಈ ಹಿಂದೆ ನಮ್ಮ ಪೂರ್ವಜರಲ್ಲಿ ಒತ್ತಡದ ಬದುಕು ಇರಲೇ ಇಲ್ಲ. ಆದರೆ ಇಂದು ಮಕ್ಕಳು ಹಿರಿಯರ ಮಾತು ಕೇಳುವ ಸ್ಥಿತಿಯಲಿಲ್ಲ. ತಾಳ್ಮೆ ಕಳೆದುಕೊಂಡಿದ್ದಾರೆ. ಅದೇ ನಮ್ಮ ಹಿರಿಯರ ರಕ್ತ ನಮ್ಮ ಮೈಯಲ್ಲಿ ಹರಿಯುತ್ತಿದ್ದರೂ ಕೂಡಾ ಹಿಂದಿನ ಸಂಸ್ಕಾರ ಪಾಲಕರು ತಮ್ಮ ಮಕ್ಕಳಿಗೆ ನೀಡುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು. ಸ್ವಾಮಿ ವಿವೇಕಾನಂದರ ಜ್ಞಾನ, ಧೈರ್ಯ ಮತ್ತು ಗುರಿ ತಲುಪುವ ಆದರ್ಶದ ಕನಸು ಇಟ್ಟುಕೊಂಡು ವಿದ್ಯಾರ್ಥಿಗಳು ಮುಂದೆಸಾಗಬೇಕೆಂದು ಪೂಜ್ಯರು ಕಿವಿಮಾತು ಹೇಳಿದರು.

ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ ಮಾತನಾಡಿ ಕರ್ನಾಟಕ ಪಬ್ಲಿಕ್ ಶಾಲೆ ಹಾಗೂ ಮಾಂಟೆಸೋರಿ ಮಕ್ಕಳ ಮನೆಯ ಎಲ್ಲಾ ಶಿಕ್ಷಕರು ಉತ್ತಮ ರೀತಿಯಲ್ಲಿ ಕಲಾ ಕುಂಭ ಸಮಾರಂಭ ಆಯೋಜನೆ ಮಾಡಿದ್ದಾರೆ. ಮಕ್ಕಳ ಶ್ರೇಯೋಭಿವೃದ್ಧಿಗೆ ಬೇಕಾಗುವ ಎಲ್ಲಾ ಸಹಕಾರ ನೀಡಲಾಗುವುದು. ಪಾಲಕರು ತಮ್ಮ ಮಕ್ಕಳನ್ನು ಸಾಮಾಜಿಕ ಜಾಲತಾಣದಿಂದ ದೂರವಿಡಬೇಕು. ಆನ್‌ಲೈನ್ ಗೇಮ್‌ನಿಂದ ಎಚ್ಚರ ವಹಿಸಬೇಕು. ಮಕ್ಕಳನ್ನು ಗುರಿ ತಲುಪಿಸುವ ಕಡೆಗೆ ಸಂಕಲ್ಪತೊಟ್ಟು ಸರಿದಾರಿಯಲ್ಲಿ ಮುನ್ನಡೆಸಬೇಕೆಂದು ತಿಳಿಸಿದರು.

ಮಕ್ಕಳ ದುರ್ಗಾ ಮಾತೆಯ ದುಷ್ಟಶಿಕ್ಷೆ ಶಿಷ್ಟರಕ್ಷಣೆಯ ನೃತ್ಯ, ವಿವಿಧ ಭಕ್ತಿಗೀತೆ ಹಾಗೂ ದೇಶಭಕ್ತಿಗೀತೆಗಳ ಮೇಲೆ ನಡೆದ ಮಕ್ಕಳ ನೃತ್ಯ ಸಭೀಕರ ಗಮನ ಸೆಳೆಯಿತು. ಇದೇ ವೇಳೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಜಂಟಿಕಾರ್ಯದರ್ಶಿ ಶಿವಾನಂದ ಗಾದಗೆ, ಆಡಳಿತ ಮಂಡಳಿ ಸದಸ್ಯರಾದ ವೀರಭದ್ರಪ್ಪ ಭುಯ್ಯಾ, ಸಿದ್ರಾಜ ಪಾಟೀಲ ಕಮಾಲಪುರ, ರವಿ ಹಾಲಹಳ್ಳಿ, ಶ್ರೀನಾಥ ನಾಗೂರೆ, ಧೂಳಪ್ಪ ಪಾಟೀಲ, ಟ್ರಸ್ಟ್ ಕಾರ್ಯದರ್ಶಿ ಮಡಿವಾಳಪ್ಪ ಗಂಗಶೆಟ್ಟಿ, ಟ್ರಸ್ಟಿಗಳಾದ ಪ್ರಭುಶೆಟ್ಟಿ ಮುದ್ದಾ, ಶಾಲೆಯ ಪ್ರಾಚಾರ್ಯರಾದ ಪ್ರಿಯಂಕಾ ಎಸ್ ಪವಾರ್ ಉಪಸ್ಥಿತರಿದ್ದರು. ಶಿಕ್ಷಕಿ ಶ್ರೀವಾಣಿ ದೇಶಮುಖ, ಸ್ವಾಗತಿಸಿದರು. ಶಾಲಿನಿ ಪಾಟೀಲ ನಿರೂಪಿಸಿದರು. ವಾಣಿಶ್ರೀ ವಂದಿಸಿದರು. ಸೇರಿದಂತೆ ಬೋಧಕ ಮತ್ತು ಬೋಧ–ಕೇತರ ಸಿಬ್ಬಂದಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.



ಭಾಲ್ಕಿ: ತಾಲೂಕಿನ ಜ್ಯಾಂತಿ ಗ್ರಾಮಕ್ಕೆ ಬೀದರ ಸಂಸದರಾದ ಶ್ರೀ ಸಾಗರ ಖಂಡ್ರೆ ಗ್ರಾಮಕ್ಕೆ ಭೇಟಿ ನೀಡಿದ ಸಮಯದಲ್ಲಿ ಗ್ರಾಮಸ್ಥರು ಸನ್ಮಾನಿಸಿದರು ಇದೆ ವೇಳೆ ಮಹಾತ್ಮ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷರಾದ ವೈಜೀನಾಥ ಪಾಟೀಲ ನಮ್ಮ ಕರ್ನಾಟಕ ಸೇನೆ ಬೀದರ ಜಿಲ್ಲಾ ಅಧ್ಯಕ್ಷರಾದ ಗಣೇಶ ಪಾಟೀಲ ಜ್ಯಾಂತಿ ಗ್ರಾ ಪಂಚಾಯತ ಮಾಜಿ ಅಧ್ಯಕ್ಷರಾದ ಉಮಾಕಾಂತ ಚಾಕುರೆ ಗ ಪಂಚಾಯತ ಅಭಿವೃದ್ಧಿ ಅಧಿಕಾರಿ ಯೋಗೇಶ್ ಹಿರೇಮಠ ಶಿವಶರಣಪ್ಪ ಪೊಲೀಸ್ ಪಾಟೀಲ ರವಿ ಬಿರಾದಾರ ನಾಗೇಶ್ ಸಿದ್ದವೀರೆ ರಾಜು ತಳವಾಡೆ ಮತ್ತಿತರರು ಇದ್ದರು.

# ಮನೆಯಿಂದ ಹೊರಗಡೆ ಹೋಗಿದ್ದ ಯುವತಿ ನಾಪತ್ತೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 29 : ನಗರದ ಭೀಮನಗರ ನಿವಾಸಿಯಾದ ಆರುತಿ (28) ಎಂಬ ಯುವತಿ ಕಾಣೆಯಾಗಿದ್ದು, ಅವರ ಮಾಹಿತಿ ಸಿಕ್ಕಲ್ಲಿ ತಿಳಿಸಬೇಕು ಎಂದು ಬೀದರ್ ಉಪನಗರ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಉಪ ನಿರೀಕ್ಷಕರು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

ಆರುತಿ ಅವರು ಜ.24 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿದ್ದು, ಅವರು 5 ಅಡಿ ಎತ್ತರವಾಗಿದ್ದು,



ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕಪ್ಪು ಕೂದಲು, ಉದ್ದ ಮುಖ, ಅಗಲ ಹಣೆ ಉಳ್ಳವರಾಗಿದ್ದಾರೆ.

ಕಾಣೆಯಾದ ಸಮಯದಲ್ಲಿ ಮೈಮೇಲೆ ಚಾಕಲೇಟ್ ಕಲರ್ ಚೆಕ್ಸ್ ಚೂಡಿದಾರ, ಸಲವಾರ ಮತ್ತು ಟಾಪ್ ಧರಿಸಿರುವ ಇವರು ಕನ್ನಡ, ಹಿಂದಿ, ಮರಾಠಿ ಭಾಷೆಯಲ್ಲಿ ಮಾತನಾಡುತ್ತಾರೆ ಎಂದು ಮಾಹಿತಿ ನೀಡಿದ್ದಾರೆ.

ಈ ಕಾಣೆಯಾದ ಮಹಿಳೆ ಬಗ್ಗೆ ಸುಳಿವು ಅಥವಾ ಮಾಹಿತಿ ಸಿಕ್ಕಲ್ಲಿ ಬೀದರ್ ನಗರ ಪೊಲೀಸ್ ಠಾಣೆ–ಯ ಪಿ ಎಸ್ ಐ ಮೊಬೈಲ್ ಸಂಖ್ಯೆ: 94808 03445 ಗೆ ಸಂಪರ್ಕಿಸುವಂತೆ ಕೋರಲಾಗಿದೆ.



ಬೀದರ:ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ, ಬೀದರನ ನೂತನ ಅಧ್ಯಕ್ಷರಾಗಿ ಶ್ರೀ ರಾಜಕುಮಾರ ಮಾಳಗೆ ಚುನಾಯಿತರಾಗಿದ್ದಾರೆ ನಿಮಿತ್ಯ ನಂದಿಕಾ ಸಮಾಜ ಸೇವಾ ಸಂಸ್ಥೆ ವತಿಯಿಂದ ಇವರಿಗೆ ಸನ್ಮಾನಿಸಲಾಯಿತು ಈ ಸಂಧರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಸಿದ್ದು ಮನಗೆ ಉಪಾಧ್ಯಕ್ಷರಾದ ರಾಜಕುಮಾರ ದುಗಾನಿ, ಕಾಯದರ್ಶಿಗಳಾದ ಶ್ರೀ ಸಾವನ ಕುಮಾರ ಪಾಟೀಲ್ ಹಾಗೂ ಸಂಸ್ಥೆಯ ಸದಸ್ಯರಾದ ರಮೇಶ ಊಪ್ಪಿ, ಪವನಕುಮಾರ ಪಾಟೀಲ್, ರಾಜು ಬದ್ರಿ, ಸಂತೋಷ ಪಾಟೀಲ್, ಭದ್ರಪ್ಪ ಬೇನಕನಳ್ಳಿಕರ, ಸಾಯಿ ರೆಡ್ಡಿ ಹಾಗೂ ಅನೇಕರು ಉಪಸ್ಥಿತರಿದ್ದರು.

# ಅನುದಾನ ದುರ್ಬಳಕೆ: ಜಿ.ಪಂ. ಸಿಇಒಗೆ ದೂರು



ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 29 : ಬೀದರ್ ತಾಲ್ಲೂಕಿನ ಜನವಾಡ ಗ್ರಾಮ ಪಂಚಾಯಿತಿಯಲ್ಲಿ 15ನೇ ಹಣಕಾಸು ನಿಧಿಯ ಅನುದಾನ ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ದೂರಿದೆ.

ವೇದಿಕೆಯ ಬೀದರ್ ದಕ್ಷಿಣ ಘಟಕದ ಪದಾಧಿಕಾರಿಗಳು ನಗರದಲ್ಲಿ ಸೋಮವಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ಪಿಡಿಒ, ಡಿಇಒ ಹಾಗೂ ಗುತ್ತಿಗೆದಾರ ಸೇರಿಕೊಂಡು ಯಾವುದೇ ಕಾಮಗಾರಿ ಕೈಗೊಳ್ಳದೇ ಅನುದಾನ ಲೂಟಿ ಮಾಡಿದ್ದಾರೆ ಎಂದು ಆಪಾದಿಸಿದರು.

ಏಳು ದಿನಗಳ ಒಳಗೆ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ವೇದಿಕೆಯ ಬೀದರ್ ದಕ್ಷಿಣ ಘಟಕದ ಅಧ್ಯಕ್ಷ ನಿಲೇಶ್ ರಾಠೋಡ್, ಧನರಾಜ ಎನ್. ಚಿಟ್ಟಾವಾಡಿ, ಕರಣ ರಾಠೋಡ್, ಶಿವಕುಮಾರ ಮಾಮುಡಗಿ, ರಾಜಗೊಂಡ, ಸಂತೋಷ್ ಜೆ.ಬಿ. ಇದ್ದರು.

# ಅನಾಮಿಕ ಕರೆಗಳ ಬಗ್ಗೆ ಎಚ್ಚರ ವಹಿಸಿ

ಬೀದರ :ಜ.29: ಭಾಲ್ಕಿ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಾದ ಗರ್ಭಿಣಿ ಬಾಣಂತಿಯರಿಗೆ ಸೈಬರ್ ವಂಚಕರು ದೂರವಾಣಿ ಕರೆ ಮಾಡಿ ಸೈಬರ್ ವಂಚಕರು ನಾವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಕರೆಮಾಡುತ್ತಿರುತ್ತೇವೆ ತಾವು ತಮ್ಮ ಫೋನ ಪೇ ಅಥವಾ ಗೂಗಲ ಪೇ ಸಂಖ್ಯೆಯನ್ನು ನೀಡಿದರೆ ತಮಗೆ ತಮ್ಮ ಖಾತೆಯಲ್ಲಿ 12000 ರೂಪಾಯಿಗಳನ್ನು ನಮ್ಮ ಇಲಾಖೆಯಿಂದ ಪಾವತಿ ಮಾಡುತ್ತೇವೆ ಎಂದು ಮೊಬೈಲ್ ಸಂಖ್ಯೆ: 6383847603, 9241381922, 8252398990 ರಿಂದ ಕರೆ ಮಾಡಿ ಹೇಳುತ್ತಿರುತ್ತಾರೆ. ಫೋನ ಪೇ ನಂಬರ ನೀಡಿದರೆ ಫಲಾನುಭವಿಗಳ ಖಾತೆಯಿಂದ ದುಡ್ಡನ್ನು ಸೆಳೆಯುತ್ತಿರುತ್ತಾರೆ.

ಪ್ರಯುಕ್ತ ಅನಾಮಿಕ ಕರೆಗಳು ಬಂದರೆ ತಮ್ಮ ಮಾಹಿತಿಯನ್ನು ನೀಡಬಾರದು, ಒಂದು ವೇಳೆ ಕರೆ ಬಂದರೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಪರ್ಕಿಸುವಂತೆ ಭಾಲ್ಕಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೆಹಲಿ ಪರೇಡ್‌ನಲ್ಲಿ ಹರ್ಷಾ ವಿಕ್ರಂ ಸಿದ್ದಾರೆಡ್ಡಿ: ಸಂತಸ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 29 : ದೆಹಲಿಯ ಕೆಂಪುಕೋಟೆ ಎದುರು ಇತ್ತೀಚೆಗೆ ನಡೆದ 76ನೇ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಕಲಬುರಗಿ ಮಹಾ ನಗರದ ಅಪ್ಪ ಪಬ್ಲಿಕ್ ಶಾಲೆ 9ನೇ ವಿದ್ಯಾರ್ಥಿನಿ ಹರ್ಷಾ ವಿಕ್ರಂ ಸಿದ್ದಾರೆಡ್ಡಿ ಭಾಗಿಯಾಗಿ ಶಾಲೆ ಹಾಗೂ ಜಿಲ್ಲೆಗೆ ಕೀರ್ತಿಗೆ ತಂದಿದ್ದಕ್ಕಾಗಿ ಅಖಿಲ ಭಾರತೀಯ ವೀರಶೈವ ಮಹಾಸಭೆಯ ಹಿರಿಯ ರಾಷ್ಟ್ರೀಯ ಉಪಾಧ್ಯಕ್ಷೆ ಡಾ ಗುರಮ್ಮ ಸಿದ್ದಾರೆಡ್ಡಿ ಹಾಗೂ ಕಲಬುರಗಿ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥೆ ಡಾ ರಾಜೇಶ್ರೀ ವಿಶ್ವನಾಥ ರೆಡ್ಡಿ ಸಂತಸ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ಮತ್ತು ಗೋವಾ ಡೈರೆಕೊರೇಟ್ ಅನ್ನು ದೆಹಲಿಯಲ್ಲಿ ಪ್ರತಿನಿಧಿಸಿದ ಸಾಜೆಂಟ್ ಹರ್ಷಾ ಸಿದ್ದಾರೆಡ್ಡಿ, ಹಲವು ಸವಾಲು, ಪರೀಕ್ಷೆ, ಸರಣಿ ಶಿಬಿರಗಳಲ್ಲಿ ಭಾಗವಹಿಸಿ ಈ ಸ್ಥಾನಕ್ಕೆ ಏರಿದ್ದಾಳೆ. ಶಿಸ್ತು ಮತ್ತು ಪರಿಶ್ರಮವಲ್ಲದೆ ಸಂವಹನ ಕಲೆ, ಸಾಮಾನ್ಯ ಜ್ಞಾನ, ನಾಯಕತ್ವ, ನೃತ್ಯ ಮತ್ತು ಸಂಗೀತ ಕಲೆ ಹಾಗು ಸ್ಪರ್ಧಾ ಮನೋಭಾವದೊಂದಿಗೆ ಈ ಸ್ಥಾನಕ್ಕೆ ಹೋಗಿದ್ದಾಳೆ.

ಬಹುಮುಖ ಪ್ರತಿಭೆಯನ್ನು ಪರಿಗಣಿಸಲಾಗಿದೆ. 300 ಕೆಡೆಟ್ ಭಾಗವಹಿಸುವ ಶಿಬಿರದಲ್ಲಿ 10 ಕೆಡೆಟ್‌ಗಳನ್ನು ಆಯ್ಕೆ ಮಾಡಲಾಗುತ್ತದೆ. ಅದರಲ್ಲಿ ಹರ್ಷಾ ಸಿದ್ದಾರೆಡ್ಡಿ ಆಯ್ಕೆಯಾಗಿದ್ದಾರೆ. ನಂತರ ಸರಣಿ ಕ್ಯಾಂಪ್ ಗಳಲ್ಲಿ ಆಯ್ಕೆಯಾಗಿ ಗಣರಾಜ್ಯೋತ್ಸವ ಪರೇಡ್ ಆಯ್ಕೆಯಾಗಿ ಗಮನ ಸೆಳೆದಿದ್ದಾಳೆ.

ಕರ್ನಾಟಕ ಮತ್ತು ಗೋವಾ ಡೈರೆಕೊರೇಟ್ ಪ್ರತಿನಿಧಿಸಿದ ಸಾಜೆಂಟ್ ಹರ್ಷಾ ಸಿದ್ದಾ–ರೆಡ್ಡಿ ಉತ್ತಮ ನೃತ್ಯಗಾರ್ತಿ ಮತ್ತು ಉತ್ತಮ ಫೈರಿಂಗ್ ಸಾಮರ್ಥ್ಯ ಬೆಳೆಸಿಕೊಂಡಿದ್ದರು. ಮೂರು ತಿಂಗಳು ಶಾಲೆಗೆ ಹೋಗಲು ಸಾಧ್ಯವಿರದೆ ಎನ್ ಸಿಸಿ ಶಿಬಿರದಲ್ಲಿ ತರಬೇತಿ ಪಡೆಯುವ ಜತೆಗೆ ಅಧ್ಯಯನ ಮಾಡಿದ್ದು, ಗಮನಾರ್ಹ ಸಾಧನೆ. ಇಂತಹ ಅದ್ಭುತ ಸಾಧನೆಗೈದ ಹರ್ಷ ವಿಕ್ರಂ ಸಿದ್ದ ರೆಡ್ಡಿಗೆ ಡಾ ಗುರಮ್ಮ ಸಿದ್ದಾರೆಡ್ಡಿ ಡಾ ವಿಶ್ವನಾಥ ರೆಡ್ಡಿ ಹಾಗೂ ಇಡೀ ಸಿದ್ದಾರೆಡ್ಡಿ ಕುಟುಂಬದ ಸದಸ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

ಎನ್‌ಸಿಸಿಯ ವಿವಿಧ ಹಂತದ ಪರೀಕ್ಷೆ, ಸವಾಲು ಎದುರಿಸಿ ಆಯ್ಕೆಯಾಗಿ ಯಶಸ್ವಿಯಾಗಿ ಪಥ ಸಂಚಲನ ಪೂರ್ಣಗೊಳಿಸಿದ ಹರ್ಷಾ ಸಿದ್ದಾರೆಡ್ಡಿ ಸಾಧನೆಗೆ ತಂದೆ, ಕಲಬುರಗಿ ಯುನೈಟೆಡ್ ಆಸ್ಪತ್ರೆ ಮುಖ್ಯಸ್ಥ ಡಾ. ವಿಕ್ರಂ ಸಿದ್ದಾರೆಡ್ಡಿ, ತಾಯಿ ಡಾ. ವೀಣಾ ಸಿದ್ದಾರೆಡ್ಡಿ ಹರ್ಷ ವ್ಯಕ್ತಪಡಿಸಿ, ಯಶಸ್ಸಿಗೆ ಕಾರಣೀಕರ್ತರಾದ ಎನ್‌ಸಿಸಿ ಸಂಸ್ಥೆ, ಶಾಲೆಯ ಶಿಕ್ಷಕರಿಗೆ ಧನ್ಯವಾದ ತಿಳಿಸಿದ್ದಾರೆ.

# ಸೂರಿನ ನಿರೀಕ್ಷೆಯಲ್ಲಿ ಅಲೆಮಾರಿ ಜನಾಂಗ

ಬೀದರ. ಜ. 29: ಇಂದಲ್ಲ ನಾಳೆ ಸೂರು ಸಿಗಬಹುದೆಂಬ ನಿರೀಕ್ಷೆಯಲ್ಲಿ ಅಲೆಮಾರಿ ಜನಾಂಗದವರು ದಿನ ದೂಡುತ್ತಿದ್ದಾರೆ. ಆದ–ರೆ, ಅಧಿಕಾರಸ್ಥರು ಅವರ ಬೇಡಿಕೆಯನ್ನು ಹೆಚ್ಚು ಗಂಭೀರವಾಗಿ ಪರಿಗಣಿಸಿದಂತಿಲ್ಲ.



ನಗರದ ಚೌಳಿ ಕಮಾನ್ ಬಳಿ ತಾತ್ಕಾಲಿಕ ಟೆಂಟ್‌ಗಳಲ್ಲಿ ಅಲೆಮಾರಿಗಳು ವರ್ಷಗಳಿಂದ ಬದುಕು ನಡೆಸುತ್ತಿದ್ದಾರೆ.

ಗಾಳಿ, ಚಳಿ, ಮಳೆ ಲೆಕ್ಕಿಸದೆ ಜೀವನ ಸಾಗಿಸುತ್ತಿದ್ದಾರೆ. ಸುಮಾರು 30 ವರ್ಷಗಳೇ ಕಳೆದು ಹೋಗಿವೆ. ತಾವು ವಾಸಿಸುವ ಪ್ರದೇಶದ ಸುತ್ತಮುತ್ತ ಅನೇಕ ದೊಡ್ಡ ದೊಡ್ಡ ಕಟ್ಟಡಗಳು ತಲೆ ಎತ್ತಿವೆ. ಅದರಲ್ಲಿ ವಾಸಿಸುವವರೆಲ್ಲರೂ ಉತ್ತಮ ಬದುಕು ನಡೆಸುತ್ತಿದ್ದಾರೆ. ಅಂತಹುದೇ ಬದುಕು ತಮ್ಮದಾಗಬೇಕು, ಮುಖ್ಯವಾಹಿನಿಗೆ ಬರಬೇಕೆಂಬ ಕನಸು ಇವರದು. ಆದರೆ, ಅದು ನನಸಾಗುತ್ತಿಲ್ಲ.

ಭಿಕ್ಷಾಟನೆ, ಚಿಂದಿ ಆಯುವುದು, ಆಟಿಕೆ ಸಾಮಾನು ಮಾರಾಟ, ಕೂಲಿ ಕೆಲಸ ಮಾಡಿಕೊಂಡು ಕನಿಷ್ಠ ಸೌಲಭ್ಯಗಳಿಲ್ಲದೆ ಟೆಂಟ್‌ಗಳಲ್ಲಿ ಬದುಕುತ್ತಿದ್ದಾರೆ. ಸಿಂಧೋಳ, ವಾಘಂಗವಾಡಿ ಜೋಷಿ, ಗೋಂದಳಿ, ಬುಡಬುಡಕಿ, ಘಿಸಾಡಿ ಸೇರಿದಂತೆ ಇತರೆ ಸಮುದಾಯಗಳ ಸುಮಾರು 70ಕ್ಕೂ ಹೆಚ್ಚು ಅಲೆಮಾರಿ ಕುಟುಂಬಗಳಿವೆ. ಕೆಲ ಮಕ್ಕಳು ಶಾಲೆಗೆ ಹೋಗುತ್ತಾರೆ. ಇನ್ನುಳಿದವರಿಗೂ ಹೋಗಬೇಕೆಂಬ ಆಸೆ ಇದೆ. ಆದರೆ, ಅನಿವಾರ್ಯವಾಗಿ ಚಿಂದಿ ಆಯುವುದು ಸೇರಿದಂತೆ ಇತರೆ ಕೆಲಸಕ್ಕೆ ಹೋಗುತ್ತಾರೆ. ಬದುಕಿನಲ್ಲಿ ಯಾವ ಭರವಸೆಯೂ ಈ ಜನಾಂಗದವರಿಗೆ ಉಳಿದಿಲ್ಲ. ಕನಿಷ್ಠ ಸೂರಾದರೂ ಸಿಕ್ಕರೆ ಅದರಲ್ಲಿ ಇರಬಹುದು ಎಂಬ ನಿರೀಕ್ಷೆ ಇವರದು.

ಬೇಸಿಗೆಯಲ್ಲಿ ಉತ್ತಮ ಕಟ್ಟಡಗಳಿರುವ ಮನೆಗಳಲ್ಲೇ ಇರುವುದು ಕಷ್ಟ. ಆದರೆ, ಇವರು ಟೆಂಟ್‌ಗಳಲ್ಲಿ ಕಳೆಯುತ್ತಾರೆ. ಮಳೆಗಾಲ ಬಂತೆಂದರೆ ಪರಿಸ್ಥಿತಿ ಗಂಭೀರವಾಗುತ್ತದೆ. ಮಳೆ ನೀರಿನೊಂದಿಗೆ ಹೊಲಸೆಲ್ಲ ಇವರ ಟೆಂಟಿನೊಳಗೆ ನುಗ್ಗುತ್ತದೆ. ಸುತ್ತಮುತ್ತ ದುರ್ಗಂಧ ಇರುತ್ತದೆ. ಅದರಲ್ಲೇ ಅನಿವಾರ್ಯವಾಗಿ ಕಾಲ ಕಳೆಯಬೇಕು. ಗರ್ಭಿಣಿಯರು, ಬಾಣಂತಿಯರು, ಹಸುಗೂಸುಗಳು, ವಯಸ್ಸಾದವರು ಬಹಳ ಸಮಸ್ಯೆ ಎದುರಿಸುತ್ತಾರೆ. ಇನ್ನು, ಚೌಳಿ ಮುಖ್ಯರಸ್ತೆಯಿಂದ ನಿತ್ಯ ನೂರಾರು ವಾಹನಗಳು ಸಂಚರಿಸುವುದರಿಂದ ದೂಳಿನಿಂದ ಕಂಗೆಟ್ಟಿದ್ದಾರೆ. ಟೆಂಟ್ ತುಂಬೆಲ್ಲಾ ದೂಳು ಆವರಿಸಿಕೊಂಡಿರುತ್ತದೆ. ಅದರಲ್ಲೇ ಮಕ್ಕಳ ಆಟ, ಊಟ, ನಿದ್ರೆ ಮಾಡುತ್ತಾರೆ. ನಿವೇಶನ ಒದಗಿಸಿ ಸೂರು ಕಟ್ಟಿಕೊಟ್ಟರೆ ಕನಿಷ್ಠ ಯಾವ ಆತಂಕವಿಲ್ಲದೆ ರಾತ್ರಿ ಕಳೆಯಬಹುದು ಎನ್ನುವುದು ಅಲೆಮಾರಿಗಳ ಮಾತು.

ಸೂರಿಗಾಗಿ ಅಲೆಮಾರಿಗಳು ಅನೇಕ ಸಲ ಹೋರಾಟ ನಡೆಸಿದ್ದಾರೆ. 2023ರ ಜನವರಿಯಲ್ಲಿ ವಿಶ್ವಕ್ರಾಂತಿ ದಿವ್ಯಪೀಠದ ಅಧ್ಯಕ್ಷ ಓಂಪ್ರಕಾಶ ರೊಟ್ಟೆಯವರು ಜಿಲ್ಲಾಧಿಕಾರಿ ಕಚೇರಿ ಎದುರು ಉಪವಾಸ ನಡೆಸಿದ್ದರು. ಅಂದಿನ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರು ಧರಣಿ ಸ್ಥಳಕ್ಕೆ ದೌಡಾಯಿಸಿ, ಸೂರು ಒದಗಿಸುವ ಭರವಸೆ ಕೊಟ್ಟಿದ್ದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ, ಹಾಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೂ ಮನವಿ ಸಲ್ಲಿಸಿದ್ದಾರೆ. ಆದರೆ, ಯಾವುದೇ ಪ್ರಯೋಜನವಾಗಿಲ್ಲ.

'ಅಲೆಮಾರಿಗಳ ಸೂರಿನ ಸಮಸ್ಯೆ ಬಗೆಹರಿಸಿ ಅವರಿಗೆ ನೆಲೆ ಒದಗಿಸಲಾಗುವುದು ಎಂದು ಜಿಲ್ಲಾಡಳಿತ ವರ್ಷದ ಹಿಂದೆ ಭರವಸೆ ನೀಡಿತ್ತು. ಆದರೆ, ಇದುವರೆಗೆ ಅದು ಕಾರ್ಯರೂಪಕ್ಕೆ ಬಂದಿಲ್ಲ. ಅವರಿಗೆ ಪರಿಹಾರ ಸಿಗುವವರೆಗೆ ಹೋರಾಟ ಮುಂದುವರೆಯಲಿದೆ. ಶೀಘ್ರದಲ್ಲೇ ಮುಂದಿನ ಹೋರಾಟದ ಕುರಿತು ಸಭೆ ನಡೆಸಿ ತೀರ್ಮಾನಿಸಲಾಗುವುದು' ಎಂದು ಓಂಪ್ರಕಾಶ ರೊಟ್ಟೆ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಏನಂತಾರೆ?

'ಅಲೆಮಾರಿಗಳಿಗೆ ಸೂರು ಒದಗಿಸಲು ಜಾಗ ಗುರುತಿಸಲಾಗಿದೆ. ಆದರೆ ಅವರು ನಗರದ ಮಧ್ಯಭಾಗದಲ್ಲಿಯೇ ನಿವೇಶನ ಕೊಡಬೇಕೆಂದು ಕೇಳುತ್ತಿದ್ದಾರೆ. ನಗರದ ಮಧ್ಯಭಾಗದಲ್ಲಿರುವ ಜಮೀನು ಬಹಳ ಬೆಲೆಬಾಳುವಂತಹದು ಅದು ಕೊಡುವುದು ಕಷ್ಟವಾಗುತ್ತದೆ. ಹೀಗಾಗಿಯೇ ಇಷ್ಟರಲ್ಲಿಯೇ ಅವರನ್ನು ಕರೆದು ಸಭೆ ನಡೆಸಿ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತೇವೆ' ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಪ್ರತಿಕ್ರಿಯಿಸಿದ್ದಾರೆ.

# ಕಡಲೆ ಕಾಳು ಕನಿಷ್ಠ ಬೆಂಬಲ ಬೆಲೆಯ ಸದುಪಯೋಗ ಪಡೆದುಕೊಳ್ಳಲು ಮನವಿ

ಬೀದರ ಜ.29: 2024–25ನೇ ಸಾಲಿಗೆ ಭಾರತ ಸರ್ಕಾರವು ಘೋಷಿಸಿರುವ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೀದರ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ರೈತರು ಬೆಳೆದಿರುವ ಈಂಕಿ ಗುಣಮಟ್ಟದ ಕಡಲೆ ಕಾಳನ್ನು ಪ್ರತಿ ಕ್ವಿಂಟಾಲಿಗೆ ರೂ. 5650 ದರದಲ್ಲಿ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ರೈತರಿಂದ ಖರೀದಿಸಲು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಬೆಂಗಳೂರನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿ, ರಾಜ್ಯ ಸರ್ಕಾರ ಆದೇಶಿಸಿರುತ್ತದೆ. ಈ ಆದೇಶದನ್ವಯ ಮಾನ್ಯ ಜಿಲ್ಲಾಧಿಕಾರಿಗಳು ಬೀದರ ಹಾಗೂ ಅಧ್ಯಕ್ಷರು ಜಿಲ್ಲಾ ಟಾಸ್ಕಫೋರ್ಸ್ ಸಮಿತಿ ಬೀದರ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಗಳ ಪ್ರಕಾರ ಬೀದರ ಜಿಲ್ಲೆಯಲ್ಲಿ ಒಟ್ಟು 85 ಖರೀದಿ ಕೇಂದ್ರಗಳನ್ನು ಈಂಕಿ ಗುಣಮಟ್ಟದ ಕಡಲೆ ಕಾಳನ್ನು ಒಖಕ ದರದಲ್ಲಿ ರೈತ–ರಿಂದ ಖರೀದಿಸಲು ತೆರೆಯಲಾಗಿದೆ. ರಾಜ್ಯ ಸರ್ಕಾರದ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಿದೆ. ಖರೀದಿ ಪ್ರಕ್ರಿಯೆಯಲ್ಲಿ ರೈತರು ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲನಂತೆ ಹಾಗೂ ಪ್ರತಿ ರೈತರಿಗೆ ಗರಿಷ್ಠ 20 ಕ್ವಿಂಟಾಲನಂತೆ ಈಂಕಿ ಗುಣಮಟ್ಟದ ಕಡಲೆ ಕಾಳು ಮಾರಾಟ ಮಾಡಬಹುದಾಗಿದೆ.

# ಮೈಕ್ರೋ ಫೈನಾನ್ಸ್‌ದಾರರ ಸಭೆ

## ಸಾಲ ವಸೂಲಿಗೆ ಕಿರುಕುಳ ನೀಡಿದರೆ ಕ್ರಮ:ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ಮೈಕ್ರೋ ಫೈನಾನ್ಸ್, ಹಣಕಾಸು ಸಂಸ್ಥೆ ಹಾಗೂ ಲೇವಾದೇವಿಗಾರರು ಸಾಲವಸೂಲಾತಿಯಲ್ಲಿನಿಯಮ ಬಾಹಿರವಾಗಿನಡೆದುಕೊಂಡಲ್ಲಿ ಅಂತವರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದಮೈಕ್ರೋಫೈನಾನ್ಸ್‌ದಾರರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದಅವರು,ಸಾಲಗಾರರ ಜೊತೆ ಮಾನವೀಯತೆಯಿಂದ ನಡೆದುಕೊಳ್ಳುವದನ್ನು ಕಲಿಯಬೇಕು. ಕೇವಲ ವ್ಯಾಪಾರದ ದೃಷ್ಟಿಯಿಂದ ನಡೆದುಕೊಂಡಿದ್ದು ಕಂಡುಬಂದಲ್ಲಿ ದೂರು ಬರದೇ ಇದ್ದರೂ ಸೋಮೋಟೋ ಕೇಸ್ ದಾಖಲಿಸಿ ಕಾನೂನು ರೀತಿಯಲ್ಲಿ ಕ್ರಮಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು.

ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಸೇರಿದಂತೆ ಇತರೆ ಯಾವುದೇ ಹಣಕಾಸು ಸಂಸ್ಥೆಯವರು ಸಾಲ ವಸೂಲಾತಿಯಲ್ಲಿ ಕಿರುಕುಳ ನೀಡಿದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ಮೊಬೈಲ್ ಸಂ–ಖ್ಯೆ 9480803900ಗೆ ಕರೆ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಭಾರತೀಯ ರಿಜರ್ವ ಬ್ಯಾಂಕ್ ನಿಯಮದ ಪ್ರಕಾರ ವ್ಯವಹಾರ ನಡೆಸಬೇಕು. ಸಾಲದ ಕಾರಣಕ್ಕೆ ಜೀವಹಾನಿ ಆಗಬಾರದು. ಕಾನೂನು ಚೌಕಟ್ಟಿನಡಿ ವಸೂಲಾತಿ ಆಗಬೇಕೇ ಹೊರತು ಯಾವುದೇ ರೀತಿಯಲ್ಲಿ ಸಾಲಗಾರರಿಗೆ ತೊಂದರೆ ಕೊಡಬಾರದು. ಒಂದು ವೇಳೆ ಈ ಬಗ್ಗೆ ದೂರು ಬಂದಲ್ಲಿ ಕ್ರಮ ಜರುಗಿಸಲಾಗುತ್ತದೆ. ಸಾಮರ್ಥ್ಯಕ್ಕೆ ಅನುಗುಣವಾಗಿ ಸಾಲ ವಿತರಣೆ ಮಾಡಬೇಕು. ನಿಯಮ ಮೀರಿ ಸಾಲ ನೀಡಿ ಸಾಲಗಾರರ ಮೇಲೆ ದಬ್ಬಾಳಿಕೆ ನಡೆಸಿದಲ್ಲಿ ಅದಕ್ಕೆ ನಿಮ್ಮನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದೆಂದು ಜಾನಕಿ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಹಣಕಾಸು ಸಂಸ್ಥೆಗಳು ಜಿಲ್ಲೆಯ ಜನತೆಯ ಜೊತೆ ವ್ಯವಹಾರ ಮಾಡುವ ಮೊದಲು ಹಣಕಾಸಿನ ವ್ಯವಹಾರದ ಬಗ್ಗೆ ತಿಳಿದುಕೊಂಡು ಕೆಲಸ ಮಾಡಬೇಕು. ಯಾರಿಗೆ ಸಾಲ ಕೊಡಬೇಕು. ಯಾರಿಗೆ ಸಾಲ ಕೊಡಬಾರದು ಎಂಬುದನ್ನು ಮೊದಲು ಅರಿಯಬೇಕು. ಬೇರೆ ಬೇರೆ ಮೈಕ್ರೋ ಫೈನಾನ್ಸ್‌ದವರು ಜಿಲ್ಲೆಯ ಗ್ರಾಹಕರ ಜೊತೆ ವ್ಯವಹಾರ ಮಾಡಬೇಕಾದಲ್ಲಿ ಮಾಹಿತಿ ಇಲ್ಲದೇ ವ್ಯವಹಾರ ಮಾಡುವಂತಿಲ್ಲ ಎಂದು ತಿಳಿಸಿದರು.

ಸಾಲ ಕೊಟ್ಟ ಮೇಲೆ ಹೇಗೆ ವಸೂಲಾತಿ ಮಾಡಬೇಕೆಂಬುದಕ್ಕೆ ನಿಯಮ ಇದೆ. ವಸೂಲಾತಿ ಮಾಡುವ ನಿಟ್ಟಿನಲ್ಲಿ ಗ್ರಾಹಕರಿಗೆ ತೊಂದರೆನೀಡಿದಲ್ಲಿನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುತ್ತದೆ. ಗ್ರಾಹಕರ ಜೊತೆ ವಿನಯದಿಂದ ನಡೆದುಕೊಳ್ಳಬೇಕು ಎಂದರಲ್ಲದೇ, ಸಾಲ ವಸೂಲಾತಿಯಲ್ಲಿ ನಿಯಮ ಬಾಹಿರವಾಗಿರುವ ಬಗ್ಗೆ ಈಗಾಗಲೇ ಒಂದು ಪ್ರಕರಣ ದಾಖಲಾಗಿದೆ. ದೂರು ಬರದೇ ಇದ್ದರೂ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿ ಕ್ರಮ ಜರುಗಿಸಲಾಗುವುದೆಂದು ಎಸ್‌ಪಿ ತಿಳಿಸಿದರು.

ಜಿಲ್ಲಾ ಅಗ್ರಣಿ ಬ್ಯಾಂಕಿನ ವ್ಯವಸ್ಥಾಪಕ ರಾಜಕುಮಾರ ಹೂಗಾರ ಹಾಗೂ ಸಹಕಾರಿ ಸಂಘಗಳ ಉಪನಿಬಂಧಕ ದ್ಯಾನಯ್ಯ ಹಿರೇಮಠ ಅವರು ವಿವಿಧ ಹಣಕಾಸು ಸಂಸ್ಥೆಗಳ ಮಾಹಿತಿ ಹಾಗೂ ಅವರು ನಡೆಸುವ ವ್ಯವಹಾರದ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಬಾಗಲಕೋಟೆ ಸಹಾಯಕ ನಿಬಂಧಕ ಮಹಾದೇವ ಕುಂಬಾರ, ಜಮಖಂಡಿ ಸಹಾಯಕ ನಿಬಂಧಕ ರಾಮನಗೌಡ ಪಾಟೀಲ ಸೇರಿದಂತೆ ಜಿಲ್ಲೆಯಲ್ಲಿರುವ ಮೈಕ್ರೋ ಫೈನಾನ್ಸ್‌ದಾರರು, ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳು, ಗಿರವಿದಾರರು ಉಪಸ್ಥಿತರಿದ್ದರು.

## ಕೂಡಲಸಂಗಮದಲ್ಲಿ ಫೆ.1-2 ರಂದು ಹಂಡೆವಜೀರ ಸಮಾವೇಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಹಂಡೆವಜೀರ ಸಮಾಜ ಮತ್ತು ಕಲಬುರಗಿ ಚಾಲುಕ್ಯ ಸಂಸ್ಕೃತಿ ಅಧ್ಯಯನ ಪೀಠದ ಸಹಯೋಗದಲ್ಲಿ ಜಿಲ್ಲೆಯ ಕೂಡಲಸಂಗಮದಲ್ಲಿ ಫೆಬ್ರವರಿ 1 ಹಾಗೂ 2 ರಂದು ರಾಜ್ಯ ಮಟ್ಟದ 3ನೇ ಬೃಹತ್ ಸಮಾವೇಶ ಆಯೋಜಿಸಲಾಗಿದೆ ಎಂದು ಚಾಲುಕ್ಯ ಸಂಸ್ಕೃತಿ ಅಧ್ಯಯನ ಪೀಠದ ಅಧ್ಯಕ್ಷ ಜಿ.ಎನ್.ಪಾಟೀಲ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೂಡಲ ಸಂಗಮದ ಅನುಭವ ಮಂಟಪದಲ್ಲಿ ಫೆ.1 ರಂದು ಬೆಳಿಗ್ಗೆ 10 ಗಂಟೆಗೆ ವಿಚಾರ ಸಂಕಿರಣವನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಉದ್ಘಾಟಿಸುವರು. ನಿಡುಮಾಮಿಡಿ ವೀರಭದ್ರಚನ್ನಮಲ್ಲದೇಶಿಕೇಂದ್ರ ಸ್ವಾಮೀಜಿ, ಕೊಟ್ಟೂರು ಬಸವಲಿಂಗ ಸ್ವಾಮೀಜಿ, ಚಿತ್ತರಗಿ ಗುರುಮಹಾಂತ ಶ್ರೀಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಇತಿಹಾಸ ಅಕಾಡೆಮಿ ಅಧ್ಯಕ್ಷ ಡಾ.ದೇವರಕೊಂಡಾರೆಡ್ಡಿ, ಬವಿವಿ ಸಂಘದ ಆಡಳಿತಾಧಿಕಾರಿ ಡಾ.ವಿ.ಎಸ್.ಕಟಗಿಹಳ್ಳಿಮಠ ಆಗಮಿಸಲಿದ್ದು, ತೋಟಗಾರಿಕೆ ವಿವಿ ಕುಲಸಚಿವರು ಹಾಗೂ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರ ಆಯುಕ್ತರಾದ ಮಹಾದೇವಪ್ಪ ಮುರಗಿ ಉಪಸ್ಥಿತರಿರುವರು ಎಂದು ಪಾಟೀಲ ಹೇಳಿದರು.

ಹಂಡೆ ಅರಸರ ಆಕರಗಳು, ಹಂಡೆ ಅರಸರ ಅಭಿವೃದ್ಧಿ ಚಿಂತನೆಗಳು, ಹಂಡೆ ಅರಸರ ಪ್ರಕಟಿತ ಕೃತಿಗಳ ಪರಾಮರ್ಶೆ, ಹಂಡೆ ವಜೀರ ಜನಾಂಗದ ಅನನ್ಯತೆ ಕುರಿತು ವಿಚಾರ ಸಂಕಿರಣ ಜರುಗಲಿವೆ ಎಂದರು.

ಫೆ.2 ರಂದು ಬೆಳಿಗ್ಗೆ 10 ಗಂಟೆಗೆ ಸಮಾವೇಶವನ್ನು ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದು, ಸಕ್ಕರೆ ಸಚಿವ ಶಿವಾನಂದ ಪಾಟೀಲ ಹಂಡೆ ಅರಸರ ಭಾವಚಿತ್ರ ಅನಾವರಣಗೊಳಿಸುವರು. ಗದುಗಿನ ತೋಂಟದಾರ್ಯ ಸಿದ್ಧರಾಮ ಸ್ವಾಮೀಜಿ, ಸಾನಿಧ್ಯ ವಹಿಸುವರು. ಸಂಸದರಾದ ರಮೇಶ ಜಿಗಜಿಣಗಿ, ಪಿ.ಸಿ.ಗದ್ದಿಗೌಡರ, ಶಾಸಕ ನಾರಾ ಭರತ–ರೆಡ್ಡಿ ಉಪಸ್ಥಿತರಿರುವರು. ಅಧ್ಯಕ್ಷತೆಯನ್ನು ವೀರಶೈವ ಲಿಂಗಾಯತ ಹಂಡೆ ವಜೀರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಡಾ.ಎಸ್.ಎಸ್.ಪಾಟೀಲ ವಹಿಸಲಿದ್ದಾರೆ ಎಂದು ಜಿ.ಎನ್.ಪಾಟೀಲ ತಿಳಿಸಿದರು.

ಮಾಜಿ ಸಚಿವ ಎಸ್.ಆರ್.ಪಾಟೀಲ, ಮಾಜಿ ಶಾಸಕ ವೀರಣ್ಣ ಚರಂತಿಮಠ, ಶಾಸಕರಾದ ವಿಜಯಾನಂದ ಕಾಶಪ್ಪನವರ, ಬಸನಗೌಡ ಪಾಟೀಲ ಯತ್ನಾಳ, ಜೆ.ಟಿ.ಪಾಟೀಲ, ಸಿ.ಎಸ್.ನಾಡಗೌಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಯಶವಂತರಾಯನಗೌಡ ಪಾಟೀಲ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ಹನಮಂತ ನಿರಾಣಿ ಸೇರಿದಂತೆ ಅನೇಕ ಗಣ್ಯರು ಹಂಡೆ ಅರಸು ಮನೆತನದ ಸಾಂಸ್ಕೃತಿಕ ಅಧ್ಯಯನ, ಶಾಸನಗಳು, ಪರಂಪರೆ, ಐತಿಹಾಸಿಕ ಕಥೆಗಳು ಸೇರಿ 25 ಗ್ರಂಥಗಳ ಲೋಕಾರ್ಪಣೆ ನಡೆಯಲಿದೆ. ರಾಷ್ಟ್ರೀಯ ಹಂಡೆಸಿರಿ ಪ್ರಶಸ್ತಿ, ಗ್ರಂಥ ಪುರಸ್ಕಾರ, ಸಮಾಜದ ಸಾಧಕರು, ಪಿಎಚ್‌ಡಿ ಪದವಿ ಪಡೆದ ಸಮಾಜದ ಸಂಶೋಧಕರಿಗೆ ಸನ್ಮಾನಿಸಲಾಗುವುದು. ನಂತರ ಸಮಾರೋಪ ಸಮಾರಂಭ ಜರುಗಲಿದೆ ಎಂದು ಜಿ.ಎನ್.ಪಾಟೀಲ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯಾಧ್ಯಕ್ಷ ಎಸ್.ಎಸ್.ಪಾಟೀಲ, ಪ್ರಧಾನ ಕಾರ್ಯದರ್ಶಿ ಆರ್.ಎಸ್.ಪಾಟೀಲ, ಉಪಾಧ್ಯಕ್ಷ ಎಸ್.ಬಿ.ಬಳವಾಟ ಉಪಸ್ಥಿತರಿದ್ದರು.

## ರಾಮುಲು ವಿರುದ್ಧ ರೆಡ್ಡಿ ಹೇಳಿಕೆಗೆ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ಮಾಜಿ ಸಚಿವ ಶ್ರೀರಾಮುಲು ಅವರ ಬಗ್ಗೆ ಶಾಸಕ ಗಾಲಿ ಜನಾರ್ಧನ ರೆಡ್ಡಿ ಅವಹೇಳನಕಾರಿಯಾಗಿ ಮಾತನಾಡಿರುವುದನ್ನು ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜ ಹಾಗೂ ಶ್ರೀರಾಮುಲು ಅಭಿಮಾನಿ ಬಳಗ ಖಂಡಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಾಲ್ಮೀಕಿ ಸಮಾಜದ ಪ್ರಕಾಶ ನಾಯ್ಕರ, ರೆಡ್ಡಿ ಅವರು ಶ್ರೀರಾಮುಲು ಹಾಗೂ ವಾಲ್ಮೀಕಿ ಸಮಾಜದ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

ಭಾರತೀಯ ಜನತಾ ಪಕ್ಷದ ಸಂಘಟನೆಯಲ್ಲಿ ಶ್ರೀರಾಮುಲು ಅವರದ್ದು ದೊಡ್ಡ ಕೊಡುಗೆಯಿದೆ. ರೆಡ್ಡಿ ರಾಜಕೀಯ ಭವಿಷ್ಯವನ್ನು ಸಹ ರಾಮುಲು ರೂಪಿಸಿದ್ದಾರೆ ಎಂದ ನಾಯ್ಕರ, ರಾಮುಲು ವಿರುದ್ಧ ರೆಡ್ಡಿ ಈ ರೀತಿ ಮಾತನಾಡಿದರೂ ಪಕ್ಷದ ಮುಖಂಡರು ಮೌನವಾಗಿರುವುದು ಸರಿಯಲ್ಲ. ಬಿಜೆಪಿಗೆ ವಾಲ್ಮೀಕಿ ಸಮಾಜದ ಬೆಂಬಲ ಬೇಡವೇ ಎಂದು ಪ್ರಶ್ನಿಸಿದರು.

ಸಮಾಜದ ಪ್ರಮುಖರಾದ ರಾಮಣ್ಣನಾಯ್ಕರ, ಹನಮಂತಪ್ಪ ತಳವಾರ, ಎಂ.ವಾಯ್.ಪಡವಾಣಿ ಇದ್ದರು.

## ಚಾಂದ್ ಫೌಂಡೇಶನ್‌ದಿಂದ ತಪಶೆಟ್ಟಿ, ಪಾಟೀಲ ಸತ್ಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ನಗರದ ಬಸವೇಶ್ವರ ಬ್ಯಾಂಕಿನ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಪ್ರಕಾಶ ತಪಶೆಟ್ಟಿ ಹಾಗೂ ಮೆಡಿಕಲ್ ಕಾಲೇಜು ಪ್ರಾರಂಭಿಸಿರುವ ಮಾಜಿ ಸಚಿವ ಎಸ್.ಆರ್.ಪಾಟೀಲ ಅವರನ್ನು ನವನಗರದ ಚಾಂದ್ ಫೌಂಡೇಶನ ವತಿಯಿಂದ ಚಾಂದ್ ನದಾಫ್ ಸತ್ಕರಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಆರ್.ಪಾಟೀಲ, ಚಾಂದ್ ನದಾಫ್ ಒಬ್ಬ ಸಾಮಾನ್ಯ ವ್ಯಕ್ತಿಯಾಗಿ ಬೆಳೆದು ಬಡವರ ಕಷ್ಟಗಳನ್ನು ಅರಿತವರು. ಸಾಮಾಜಿಕ ಕಾರ್ಯಗಳಲ್ಲಿ ತೊಡಗುವುದಲ್ಲದೇ ತನ್ನ ತಾಯಿಯ ಹುಟ್ಟುಹಬ್ಬವನ್ನು ವಿಶಿಷ್ಟವಾಗಿ ಆಚರಿಸಿ ಮಕ್ಕಳಿಂದ ದೂರಾದ ಮತ್ತು ಮಕ್ಕಳನ್ನು ಕಳೆದುಕೊಂಡಂತತಾಯಿಂದರನ್ನು ಗೌರವಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಬಸವೇಶ್ವರ ಬ್ಯಾಂಕ್ ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಮಾತನಾಡಿ, ಚಾಂದ್ ನದಾಫ್ ಉತ್ತಮ ಸಂಘಟನಾ ಕಾರ್ಯ ಮಾಡುತ್ತಾತಾನೂ ಬದುಕಬೇಕು. ಕಷ್ಟದಲ್ಲಿದ್ದವರೂ ಬದುಕಬೇಕೆಂಬ ಧ್ಯೇಯ ಹೊಂದಿದವರು. ತನ್ನ ದುಡಿಮೆಯಲ್ಲಿಯೇ ಬಡವರು, ರೋಗಿಗಳಿಗೆ ಸಹಾಯ ಮಾಡುವದಲ್ಲದೇ ಜಾತಿ, ಮತ ಪಂಥಗಳನ್ನದೇ ದೇವಸ್ಥಾನಗಳಿಗೆ ಮಸೀದಿಗಳಿಗೆ ಕಾಣಿಕೆ ನೀಡುತ್ತಿದ್ದಾರೆ ಎಂದು ಹೇಳಿದರು.

ಅನವಾಲದ ಕೈಲಾಸಪತಿ ಸ್ವಾಮೀಜಿ, ನದಾಫ–ಪಿಂಜಾರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಎಸ್.ಎಚ್. ಮುದಕವಿ, ಖಾದೀರಸಾಬ ಹುಬ್ಬಳ್ಳಿ, ಮುನೀರಸಾಬ ಮುರನಾಳ, ಉಸ್ಮಾನಸಾಬ ಬೇವೂರ, ಅಲ್ಲಾಮಾ ನದಾಫ ಇದ್ದರು.

## ಕುಡಿಯಲು ಫ್ಲೋರೈಡ್ ಮುಕ್ತ ನೀರು ಬಳಸಿ:ಅಂಗಡಿ



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಜ.29:ಫ್ಲೋರೈಡ ಯುಕ್ತನೀರಿನ ಬಳಕೆಯಿಂದಾಗಿ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗಲಿದ್ದು, ಫ್ಲೋರೈಡ್ ಮುಕ್ತ ನೀರನ್ನು ಕುಡಿಯುಲು ಬಳಕೆ ಮಾಡಬೇಕು ಎಂದು ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎಸ್.ಅಂಗಡಿ ತಿಳಿಸಿದರು.

ಶಿರೂರಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ಮಂಗಳವಾರ ಹೊನ್ನಾಕಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ರಾಷ್ಟ್ರೀಯ ಫ್ಲೋರೋಸಿಸ್ ನಿಯಂತ್ರಣ ಮತ್ತು ತಡೆಗಟ್ಟುವ ಕುರಿತು ಶಾಲಾ ಮಕ್ಕಳಿಗೆ ಆರೋಗ್ಯ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೇವಿಸುವ ಆಹಾರ ಮತ್ತು ಕುಡಿಯುವ ನೀರಿನಲ್ಲಿ ಫ್ಲೋ–ರೈಡ್ ಪ್ರಮಾಣ ಅವಶ್ಯಕತೆಗಿಂದ ಹೆಚ್ಚಿಗಿದ್ದಲ್ಲಿ ಫ್ಲೋರೈಸಿಸ್ ಉಂಟಾಗುತ್ತದೆ. ಇದು ವ್ಯಕ್ತಿಯ ಹಲ್ಲುಗಳ ಮೇಲೆ ಹಳದಿ ಕಂದು ಬಣ್ಣ ಕಾಣುತ್ತದೆಯಲ್ಲದೇ, ಎಲುವು, ಕೀಲುಗಳಲ್ಲಿ ನೋವು ಕಾಣಿಸಿಕೊಂಡು ಬಾಧಿಸುತ್ತದೆ. ಹೀಗಾಗಿ ಫ್ಲೋರೈಡಯುಕ್ತ ನೀರು ಬಳಸುವುದು ಸೂಕ್ತ ಎಂದು ಅಂಗಡಿ ಹೇಳಿದರು.

ಶಾಲೆಯ ಮುಖ್ಯಗುರುಮಾತೆ ಎಮ್.ಎನ್.ಬಿರಾದಾರ, ಶಿಕ್ಷಕಿಂ–ಯರಾದ ಎಸ್.ಜಿ.ಪಾಟೀಲ, ಅಶ್ವಿನಿ ಹಿರೇಮಠ, ಧೀರೇಂದ್ರ ಪೂಜಾರಿ ಫ್ಲೋರೋಸಿಸ್ ತಡೆಗೆ ವೈಜ್ಞಾನಿಕ ಮಾಹಿತಿಯುಳ್ಳ ಕರಪತ್ರ ಬಿಡುಗಡೆ ಮಾಡಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು, ಶಿಕ್ಷಕರು, ಆಶಾ ಕಾರ್ಯಕರ್ತರು, ಬಿಸಿಯೂಟದ ಸಿಬ್ಬಂದಿ, ಶಾಲಾ ಮಕ್ಕಳು ಭಾಗವಹಿಸಿದ್ದರು.

## ಯುವಕರು ಮತದಾನದ ಮಹತ್ವ ತಿಳಿಯಬೇಕು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ಮತದಾನದ ಮಹತ್ವವನ್ನು ಯುವಸಮುದಾಯ ಅರಿತುಕೊಳ್ಳುವುದರ ಜೊತೆ–ಗೆ ಉಳಿದವರಿಗೂ ಅದರ ಮನವರಿಕೆ ಮಾಡಿಕೊಡುವ ಕೆಲಸವನ್ನು ಮಾಡಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಹಾಗೂ ರಾಜ್ಯಶಾಸ್ತ್ರ ವಿಭಾಗ ಆಯೋಜಿಸಿದ್ದ 'ರಾಷ್ಟ್ರೀಯ ಮತದಾರರ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮತದಾನ ಮಾಡುವುದು ಒಂದು ಕರ್ತವ್ಯವೆಂದು ಭಾವಿಸಿ, ಯಾವುದೇ ಆಸೆ, ಆಮಿಷಗಳಿಗೆ ಒಳಗಾಗದೇ ಅದನ್ನು ಜಾಗೃತೆಯಿಂದ ಮಾಡಬೇಕು. ಯೋಗ್ಯ ಜನಪ್ರತಿನಿಧಿಗಳನ್ನು ಆರಿಸುವಂತಹ ಈ ಮತದಾನದ ಪ್ರಕ್ರಿಯೆಯಲ್ಲಿ ಯುವಕರು ಉತ್ಸಾಹದಿಂದ ಭಾಗವಹಿಸಬೇಕು ಎಂದು ನರಗುಂದ ಹೇಳಿದರು.

ಉಪನ್ಯಾಸಕಿ ಶ್ವೇತಾ ಕುಲಕರ್ಣಿ ಪ್ರಾರ್ಥಿಸಿದರು. ಐಕ್ಯೂಎಸಿ ಸಂಯೋಜಕ ಡಾ.ಎಸ್.ಎಸ್. ಹಂಗರಗಿ ಸ್ವಾಗತಿಸಿದರು. ಉಪನ್ಯಾಸಕಿ ಕೀರ್ತಿ ದಾಸರ ಪ್ರತಿಜ್ಞಾವಿಧಿ ಬೋಧಿಸಿದರು. ವಿದ್ಯಾರ್ಥಿ ಪ್ರಧಾನ ಕಾರ್ಯದರ್ಶಿ ಶ್ರವಣಾ ಸಿದ್ನಾಳ ವಂದಿಸಿದರು. ಉಪನ್ಯಾಸಕಿ ಸವಿತಾ ಜೇವೂರ ನಿರೂಪಿಸಿದರು. ಉಪನ್ಯಾಸಕರಾದ ಎನ್.ಎಚ್.ಹವಾಲ್ದಾರ, ನಮಿತಾ ನಾಯಕ, ಮೈತ್ರೇಯಿ ಗುಡೂರ, ಆರ್.ಎಸ್.ಚವ್ಹಾಣ ಇದ್ದರು.

## ನಾಳೆ ಪರಿವರ್ತನಾ ವಿದ್ಯಾ ಮಂದಿರ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ತಾಲೂಕಿನ ವೀರಾಪುರ ಪುನರ್ವಸತಿ ಕೇಂದ್ರದಲ್ಲಿರುವ ಡಾ.ವಿಷ್ಣುಜೀ ಶಿಕ್ಷಣ ಸಂಸ್ಥೆಯ ಪರಿವರ್ತನಾ ವಿದ್ಯಾ ಮಂದಿರದ ನೂತನ ಶಾಲೆಯ ಉದ್ಘಾಟನಾ ಸಮಾರಂಭ ಜ.31ರಂದು ಬೆಳಿಗ್ಗೆ 10.15ಕ್ಕೆ ನೆರವೇರಲಿದೆ ಎಂದು ಡಾ.ವಿಷ್ಣುಜೀ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅರುಣ ಎಂ.ಹೊನ್ಯಾಳ ತಿಳಿಸಿದ್ದಾರೆ.

ಪರಿವರ್ತನಾ ವಿದ್ಯಾ ಮಂದಿರದ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಫೆ.1ರಿಂದ ಮೇ.31ರವರೆಗೆ ನರ್ಸರಿ, ಎಲ್‌ಕೆಜಿ ಮತ್ತು ಯುಕೆಜಿ ತರಗತಿಯ ಮಕ್ಕಳಿಗೆ ಉಚಿತ ತರಬೇತಿಯನ್ನು ನೀಡಲಾಗುವುದು ಎಂದು ಅವರು ಹೇಳಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಡಾ.ವಿಷ್ಣು ಸೇನಾ ಸಮಿತಿ ರಾಜ್ಯಾಧ್ಯಕ್ಷ ವೀರಕಪುತ್ರ ಶ್ರೀನಿವಾಸ ನೆರವೇರಿಸುವರು. ಸಾನ್ನಿಧ್ಯವನ್ನು ಅರಕೇರಿ ಕೌದೇಶ್ವರ ಮಠದ ಮಾಧವನಂದ ಸ್ವಾಮೀಜಿ ವಹಿಸಲಿದ್ದು, ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ ವೀರಪ್ಪ ಕೆಂಚಣ್ಣವರ ವಹಿಸುವರು.

ಮುಖ್ಯ ಅತಿಥಿಗಳಾಗಿ ತ್ರಿಮೂರ್ತಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಹುಲಿಯಪ್ಪ ಯಲಗನ್ನವರ, ಜಿಪಂ ಮಾಜಿ ಅಧ್ಯಕ್ಷ ಹೂವಪ್ಪ ರಾಠೋಡ, ಜಿಲ್ಲಾ ವಾಲ್ಮೀಕಿ ಮಹಾಸಭಾ ಪ್ರಧಾನ ಕಾರ್ಯದರ್ಶಿ ಯಲ್ಲಪ್ಪ ಕ್ಯಾದಿಗೇರಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಪೀರಪ್ಪ ಮ್ಯಾಗೇರಿ, ಬಿಜೆಪಿ ಜಿಲ್ಲಾ ಎಸ್ಟಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಆರ್.ಎಚ್.ನಾಯ್ಕರ, ವೀರಭದ್ರಪ್ಪ ನಾಯಕ, ರುದ್ರಪ್ಪ ಬಣಕಾರ, ಜ್ಯೋತಿ ಕ್ರೆಡಿಟ್ ಸೊಸೈಟಿ ನಿರ್ದೇಶಕ ಚಂದ್ರಕಾಂತ ಕೇಸನೂರ, ಶಿವು ತಳವಾರ, ಕಾಮೇಶ ಭೋವಿ, ಬಸವರಾಜ ಹುನಗುಂದ, ಮಹಾಂತೇಶ ಹಡಪದ, ದುರಗಪ್ಪ ಮಾದರ, ಭೀಮಪ್ಪ ಹೂಟಿ, ಭರಮು ಪೂಜಾರಿ ಆಗಮಿಸುವರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀದರ ನಗರ ಪೊಲೀಸ್ ಠಾಣೆ ಹೆಸರನ್ನು ಬೀದರ ಸಬ್ ಅರ್ಬನ್ ಪೊಲೀಸ್ ಠಾಣೆ ಎಂದು ಮರು ನಾಮಕರಣ

ಮಲ್ಲಮ್ಮನುಡಿವಾರ್ತೆಬೀದರ. ಜ.29 : 2025ನೇ ಜನವರಿ.4 ರಂದು ಬೀದರ ನಗರ ಪೊಲೀಸ್ ಠಾಣೆಯ ಹೆಸರನ್ನು "ಬೀದರ ಸಬ್ ಅರ್ಬನ್ ಪೊಲೀಸ್ ಠಾಣೆ" ಎಂದು ಮರು ನಾಮಕರಣ ಮಾಡಲಾಗಿದೆ ಎಂದು ಬೀದರ ಸಬ್ ಅರ್ಬನ್ ಪೊಲೀಸ್ ಠಾಣೆಯ ಪಿಎಸ್‌ಐ (ಕಾ.ಸು.) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದರ ಪೊಲೀಸ್ ಅಧೀಕ್ಷಕರು ಬೀದರ ನಗರ ಪೊಲೀಸ್ ಠಾಣೆಯ ಹೆಸರನ್ನು ಬೀದರ ಸಬ್ ಅರ್ಬನ್ ಪೊಲೀಸ್ ಠಾಣೆ ಎಂದು ಮರು ನಾಮಕರಣಕ್ಕೆ ಅಗತ್ಯಕರಮಕೈಗೊಂಡು ಮರು ನಾಮಕರಣ ಜಾರಿಗೆ ಮಾಡಲು ಸೂಚಿಸಿದ ಮೇರೆಗೆ ಕ್ರಮ ವಹಿಸಲಾಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

# ರಾಜ್ಯಪಾಲರ ಪುರಸ್ಕಾರಕ್ಕೆ ಮುಸ್ಕಾನ, ಕಾರ್ತಿಕ ಆಯ್ಕೆ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29:ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ರಾಜ್ಯಪಾಲರಹೆಸರಿನಲ್ಲಿಕೊಡುವ ಪುರಸ್ಕಾರಕ್ಕೆಬಾಗಲಕೋಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದ ರೇಂಜರ ಮುಸ್ಕಾನಕುಂದರಗಿ,ಹಾಗೂ ರೋವರಕಾರ್ತಿಕರಾಜನಾಳ ಆಯ್ಕೆಯಾಗಿದ್ದಾರೆ.

ಕಾಲೇಜಿನ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಈ ವಿಷಯ ತಿಳಿಸಿದ್ದು, ಕರ್ನಾಟಕ ರಾಜಭವನದಲ್ಲಿ ನಡೆಯುವ ಸಮಾರಂಭದಲ್ಲಿ ಕರ್ನಾಟಕದ ಘನತೆವೆತ್ತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ರೇಂಜರ್ ಮುಸ್ಕಾನ ಕುಂದರಗಿ,ರೋವರಕಾರ್ತಿಕ ರಾಜನಾಳ ಪುರಸ್ಕಾರ ನೀಡಿ ಗೌರವಿಸುವರು ಎಂದು ಹೇಳಿದ್ದಾರೆ.

ರಾಜ್ಯಪಾಲರ ಪುರಸ್ಕಾರಕ್ಕೆ ಆಯ್ಕೆಯಾಗಿರುವ ಮುಸ್ಕಾನ ಕುಂದರಗಿ ಹಾಗೂ ಕಾರ್ತಿಕ ರಾಜನಾಳ ಅವರನ್ನು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ಎಸ್.ಎಸ್. ದಳವಾಯಿ, ಜಿಲ್ಲಾ ಸಂಘಟಕ ಪ್ರಮೋದ್ ಚೌಗಲೆ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಾಸಕ ಹೆಚ್.ವಾಯ್.ಮೇಟಿ ಹಾಗೂ ಸದಸ್ಯರು, ರೇಂಜರ್ ಲೀಡರ್ ಡಾ.ಸುಮಂಗಲಾ ಮೇಟಿ, ರೋವರ್ ಲೀಡರ್ ಪರಸಪ್ಪ ತಳವಾರ, ಹಾಗೂ ಕಾಲೇಜಿನ ಬೋಧಕ, ಬೋಧ-ಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳುಅಭಿನಂದಿಸಿದ್ದಾರೆ.

# ಜೀವನದಲ್ಲಿ ಉತ್ತಮ ಗುರಿ ಇರಲಿ : ಸಿಇಓ ಶಶಿಧರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.29-ಮಕ್ಕಳು ಶಿಸ್ತುಬದ್ದತೆ ಜೊತೆಗೆ ಉನ್ನತ ಗುರಿಗಳನ್ನು ಹೊಂದಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನವನಗರದ ಸೆಕ್ಟರ ನಂ.46 ರಲ್ಲಿರುವ ಡಿ.ದೇವರಾಜ ಅರಸು ಮೆಟ್ರಿಕ್ ನಂತರ ವೃತ್ತಿಪರ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ಮಕ್ಕಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಉತ್ತಮ ಜೀವನ ರೂಪಿಸಿಕೊಳ್ಳಲು ದಿನನಿತ್ಯದ ಶ್ರಮ, ಶಿಸ್ತುಬದ್ದತೆ ಮೂಲಕ ದೊರೆತ ಸಮಯವನ್ನು ಹೇಗೆ ಅರ್ಥಪೂರ್ಣವಾಗಿ ಬಳಕೆ ಮಾಡಿಕೊಳ್ಳಬೇಕೆಂಬುದು ಮುಖ್ಯವಾಗಿದೆ. ಇದರಿಂದ ಜೀವನದಲ್ಲಿ ಇಟ್ಟುಕೊಂಡ ಗುರಿ ಸಾಧನೆಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಉನ್ನತ ಮಟ್ಟದ ಐ.ಎ.ಎಸ್ ಮತ್ತು ಕೆ.ಎ.ಎಸ್ ನಂತಹ ಉನ್ನತ ಮಟ್ಟದ ಹುದ್ದೆ ಪಡೆಯುವ ಗುರಿಯನ್ನು ಇಟ್ಟುಕೊಂಡು ಇದಕ್ಕಾಗಿ ತಮ್ಮ ಮನಸ್ಥಿತಿಯನ್ನು ಗಟ್ಟಿಗೊಳಸಿಕೊಂಡು ದೊ-ರೆತ ಸಮಯವನ್ನು ವ್ಯರ್ಥ ಮಾಡದೇ ಪರಿಣಾಮಕಾರಿಯಾಗಿ ಬಳಸಿಕೊಂಡು ನಮ್ಮ ಜೀವನದಲ್ಲಿ ಅನುಸರಿಸಬೇಕು. ಕೆಲಸದ ಪಟ್ಟಿಗಳನ್ನು ಸಿದ್ದಪಡಿಸಿಕೊಂಡು ಕಾರ್ಯಗಳಿಗೆ ಆದ್ಯತೆ ನೀಡಬೇಕು. ಪ್ರತಿಭಾರಿ ವಿಭಿನ್ನ ಕಾರ್ಯಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರಮನಾಥ ರೆಡ್ಡಿ ಮಕ್ಕಳ ಜೊತೆ ಸಂವಾದ ನಡೆಸಿ ಐಪಿ.ಎಸ್ ಅನುಭವಗಳನ್ನು ಹಂಚಿಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೇಗೆ ತಯಾರು ಆಗಬೇಕೆಂಬುದರ ಬಗ್ಗೆ ತಿಳಿಸಿದರು.

ಸಂವಾದ ಕಾರ್ಯಕ್ರಮ ಪೂರ್ವದಲ್ಲಿ ವಸತಿ ನಿಲಯ ವೀಕ್ಷಣೆ ಮಾಡಿದ ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಗುಣಮಟ್ಟದ ಗ್ರಂಥಾಲಯ, ಸಂಶೋಧನಾ ಕೊಠಡಿ ಹಾಗೂ ಉತ್ತಮ ಕಂಪ್ಯೂಟರ ಲ್ಯಾಬ್ ಸೇರಿದಂತೆ ಎಲ್ಲ ಮೂಲಭೂತ ಸೌಲಭ್ಯಗಳು ಹೊಂದಿರುವುದನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಂ.ಎಂ. ತುಮ್ಮರಮಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಸೇರಿದಂತೆ ವಸತಿ ನಿಲಯದ ಮೇಲ್ವಿಚಾರಕಿ ಶಶಿಕಲಾ ಚವ್ಹಾಣ ಹಾಗೂ ಇತರರು ಉಪಸ್ಥಿತರಿದ್ದರು.

## ವಾಜಪೇಯಿ ಜನ್ಮಶತಮಾನೋತ್ಸವ :

## ತಿಂಗಳಿಡಿ ಕಾರ್ಯಕ್ರಮ: ಸೋಮನಾಥ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 29 : 'ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಅಂಗವಾಗಿ ಜಿಲ್ಲೆಯಾದ್ಯಂತ ತಿಂಗಳಿಡಿ ವಿವಿಧ ರೀತಿಯ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ' ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ತಿಳಿಸಿದರು.

ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2024ರ ಡಿ.25ಕ್ಕೆ ವಾಜಪೇಯಿ ಜನಿಸಿ ವರ್ಷ ಕಳೆದಿವೆ. ಈಗ ಅವರು ನಮ್ಮೊಡನೆ ಇಲ್ಲ. ಆದರೆ, ಅವರು ಮಾಡಿದ ಕೆಲಸಗಳಿಂದ ಎಲ್ಲರ ನಡುವೆ ಇದ್ದಾರೆ. ಅವರ ಜನ್ಮಶತಮಾನೋತ್ಸವದ ಅಂಗವಾಗಿ ಫೆಬ್ರುವರಿ 14 ರಿಂದ ಮಾರ್ಚ್ 14ರ ವರೆಗೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಬಿಜೆಪಿ ಮುಖಂಡ ಬಾಬುವಾಲಿ ಮಾತನಾಡಿ, ಕವಿಸಮ್ಮೇಳನ, ವಾಕಥಾನ್, 'ಖೇಲ್ ಭೀ ಜೀತೋ, ದಿಲ್ ಭೀ ಜೀತೋ' ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಬಿಜೆಪಿ ನಗರ ಮಂಡಲ ಅಧ್ಯಕ್ಷ ಶಶಿ ಹೊಸಳ್ಳಿ, ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಗುರುನಾಥ ಜ್ಯಾಂತಿಕರ್, ಸಾಮಾಜಿಕ ಜಾಲತಾಣದ ಮುಖ್ಯಸ್ಥ ವೀರೂ ದಿಗ್ವಾಲ್, ಮಾಧ್ಯಮ ಪ್ರತಿನಿಧಿ ಶ್ರೀನಿವಾಸ ಚೌಧರಿ ಹಾಜರಿದ್ದರು.

'ಪೊಲೀಸರು ವಿಫಲ'

'ಬೀದರ್ ನಗರದಲ್ಲಿ ಜನವರಿ 16ರಂದು ನಡೆದ ದರೋಡೆ ಪ್ರಕರಣವನ್ನು ಭೇದಿಸಲು ಬೀದರ್ ಜಿಲ್ಲಾ ಪೊಲೀಸರು ಸಂಪೂರ್ಣ ವಿಫಲರಾಗಿದ್ದಾರೆ. ಈ ಘಟನೆ ಬಳಿಕ ಕಳವು ಪ್ರಕರಣಗಳು ಹೆಚ್ಚಾಗಿವೆ. ಹಾಲಿ ಅಧಿಕಾರಿಗಳನ್ನು ಬೇರೆಡೆ ವರ್ಗಾವಣೆಗೊಳಿಸಿ ದಕ್ಷ ಪ್ರಾಮಾಣಿಕ ಅಧಿಕಾರಿಗಳನ್ನು ಸರ್ಕಾರ ನೇಮಿಸಬೇಕು. ಹತ್ತು ದಿನಗಳ ಒಳಗೆ ದುಷ್ಕರ್ಮಿಗಳ ಬಂಧಿಸದಿದ್ದರೆ ಪಕ್ಷದಿಂದ ಹೋರಾಟ ನಡೆಸಲಾಗುವುದು' ಎಂದು ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ ತಿಳಿಸಿದರು.

# ಪದಾಧಿಕಾರಿಗಳ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.29: ತಾಲೂಕು ಸರಕಾರಿ ನೌಕರರ ಸಂಘ-ಕ್ಕೆ ಜಿಲ್ಲಾಧ್ಯಕ್ಷರ ಆದೇಶದ ಮೇರೆಗೆ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ತಾಲೂಕು ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ತಿಳಿಸಿದ್ದಾರೆ.



ಪದಾಧಿಕಾರಿಗಳ ವಿವರ : ಶಮಿ ಪಟೇಲ್(ಗೌರವಾಧ್ಯಕ್ಷ), ಶಿವಕುಮಾರ ಫುಲಾರಿ, ಗುರುರಾಜ(ಹಿರಿಯಉಪಾಧ್ಯಕ್ಷರು), ವೈ.ರಾಜೇಂದ್ರಕುಮಾರ, ಶರಣಬಸವರಾಜ ಶೆಟ್ಟರ, ಪ್ರಭು ಡಿಗ್ಗೆ(ಉಪಾಧ್ಯಕ್ಷರು), ತಬಸುಮ, ನಂದಕುಮಾರ ಜಾಧವ, ದತ್ತಾತ್ರಿದಂಡೆ(ಜಂಟಿ ಕಾರ್ಯದರ್ಶಿ), ನಾಜೀಮ ಹವರೆ, ವೈಜಿನಾಥ ಪಾಟೀಲ್, ಸುಭಾಷ ಸತ್ತಾರೆ, ಲಕ್ಷ್ಮಿ ??ಕಾಂತ ಪವಾರೆ(ಸಂಘಟನಾಕಾರ್ಯದರ್ಶಿ), ತಿಪ್ಪೇಶ ವಲ್ಲಾಪೂರೆ, ಅಮರ ಲಕಶೆಟ್ಟೆ(ಸಾಂಸ್ಕೃತಿಕ ಕಾರ್ಯದರ್ಶಿ), ಬಲಬೀರಸಿಂಗ ರಾಜಪೂತ್, ವಿಜಯಕುಮಾರ ಪಾಟೀಲ್(ಕ್ರೀಡಾಕಾರ್ಯದರ್ಶಿ) ಮತ್ತು ಮಹೇಬೂಬ ಖಾನ್ ಅವರನ್ನು ಆಂತರಿಕ ಲೆಕ್ಕ ಪರಿಶೋಧಕರನ್ನಾಗಿ ನೇಮಕ ಮಾಡಲಾಗಿದೆ.

ನಾಮನಿರ್ದೇಶಿತರ ವಿವರ: ಸೂರ್ಯಕಾಂತ ಕಲ್ಲೂರೆ, ಸ್ವೇಲಾರಾಣಿ, ವೀರಭದ್ರ, ವೆಂಕಟರಾವ ಮಲಗೊಂಡ, ಡಾ.ಸಂಗಮೇಶ ಖೇಳಗೆ, ಸತೀಶ ಭೋಸ್ಲೆ, ಧೋಂಡಿಬಾ ಬಾಮನೆ, ಪ್ರವೀಣಕುಮಾರ, ಧನರಾಜ ಬಂಬುಳಗೆ, ಚಂದ್ರಕಾಂತ ಚಂಡಕಾಪೂರೆ, ಸೂರ್ಯಕಾಂತ ಅಮದಾಬಾದೆ, ದೇವೀಂದ್ರಕುಮಾರ, ನೀಲಕಂಠ ಕುರಣ, ದಾವುದ ಮತ್ತು ಚಂದ್ರಕಾಂತ ಫುಲೆ ಅವರನ್ನು ನಾಮನಿರ್ದೇಶಿತ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವಣ್ಣನವರ ಸಂದೇಶ ವಿಶ್ವಕ್ಕೆ ಮಾದರಿ



> ವಿದ್ಯಾರ್ಥಿಗಳು ಶೈಕ್ಷಣಿಕ ಅಭ್ಯಾಸದ ಜತೆಗೆ ದೇಶಭಕ್ತಿ, ರಾಷ್ಟ್ರಪ್ರೇಮ ಬೆಳೆಸಿ ಕೊಂಡು ರಾಷ್ಟ್ರದ ಪ್ರಗತಿಗೆ ಕೊಡುಗೆ ನೀಡಬೇಕು.
> – ಸುಭೋದಕುಮಾರ ನಾಯಕ ನಿರ್ದೇಶಕರು ಡಿಆರ್ ಡಿಒ ಚಂಡಿಪುರ
>
> ಭಾರತದ ವಿಜ್ಞಾನಿಗಳ ನಿರಂತರ ಪರಿಶ್ರಮ, ಸಂಶೋಧನೆಯ ಪರಿಣಾಮ ಭಾರತ ಜಗತ್ತಿನಲ್ಲಿಯೇ ಶಕ್ತಿಶಾಲಿ ರಾಷ್ಟ್ರವಾಗಿ ರೂಪಗೊಳ್ಳುತ್ತಿದೆ.
> – ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.29: ವಿಶ್ವಗುರು ಬಸವಣ್ಣನವರ ತತ್ವಗಳು ಜಗತ್ತಿಗೆ ಮಾದರಿಯಾಗಿವೆ. ಅವರು ಸಾರಿರುವ ಸಂದೇಶದ ಬಗ್ಗೆ ಸಾಕಷ್ಟು ತಿಳಿದು ಕೊಂಡಿದ್ದೇನೆ ಎಂದು ಚಂಡಿಪುರ ಭಾರತೀಯ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ(ಡಿಆರ್‌ಡಿಒ) ನಿರ್ದೇಶಕ ಸುಭೋದಕುಮಾರ ನಾಯಕ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಬುಧವಾರ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

12ನೆಯ ಶತಮಾನದಲ್ಲಿ ಸಮಾನತೆ ಸಾರುವುದರ ಜತೆಗೆ ವಿಶ್ವಕ್ಕೆ ಮೊದಲ ಸಂಸತ್ತು ಪರಿಚಯಿಸಿದ ಬಸವಣ್ಣನವರ ಭೂಮಿಗೆ ಬಂದಿರುವುದು ಅತ್ಯಂತ ಖುಷಿ ತಂದು ಕೊಟ್ಟಿದೆ ಎಂದರು.

ಈ ಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಧರ್ಮ ಪ್ರಚಾರದ ಜತೆಗೆ ಮಕ್ಕಳಿಗೆ ಶಿಕ್ಷಣ ಕಲ್ಪಿಸಿ ದೇಶದ ಸತ್ಪ್ರಜೆಗಳನ್ನಾಗಿ ರೂಪಿಸುತ್ತಿರುವುದು ಹೆಮ್ಮೆ ತರಿಸಿದೆ ಎಂದು ತಿಳಿಸಿದರು.

ಹಿರಿಯ ವಿಜ್ಞಾನಿ ವಿದ್ಯಾವತಿ ಸುಭೋದಕುಮಾರ ನಾಯಕ ಮಾತನಾಡಿ, ಗಡಿಭಾಗದಲ್ಲಿ ಸ್ವತಂತ್ರ ಪೂರ್ವ ಮತ್ತು ನಂತರದಲ್ಲಿ ಪೂಜ್ಯರು ಕಟ್ಟಿರುವ ವಿದ್ಯಾ ಸಂಸ್ಥೆಯಲ್ಲಿ ಬಡಮಕ್ಕಳು ವಿದ್ಯೆ ಕಲಿತು ನಾಡಿಗೆ, ರಾಷ್ಟ್ರಕ್ಕೆ ಕೊಡುಗೆ ನೀಡುತ್ತಿದ್ದಾರೆ. ಅದರಲ್ಲಿ ನಾನು ಕೂಡ ಒಬ್ಬಳಾಗಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು.

ನೇತೃತ್ವ ವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಸ್ವತಂತ್ರ ಪೂರ್ವದಲ್ಲಿಯೇ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ಶಿಕ್ಷಣ ಸಂಸ್ಥೆ ತೆರೆದಿದ್ದರು. ಪರಿಣಾಮ ಈ ಭಾಗದ ಹಿಂದುಳಿದ ಹಣೆಪಟ್ಟಿ ಕಳಚಿ ಇದೀಗ ಎಲ್ಲ ರಂಗದಲ್ಲಿ ಬೆಳವಣಿಗೆ ಸಾಧಿಸುತ್ತಿದೆ ಎಂದು ತಿಳಿಸಿದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯಸಾನ್ನಿಧ್ಯ ವಹಿಸಿದರು. ಮಹಾಲಿಂಗ ಸ್ವಾಮೀಜಿ ನೇತೃತ್ವ ವಹಿಸಿದರು. ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಬಸವರಾಜ ಮೊಳಕೀರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಆಡಳಿತಾಧಿಕಾರಿ ಮೋಹನ ರೆಡ್ಡಿ ಅಧ್ಯಕ್ಷತೆ ವಹಿಸಿದರು.

ಈ ಸಂದರ್ಭದಲ್ಲಿ ಮಾರುತಿರಾವ, ವಿಷ್ಣು ಪಾಟೀಲ್, ಸಹಾದೇವ ಸೇರಿದಂತೆ ಹಲವರು ಇದ್ದರು. ಭವಾನಿ ವಚನ ಗಾಯನ ನಡೆಸಿ ಕೊಟ್ಟರು. ಬಾಬು ಬೆಲ್ದಾಳ ನಿರೂಪಿಸಿ, ವಂದಿಸಿದರು.

# ಕುಷ್ಠರೋಗ ನಿರ್ಮೂಲನೆಗೆ. ತಹಸೀಲ್ದಾರ್ ಶ್ರೀ ಶಂಶಾಲಂ ಕರೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಜ.29:ತಾಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮ ಕುರಿತು ತಹಸೀಲ್ದಾರ್ ಶಂಶಾಲಂ ಇವರ ಅಧ್ಯಕ್ಷತೆಯಲ್ಲಿ ತಾಲೂಕಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಸೀಲ್ದಾರರು ಕುಷ್ಠರೋಗ ನಿವಾರಣೆಗೆ ಆರೋಗ್ಯ ಇಲಾಖೆಯಿಂದ ಅರಿವು ಮೂಡಿಸುವುದು, ಮನೆ ಮನೆ ಸಮೀಕ್ಷೆ, ತಪಾಸಣೆ ಹಾಗೂ ಗುಣಾತ್ಮಕ ಚಿಕಿತ್ಸೆ ನೀಡುತ್ತಿದ್ದಾರೆ. ಇನ್ನೂ ಕೂಡಾ ಸಮುದಾಯದಲ್ಲಿ ಕುಷ್ಠರೋಗದ ಬಗ್ಗೆ ಕಳಂಕ ತಾರತಮ್ಯವಿದೆ. ಶಿಕ್ಷಣ, ಶಿಶು ಅಭಿವೃಧ್ಧಿ, ಪಂಚಾಯತ್ ರಾಜ್ ಇತರೆ ಇಲಾಖೆಯವರು ಹಾಗೂ ಸಮಾಜ ಸೇವಕರು ಜನರಲ್ಲಿ ಜಾಗೃತಿ ಮೂಡಿಸಬೇಕು. ರೋಗ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸೋಣ, ಅಂಗ ವಿಕಲತೆ ದೂರ ಮಾಡೋಣ ಎಂದು ಕರೆ ನೀಡಿದರು.

ತಾಲೂಕು ಆರೋಗ್ಯಾಧಿಕಾರಿ ಡಾ: ಅಮರೇಶ ಪಾಟೀಲ ಮಾತನಾಡಿ ಕುಷ್ಠರೋಗದ ಲಕ್ಷಣಗಳು ಸ್ಪರ್ಶ ಜ್ಞಾನವನ್ನು ತಿಳಿ ಬಿಳಿ ತಾಮ್ರವರ್ಣದ ಮಚ್ಚೆ, ಕೈ ಕಾಲುಗಳಲ್ಲಿ, ನರಗಳಲ್ಲಿಯೂ ತೀವ್ರ ಜೋಮು ಕಂಡು ಬಂದು ವಿಕಲತೆ ಆಗಬಹುದು. ಮೈಕೋ ಬ್ಯಾಕ್ಟೀರಿಯಂ ಲೆಪ್ರೆ ಯಿಂದ ಈ ರೋಗ ಬರುತ್ತದೆ.. ಆದ್ದರಿಂದ ಇಂತಹ ಲಕ್ಷಣ ಅಥವಾ ತೊಂದರೆ ಇದ್ದರೆ ಹತ್ತಿರದ ಆಸ್ಪತ್ರೆ. ಆಶಾ ಕಾರ್ಯಕರ್ತೆಯರು ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನು ಸಂಪರ್ಕಿಸಿ ಸಂಪೂರ್ಣ ಉಚಿತ ಚಿಕಿತ್ಸೆ ಪಡೆಯಲು ಕೋರಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿ

ಅಧಿಕಾರಿ ಮಂಜುನಾಥ್, ಶಿಕ್ಷಣ ಇಲಾಖೆಯ ಬಸವರಾಜ, ಮೌನೇಶ್, ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ರಾಜೇಶ್ವರಿ, ವೈದ್ಯಾಧಿಕಾರಿಗಳಾದ ಡಾ: ದಿಗಂಬರ, ಡಾ: ರವಿಕಿರಣ್. ಡಾ: ಶಿವನಾಥ. ಡಾ: ನಿರ್ಮಲಾ ಪಾಟೀಲ, ಡಾ: ಸೂಗೂರೇಶ್. ಡಾ: ಶಂಕರಾಚಾರ್ಯ, ಪ್ರಾಣೇಶ್ ಜೋಶಿ, ರೇಷ್ಮಾಬೇಗಂ, ಶಿವಲೀಲಾ ಮೇಟಿ. ಪದ್ಮಾವತಿ. ನಾಗರತ್ನ. ಅಂಬವ್ವ. ಮಂಜುಳಾ. ವಸೀಂರೆಹಮಾನ್, ಶಿವಮ್ಮ ಇತರರು ಭಾಗವಹಿಸಿದ್ದರು.

# ಹುತಾತ್ಮ ದಿನದಂದು ಸಂಕಲ್ಪ ಪ್ರತಿಜ್ಞೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಜ.29: ಜನವರಿ 30 ಮಹಾತ್ಮ ಗಾಂಧೀಜಿಯವರ ಹುತಾತ್ಮರಾದ ದಿನ

ಪ್ರತಿ ವರ್ಷದಂತೆ ಈ ವರ್ಷವೂ ಸಹ ದಿನಾಂಕ 30.01.2025 ರಂದು ಮಧ್ಯಾನ 3.30 ಕ್ಕೆ ಶಹಪುರದ ಬಸವೇಶ್ವರ ಚೌಕದಲ್ಲಿ ಸೌಹಾರ್ದ ಸಂಕಲ್ಪ ಸಭೆ ಪ್ರತಿಜ್ಞೆ ಸ್ವೀಕಾರ ಸೌಹಾರ್ದತೆ ಮತ್ತು ಸಮಾನತೆಯ ಆಶಯ ಉಳ್ಳವರು ಬಂದು ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿ ಮಾಡಬೇಕೆಂದು ತಮ್ಮಲ್ಲಿ ಸಾಮೂಹಿಕ ಸಂಘಟನೆಗಳ ವೇದಿಕೆ ಶಹಪುರ ತಮ್ಮಲ್ಲಿ ವಿನಂತಿಸಿಕೊಳ್ಳುತ್ತದೆ ಎಂದು ಚೆನ್ನಪ್ಪ ಆನೆಗುಂದಿ ಜಿಲ್ಲಾಧ್ಯಕ್ಷರು

ಸಾಮೂಹಿಕ ಸಂಘಟನೆಗಳ ವೇದಿಕೆ ತಿಳಿಸಿದ್ದಾರೆ.

# ಜ.31 ರಂದು ಶ್ರೀ ಸ್ವಾಮಿ ನರೇಂದ್ರಾಚಾರ್ಯ ಮಹಾರಾಜರ ಪಾದುಕಾ ದರ್ಶನ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.29:ಮಹಾರಾಷ್ಟ್ರದ ರಾಮಾನಂದಾಚಾರ್ಯ ದಕ್ಷಿಣ ಪೀಠದ ಜಗದ್ಗುರು ಶ್ರೀ ಸ್ವಾಮಿ ನರೇಂದ್ರಾಚಾರ್ಯ ಮಹಾರಾಜರ ಪಾದುಕಾ ದರ್ಶನ ಕಾರ್ಯಕ್ರಮ ಜ.31 ರಂದು ಹಮ್ಮಿಕೊಳ್ಳಲಾಗಿದೆ ಎಂದು ಸ್ವ – ಸ್ವರೂಪ ಸಂಪ್ರದಾಯ ಬೀದರ ಜಿಲ್ಲಾ ಸೇವಾ ಸಮಿತಿ ಜಿಲ್ಲಾ ನಿರೀಕ್ಷಕ ವಿಠಲ ಮೋಳೆ ತಿಳಿಸಿದ್ದಾರೆ. ಜನವರಿ 31ರಂದು ಶುಕ್ರವಾರ ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯ ವರೆಗೆ ಮಹಾರಾಷ್ಟ್ರ ಬಾರ್ಡರ್



ಉದಗೀರ – ಬೀದರ ರೋಡ್ ಕಮಲನಗರದಲ್ಲಿ ಶ್ರೀ ಸ್ವಾಮಿ ನರೇಂದ್ರಾಚಾರ್ಯ ಮಹಾರಾಜರ ಪಾದುಕಾ ದರ್ಶನ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಅಂದು ಬೆಳಿಗ್ಗೆ ಶ್ರೀಗಳ ಪಾದುಕಾ ಆಗಮನ ನಂತರ ಕಮಲನಗರ ಬಸ್ ನಿಲ್ದಾಣದಿಂದ ಭವ್ಯ ಮೆರವಣಿಗೆ ಆರಂಭವಾಗಿ ಕಾರ್ಯಕ್ರಮ ಸ್ಥಳದವರೆಗೆ ನೆರವೇರಲಿದೆ ಬಳಿಕ ಪಾದುಕೆ ಹಾಗೂ ಗುರುಪೂಜಾ ಸಮಾರಂಭ, ಸಾಮಾಜಿಕ ಉಪಕ್ರಮ ಅಡಿಯಲ್ಲಿ ಬಡವರಿಗೆ ಹೋಲಿಗೆ ಯಂತ್ರ ವಿತರಣೆ, ಗುರುಪೂಜಾ, ಆರತಿ ಸಮಾರಂಭ, ಪ್ರವಚನ, ಉಪಾಸಕ ದೀಕ್ಷಾ, ದರ್ಶನ, ಪ್ರಸಾದ, ಬಳಿಕ ಪುಷ್ಪವೃಷ್ಠಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

# ಸಮುದಾಯ ಭವನಕ್ಕೆ ಅನುದಾನ ಭರವಸೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 29 : ಹುಮನಾಬಾದ ಗ್ರಾಮದಲ್ಲಿ ಜಾತ್ರೆಗಳ ಆಚರಣೆಯಿಂದ ಪರಸ್ಪರ ಸೌಹಾರ್ದತೆ ಬೆಳೆಯುತ್ತದೆ ಎಂದು ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ಹೇಳಿದರು.

ತಾಲ್ಲೂಕಿನ ಬೇನ್ ಚಿಂಚೋಳಿ ಗ್ರಾಮದಲ್ಲಿನ ಮಹಾಲಕ್ಷ್ಮಿ ದೇವಿಯ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು. ಗ್ರಾಮದ ಎಲ್ಲ ಸಮುದಾಯದ ಜನರು ಸೇರಿಕೊಂಡು ಮಹಾಲಕ್ಷ್ಮಿ ದೇವಿ ಜಾತ್ರಾ ಅತ್ಯಂತ ವೈಭವದಿಂದ ಆಚರಣೆ ಮಾಡಿರುವುದು ಶ್ಲಾಘನೀಯವಾಗಿದೆ ಎಂದರು.

ಸಮುದಾಯ ಭವನ ಪರಿಶೀಲನೆ: ತಾಲ್ಲೂಕಿನ ಬೇನ್ ಚಿಂಚೋಳಿ ಗ್ರಾಮದಲ್ಲಿನ ಮಹಾದೇವ ದೇವಸ್ಥಾನದ ಹತ್ತಿರದಲ್ಲಿನ ಸಮುದಾಯ ಭವನದ ಕಾಮಗಾರಿಯನ್ನು ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ಪರಿಶೀಲನೆ ನಡೆಸಿದರು.



ನಂತರ ಅವರು ಮಾತನಾಡಿ, ಸಮುದಾಯ ಭವನದ ಇನ್ನುಳಿದ ಕಾಮಗಾರಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಯೋಜನೆಯಡಿಲ್ಲಿ ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದರು.

ಭೀಮರಾವ್ ನಂದಿ, ಜೈರಾಜ ಪಾಟೀಲ, ದಯಾನಂದ ರಾವ್ ಪಾಟೀಲ , ರಮೇಶ ಖೇರೋಜಿ, ಮಲ್ಲಿಕಾರ್ಜುನ ಅತಿವಾಳ, ಕವಿರಾಜ ಆತಿವಾಳ, ಅಪ್ಪರಾವ್ ಪಾಟೀಲ, ಶಿವಕುಮಾರ್ ಕಣಜಿ, ಭೀಮಷಾ, ನಾಗೇಂದ್ರ ಪಾಟೀಲ, ಹಣಮಂತ ಕಣಜಿ , ಎಸ್. ಸಂಜುರೆಡ್ಡಿ ಅಣದುರೆ ಸೇರಿದಂತೆ ಇತರರು ಇದ್ದರು.

# ತಂಬಾಕು ದುಷ್ಪರಿಣಾಮ ಕುರಿತು ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲು ಕರೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.29:ಜಿಲ್ಲೆಯಲ್ಲಿ ತಂಬಾಕು ಬಳಕೆ ಗಣನೀಯ ನಿಯಂತ್ರಣಕ್ಕಾಗಿ ಶಾಲಾ ಕಾಲೇಜುಗಳು ಸೇರಿದಂತೆ ಗ್ರಾಮ ಪಂಚಾಯತ್ ಮಟ್ಟದಲ್ಲಿಯೂ ತಂಬಾಕಿನಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಪರಿಣಾಮಕಾರಿಯಾಗಿ ತಂಬಾಕು ನಿಯಂತ್ರಣ ಜಾರಿಗೆ ತರಬಹುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಹೇಳಿದರು.

ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಯುವ ಸಮುದಾಯವು ಸಹ ತಂಬಾಕು ಉತ್ಪನ್ನಗಳನ್ನು ಉಪಯೋಗಿಸುತ್ತಿದ್ದಾರೆ. ಇದರಿಂದ ಅವರ ಭವಿಷ್ಯವು ಹಾಳಾಗುತ್ತಿದ್ದು, ಇದರ ಕುರಿತು ಜಿಲ್ಲಾ ಪಂಚಾಯತ್ ಹಾಗೂ ಇತರೆ ಇಲಾಖೆಗಳ ಸಹಕಾರದೊಂದಿಗೆ ಹಳ್ಳಿಗಳಲ್ಲಿಯೂ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಸೂಚಿಸಿದರು.

ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಮುಂಭಾಗದಲ್ಲಿ ಕೋಟ್ಪಾ-2003ರ ಸೆಕ್ಷನ್-4 ಮತ್ತು



ಸೆಕ್ಷನ್-6ಬಿ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಡಿಡಿಪಿಐ ಮತ್ತು ಡಿಡಿಪಿಯು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಹಲವಾರು ರೀತಿಯ ಕೈಗಾರಿಕೆಗಳಿವೆ. ಈಗಾಗಲೇ ಸಾಕಷ್ಟು ವಿವಿಧ ರೀತಿಯಲ್ಲಿ ಮಾಲಿನ್ಯವಾಗುತ್ತಿದ್ದು, ತಂಬಾಕು ಬಳಕೆಯಿಂದ ಶ್ವಾಸಕೋಶ ಸಂಬಂಧಿತ ರೋಗಗಳು ಬರುತ್ತಿದ್ದು, ಕೈಗಾರಿಕೆ ವಲಯಗಳಲ್ಲಿಯೂ ಸಹ ತಂಬಾಕು ಕುರಿತಾಗಿ ಅರಿವು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಕೈಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಅವರು ಮಾತನಾಡಿ, ಬಳ್ಳಾರಿ ನಗರದ ಆಂಧ್ರಾಳ್ ಬೈಪಾಸ್ ರಸ್ತೆಯ ವಿಕ್ಟೋರಿಯಾ ಬಾರ್ ಮತ್ತು ರೆಸ್ಟೋರೆಂಟ್‌ನಲ್ಲಿ ಧೂಮಪಾನ ಪ್ರದೇಶ ಸ್ಥಾಪಿಸಿದ್ದು, ಆದ-ರೆ ಸರಿಯಾಗಿ ನಿರ್ವಹಣೆ ಮಾಡಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಈ ಕುರಿತು ಕೂಡಲೇ ನೋಟಿಸ್ ಜಾರಿ ಮಾಡಬೇಕು ಎಂದು ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿರುವ ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಕೋಟ್ಪಾ ಕಾಯ್ದೆಯ ಅನುಸಾರ ನಾಮಫಲಕ ಅಳವಡಿಸುವುದರ ಜೊತೆಗೆ ಧೂಮಪಾನ ಪ್ರದೇಶಗಳನ್ನು ಸ್ಥಾಪಿಸಬೇಕು. ಈ ಕುರಿತು ಕಟ್ಟುನಿಟ್ಟಿನ ಸೂಚನೆ ನೀಡಿ ಎಂದು ಅಬಕಾರಿ ಇಲಾಖೆಯವರಿಗೆ ಸೂಚನೆ ನೀಡಿದರು.

ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ನಿಲ್ದಾಣಗಳಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧಿಸಬೇಕು ಎಂದು ಸೂಚಿಸಿದ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು, ಬಸ್‌ಗಳ ಮೇಲೆ ಅಂಟಿಸಲಾಗಿರುವ ತಂಬಾಕು ಉತ್ಪನ್ನಗಳಾದ ಪಾನ್ ಮಸಾಲ ಬಳಕೆಯ ಪ್ರಚೋದಕ ಜಾಹೀರಾತುಗಳನ್ನು ಹಾಕಲು ಅನುಮತಿ ಯಾರು ನೀಡಿದರು? ಎಂದು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಪ್ರಶ್ನಿಸಿದರು. ಖಾಸಗಿಯವರಾಗಿದ್ದರೂ ಅವರೊಂದಿಗೆ ಚರ್ಚಿಸಿ ಕೂಡಲೇ ತೆರವುಗೊಳಿಸಲು ನಿರ್ದೇಶನ ನೀಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರತಿ ತಿಂಗಳು ಆಯೋಜಿಸಲಾಗುತ್ತಿರುವ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ನಾಟಕ ಕಾರ್ಯಕ್ರಮವಾದ 'ತಿಂಗಳು ಸೊಬಗು' ಕಾರ್ಯಕ್ರಮದಲ್ಲಿ ತಂಬಾಕು ಉತ್ಪನ್ನಗಳಿಂದಾಗುವ ದುಷ್ಪರಿಣಾಮ ಕುರಿತು ಅರಿವು ಮೂಡಿಸಲು ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮನ್ವಯತೆ ಸಾಧಿಸಿ ಎಂದು ಅಪರ ಜಿಲ್ಲಾಧಿಕಾರಿಯವರು ಸಲಹೆ ನೀಡಿದರು.

ಈ ಬಾರಿಯ ಜಿಲ್ಲೆಯ ತಂಬಾಕು ಮುಕ್ತ ಗ್ರಾಮಗಳನ್ನಾಗಿ ಘೋಷಿಸಲು ಈ ಕುರಿತು ಕ್ರಮ ವಹಿಸಬೇಕು ಎಂದು ಜಿಪಂ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಕೋಟ್ಪಾ-2003ರ ಕಾಯ್ದೆಯ ಸೆಕ್ಷನ್-4, ಮತ್ತು ಸೆಕ್ಷನ್ 6ಎ ರ ಕಾನೂನಿನ ಬಗ್ಗೆ ಮತ್ತು ವಿಧಿಸುವ ದಂಡ, ಅಂಗಡಿಯವರು ಹಾಕಬೇಕಾದ ಬೋರ್ಡ್‌ಗಳ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಹಿರಿಯ ಪತ್ರಕರ್ತ ಪ್ರಕಾಶ ಜೋಶಿ ನಿಧನ

ಮಲ್ಲಮ್ಮ ನುಡಿ ವಾರ್ತೆ

: ಸಂಯುಕ್ತ ಕರ್ನಾಟಕ ದಿನಪತ್ರಿಕೆ ಹಿರಿಯ ಪತ್ರಕರ್ತ ಪ್ರಕಾಶ ಜೋಶಿ (75) ಬುಧವಾರ ಬೆಳಗ್ಗೆ ನಿಧನರಾಗಿದ್ದಾರೆ. ಮೃತರಿಗೆ ಪತ್ನಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು- ಬಳಗವಿದೆ.

'ಗ್ರಾಮೀಣ ಭಾಗದ ಮೂಲಭೂತ ಸೌಲಭ್ಯಗಳ ಕುರಿತ ವರದಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಿದ್ದರು. ಧಾರವಾಡ ಜಿಲ್ಲೆಯ ಗುಡಗೇರಿಯಲ್ಲಿ 1950 ರಲ್ಲಿ ಇವರ ಜನನ ಬಿ.ಎ. ಪದವಿಯ ಜೊತೆಗೆ ಪುಣೆಯ ಗಂಧರ್ವ ಮಹಾವಿದ್ಯಾಲಯದಿಂದ ಸಂಗೀತದಲ್ಲಿ ಸೀನಿಯರ್ ಕಲಿಕೆ. ತಬಲಾ ಬಾರಿಸುವುದೂ ಇವರ ಹವ್ಯಾಸವಾಗಿತ್ತು.

ಸಂಯುಕ್ತ ಕರ್ನಾಟಕ ಪತ್ರಿಕೆಯ ಗ್ರಾಮೀಣ ವರದಿಗಾರರಾಗಿ 1979 ರಲ್ಲಿ ವೃತ್ತಿ ಬದು-



ಕಿಗೆ ಪ್ರವೇಶಿಸಿದ್ದರು. ನಂತರ ಸವಣೂರ ಉಪವಿಭಾಗ ಕೇಂದ್ರದ ವರದಿಗಾರಿಕೆ ಆರಂಭಿಸಿದ್ದರು. 1997 ರಲ್ಲಿ ಹಾವೇರಿ ಜಿಲ್ಲೆ ಅಸ್ತಿತ್ವಕ್ಕೆ ಬಂದ ನಂತರ ಹಾವೇರಿ ವರದಿಗಾರರಾಗಿ ನೇಮಕ ಆಗಿದ್ದರು. 2010 ರಿಂದ ಪಿ.ಟಿ.ಐ ಅರೆಕಾಲಿಕ ವರದಿಗಾರರಾಗಿ 9 ವರ್ಷ ಸೇವೆ ಸಲ್ಲಿಸಿದ್ದರು.

ಚಿಕ್ಕವಯಸ್ಸಿನಿಂದಲೇ ಸಂಗೀತಾಭ್ಯಾಸ ಮಾಡುತ್ತಿದ್ದ ಇವರು ಪತ್ರಿಕೋದ್ಯಮ ವೃತ್ತಿಯ ಜೊತೆಗೆ ವಿದ್ಯಾಧರ ಕುಲಕರ್ಣಿ ಸಂಗೀತ ಸೇವಾ ಸಮಿತಿಯಲ್ಲಿ ಸಕ್ರಿಯ. ಶ್ರೀ ಗುರುಗೋವಿಂದ ಸೇವಾ ಟ್ರಸ್ಟ್ ಅಧ್ಯಕ್ಷ. ತಿಪ್ಪೋಜಿ ಶೇಠ ಗಣಧರ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಸದಸ್ಯರೂ ಆಗಿದ್ದರು.

ಕಹಳೆ ಹಾಗೂ ದೇವದತ್ತ ಕವನಗಳು, ಪ್ರಸನ್ನದತ್ತ, ಇವರ ಸಂಗ್ರಹಿತ ಕೃತಿಗಳು. ರಟ್ಟೆ ಇಲ್ಲದವನಿಗೆ ಹೊಟ್ಟೆಯ ಹೊರೆ, ನಿಂತು ಹೋದ ನಾದಸ್ವರ, ನಾರಾಯಣಪ್ಪನ ಬಜಿ, ಸುಬ್ಬಣ್ಣನ ಶಂಕರ ಪೋಳಿ ಮೊದಲಾದ ವರದಿಗಳು ಓದುರ ಮೆಚ್ಚುಗೆಗೆ ಪಾತ್ರ ಹಾವೇರಿ ಜಿಲ್ಲೆಯ ಮೂಲಸೌಲಭ್ಯಗಳ ಬಗ್ಗೆ ವರದಿಗಳ ಮೂಲಕ ಬೆಳಕು ಚೆಲ್ಲಿದ್ದು ಇವರ ವೃತ್ತಿ ಬದುಕಿನ ವಿಶೇಷತೆ, ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸಲ್ಲಿಸಿರುವ ಇವರ ಸಾಧನೆಯನ್ನು ಪರಿಗಣಿಸಿ ಕರ್ನಾಟಕ ಮಾಧ್ಯಮ ಅಕಾಡೆಮಿಯು 2019 ನೇ ಸಾಲಿನ ವಾರ್ಷಿಕ ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು.

## ಅಹಾರ ಇಲಾಖೆಯವರು ಜಾಗ್ರತರಾಗಲು ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ತಾಲ್ಲೂಕಿನಾದ್ಯಂತ ಕೆಲವು ಅಂಗಡಿಗಳಲ್ಲಿ ಡೇಟ್ ಬಾರ್ ಆಗಿರುವ ಸಾಮಾಗ್ರಿಗಳನ್ನು ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪ ಕೇಳಿ ಬರುತ್ತಿದೆ ತಕ್ಷಣ ಅಹಾರ ಇಲಾಖೆಯವರು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ಮಾಡುವುದರ ಮೂಲಕ ಸಾರ್ವಜನಿಕರ ನೆರವಿಗೆ ಬರಬೇಕೆಂದು ಒತ್ತಾಯಿಸಲಾಗಿದೆ.

ಸಾಕಷ್ಟು ಕಡೆ ಸರಿಯಾದ ಸಾಮಾಗ್ರಿಗಳು, ಮಕ್ಕಳ ದಿನದ ಪದಾರ್ಥಗಳು. ಇತರೆ ವಸ್ತುಗಳು ಬೇಕಾಬಿಟ್ಟಿಯಾಗಿ ಮಾರುತ್ತಿದ್ದರೆ. ಚಾಕೊಲೇಟ್, ಕುರಕುರೆ, ಹೀಗೆ ನಾನಾ ರೀತಿಯ ಮಕ್ಕಳು ತಿನ್ನುವ ದಿನಸಗಳು ಕುಲಸಿತವಾಗುತ್ತಿವೆ. ಹಾಗಾಗಿ ಅಹಾರ ಇಲಾಖೆಯವರು ಈ ಬಗ್ಗೆ ಸಗತ್ಯ ಕ್ರಮ ಕೈಗೊಳ್ಳಲು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ವಿಶಾಖಪಟ್ಟಣಂ ರೈಲ್ವೆ ಡಿವಿಷನ್ ಸೇರ್ಪಡೆ ಪ್ರಸ್ತಾವನೆ ಕೈ ಬಿಡುವಂತೆ ಶಾಸಕ ತುನ್ನೂರು ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ.29:ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳನ್ನು ವಿಶಾಖಪಟ್ಟಣಂ ರೈಲ್ವೆ ಡಿವಿಷನ್‌ಗೆ ಸೇರಿಸುವ ಪ್ರಸ್ತಾವನೆ ಕೈ ಬಿಡುವಂತೆ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ರಾಜ್ಯ ರೈಲ್ವೇ ಸಚಿವ ವಿ. ಸೋಮಣ್ಣ ಅವರನ್ನು ಒತ್ತಾಯಿಸಿದ್ದಾರೆ.

ಇಂದು ಸಚಿವ ಸೋಮಣ್ಣ ಅವರನ್ನು ಸಂಪರ್ಕಿಸಿದ ಶಾಸಕರು ಗುಂತಕಲ್ ರೈಲ್ವೆ ಡಿವಿಷನ್ ನಲ್ಲಿ ಯಾದಗಿರಿ ಮುಂದುವರಿಸಬೇಕು. ವಿಶಾಖಪಟ್ಟಣಂ ಸೇರ್ಪಡೆಗೆ ಜಿಲ್ಲೆಯ ಜನತೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಆಡಳಿತಾತ್ಮಕ ಕೆಲಸ ಕಾರ್ಯಕ್ಕೆ ವಿಶಾಖಪಟ್ಟಣ ದೂರವಾಗಲಿದೆ. ಕಾರಣ ಯಾದಗಿರಿ ಗುಂತಕಲ್ ನಲ್ಲೆ ಮುಂದುವರಿಸಲು ಮನವಿ ಮಾಡಿದ್ದಾಗಿ ಶಾಸಕರು ಮಾಧ್ಯಮಗಳಿಗೆ ತಿಲಿಸಿದ್ದಾರೆ.

ಮನವಿಗೆ ಸಕಾರಾತ್ಮಕ ಸ್ಪಂದಿಸಿದ



ಸಚಿವ ಸೋಮಣ್ಣ ಅವರು ನಿಮ್ಮ ಮನವಿಯನ್ನು ಗಂಭೀರವಾಗಿ ಪರಿಗಣಿಸಿದ್ದೇನೆ ಯಾವುದೇ ಕಾರಣಕ್ಕೂ ಯಾದಗಿರಿ ರೈಲು ನಿಲ್ದಾಣವನ್ನು ವಿಶಾಖಪಟ್ಟಣಂ ವಿಭಾಗಕ್ಕೆ ಸೇರಿಸುವುದನ್ನು ಕೈ ಬಿಡಲಾಗುತ್ತದೆ ಯಥಾವತ್ತಾಗಿ ಗುಂತಕಲ್ ಡಿವಿಜನ್ ನಲ್ಲೆ ಮುಂದುವರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ .

ಈಗಾಗಲೇ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳನ್ನು ಗುಂತಕಲ್ ಡಿವಿಜನ್ ನಿಂದ ಕೈ ಬಿಟ್ಟು ದೂರದ ವಿಶಾಖಪಟ್ಟಣ ಡಿವಿಜನಿಗೆ ಸೇರಿಸಲಾಗಿದೆ ಎಂಬ ಊಹಾಪೋಹದ ಸುದ್ದಿಗಳು. ಇದಕ್ಕೆ ಯಾರು ಕಿವಿಗೊಡಬಾರದು ಯಾದಗಿರಿ ಗುಂತಕಲ್ ನಲ್ಲೆ ಮುಂದುವರೆಯುವುದು ಶತಸಿದ್ಧ ಸಚಿವ ಬಿ ಸೋಮಣ್ಣ ಅವರ ಮೇಲೆ ನನಗೆ ವಿಶ್ವಾಸ ಇದೆ ಎಂದು ತುನ್ನೂರು ಅವರು ತಿಳಿಸಿದ್ದಾರೆ.

ವಂದೇ ಭಾರತ್ ಮತ್ತು ರಾಜಧಾನಿ ಎಕ್ಸ್ ಪ್ರೆಸ್ ಯಾದಗಿರಿಗೆ ನಿಲುಗಡೆ ಮಾಡಲಾಗಿದೆ. ಇನ್ನೂ ಅನೇಕ ರೈಲುಗಳ ನಿಲುಗಡೆ ಆಗಬೇಕಿದೆ ಎಂದು ಶಾಸಕರು ಸಚಿವರ ಗಮನಕ್ಕೆ ತಂದರು. ನಿಲುಗಡೆಯಾಗದ ರೈಲುಗಳ ಪಟ್ಟಿ ತರಿಸಿಕೊಂಡು ಎಲ್ಲಾ ರೈಲುಗಳನ್ನು ಹಂತ ಹಂತವಾಗಿ ಯಾದಗಿರಿಗೆ ನಿಲುಗಡೆ ಮಾಡುವ ಭರವಸೆಯನ್ನು ಸಚಿವರು ನೀಡಿದ್ದಾರೆ. ಶೀಘ್ರದಲ್ಲೇ ಸಚಿವರನ್ನು ಭೇಟಿ ಮಾಡಿ ನಿಲುಗಡೆ ಆಗಬೇಕಿರುವ ರೈಲುಗಳನ್ನು ಪಟ್ಟಿ ಮಾಡಿ ಸಚಿವರಿಗೆ ಸಲ್ಲಿಸುವುದಾಗಿ ಶಾಸಕರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.01 ರಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

ಬಳ್ಳಾರಿ,ಜ.29:ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ವತಿಯಿಂದ ಫೆ.01 ರಂದು ಮಧ್ಯಾಹ್ನ 03 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಏರ್ಪಡಿಸಲಾಗಿದೆ.

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

## ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ: ಅರ್ಜಿ ಆಹ್ವಾನ

ಬಳ್ಳಾರಿ,ಜ.29:ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2024-25ನೇ ಸಾಲಿನಲ್ಲಿ ನಡೆಯುವ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ವೀರಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಪ್ರಚಲಿತ ವಿದ್ಯಮಾನಗಳಿಂದ ಮಹಿಳಾ ಕ್ಷೇತ್ರದಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿರುವಂತಹ ಹಾಗೂ ಮಾಧ್ಯಮ ಮತ್ತು ಪತ್ರಿಕೆಗಳಲ್ಲಿ ಪ್ರಕಟಗೊಂಡಂತಹ ಮತ್ತು ಕಳೆದ 5 ವರ್ಷಗಳಿಂದ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸ್ವಯಂಸೇವಾ ಸಂಸ್ಥೆಗಳು ಹಾಗೂ ಇತರೆ 5 ಕ್ಷೇತ್ರಗಳಾದ "ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ" ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಮಹಿಳೆಯರಿಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಹಾಗೂ ಈ ವಿವಿಧ ಕ್ಷೇತ್ರಗಳಲ್ಲದೇ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವಪಾಯದಿಂದ ಪಾರು ಮಾಡಿದಂತಹ ಮಹಿಳೆಗೆ "ವೀರಮಹಿಳೆ" ಪ್ರಶಸ್ತಿಯನ್ನು ನೀಡಲು ಉದ್ದೇಶಿಸಲಾಗಿದೆ.

ಅರ್ಹ ಮಹಿಳೆಯರು ನಿಗದಿತ ನಮೂನೆ ಅರ್ಜಿ ಪಡೆದು-ಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ನಗರದ ಎಸ್‌ಪಿ ವೃತ್ತದ ಬಳಿಯ ದೇವಿನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಫೆ.05 ಕೊನೆಯ ದಿನವಾಗಿದೆ.

*ಷರತ್ತುಗಳು:*

18ರಿಂದ 45 ವರ್ಷ ವಯೋಮಿತಿ ಹೊಂದಿರಬೇಕು. ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ವೇತನ ಪಡೆಯುತ್ತಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ. ವೀರ ಮಹಿಳೆ ಪ್ರಶಸ್ತಿ ಪಡೆಯುವ ಮಹಿಳೆಯು ವಿಶೇಷ ಶೌರ್ಯ ಹಾಗೂ ಸಾಧನೆಯನ್ನು ಮಾಡಿರಬೇಕು. ಈ ಸಾಧನೆಯು ಸಾರ್ವಜನಿಕರ ಗಮನಕ್ಕೆ ಬಂದಿರಬೇಕು ಹಾಗೂ ಈ ಸಾಧನೆಯು ಪ್ರಶಸ್ತಿ ಪಡೆಯುವ ಹಿಂದಿನ ವರ್ಷದ ಜನವರಿ 1 ರಿಂದ ಡಿಸೆಂಬರ್ 31ರ ಒಳಗೆ ಇರಬೇಕು.

ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ದೂ.08392-266219 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್ ಅವರು ತಿಳಿಸಿದ್ದಾರೆ.

## ಫೆ.3 ರಂದು ಶ್ರೀ ಕಾಯಕ ಶರಣರ ಜಯಂತಿಯ ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜ. 29 : ಶ್ರೀ ಕಾಯಕ ಶರಣರ ಜಯಂತಿಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಇದೇ 2025ರ ಫೆಬ್ರವರಿ 3ರ ಸೋಮವಾರ ರಂದು ಮಧ್ಯಾಹ್ನ 3.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಫೆಬ್ರವರಿ 10 ರಂದು ಶ್ರೀ ಕಾಯಕ ಶರಣರ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಹಾಜರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.3 ರಂದು ಶ್ರೀ ಸಂತ ಸೇವಾಲಾಲ್ ಜಯಂತಿಯ ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜ 29 : ಶ್ರೀ ಸಂತ ಸೇವಾಲಾಲ್ ಜಯಂತಿಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಇದೇ 2025ರ ಫೆಬ್ರವರಿ 3ರ ಸೋಮವಾರ ರಂದು ಸಂಜೆ 4.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ. ಫೆಬ್ರವರಿ 15 ರಂದು ಶ್ರೀ ಸಂತ ಸೇವಾಲಾಲ್ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿ ಆಚರಿಸುವ ಸಲುವಾಗಿ ಪೂರ್ವಸಿದ್ದತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಹಾಜರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೊಗರಿ ಬೆಳೆಗೆ ವಿಮಾ ಪರಿಹಾರ ಆಗ್ರಹಿಸಿ ಕರವೇ ಪ್ರತಿಭಟನೆ

ಇಂಡಿ:ಜ.29:ರೈತರು ತೊಗರಿ ಬೆಳೆಗೆ ವಿಮೆ ತುಂಬಿದ್ದು ಅಂತಹ ರೈತರಿಗೆ ವಿಮೆ ಪರಿಹಾರ ಕೂಡಲೇ ನೀಡಬೇಕೆಂದು ಆಗ್ರಹಿಸಿ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಎದುರು ಕರವೇ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಕೃಷಿ ಅಧಿಕಾರಿ ಮಹಾಂತೇಶ ಶೆಟ್ಟೆನ್ನವರ ಅವರಿಗೆ ಮನವಿ ಸಲ್ಲಿಸಿದರು.

ಇಂಡಿ ತಾಲೂಕಿನ ಕರವೇ ಅಧ್ಯಕ್ಷ ಬಾಳು ಮುಳಜಿ



ಮಾತನಾಡಿ ಈ ಬಾರಿ ತೊಗರಿ ಬೆಳೆ ವಿಫಲವಾಗಿದ್ದು ರೈತರಿಗೆ ನಷ್ಟವಾಗಿದೆ. ಶೇ 90 ರಷ್ಟು ತೊಗರಿ ಬೆಳೆ ಹಾಳಾಗಿದೆ. ಕೃಷಿ ಇಲಾಖೆಯಿಂದ ಕಳಪೆ ಮಟ್ಟದ ಬೀಜ ವಿತರಣೆ, ಹವಾಮಾನದಲ್ಲಿ ಏರುಪೇರು ಹೀಗೆ ಹಲವಾರು ಕಾರಣಗಳಿಂದ ಬೆಳೆ ವಿಫಲವಾಗಿದೆ ಎಂದರು.

ವಿಮಾ ಕಂಪನಿಯಿಂದ ಒಂದು ಹೇಕ್ಟರ ಪ್ರದೇಶಕ್ಕೆ 48564 ರೂ ಪರಿಹಾರ ನೀಡಬೇಕೆಂದು ಆದೇಶವಿದೆ. ಅದರಂತೆ ರೈತರಿಗೆ ಈ ಕೂಡಲೇ ಪರಿಹಾರ ನೀಡಿ ರೈತರ ತೊಂದರೆಗಳಿಗೆ ಸ್ಪಂದಿಸಲು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಹೇಶ ಹೂಗಾರ, ರಾಜು ಕುಲಕಣ ಕಿ, ಮಂಜು ದೇವರ, ಅಶೋಕ ಅಕಲಾದಿ, ಮಹಿಬೂಬ ಬೇವನೂರ, ಸಚೀನ ನಾವಿ, ಸುನೀಲ ಹಿರೇಮಠ, ಶಿವಾನಂದ ಮಡಿವಾಳ, ಪ್ರಶಾಂತ ಲಾಳಸಂಗಿ, ಅರುಣ ಕುಂಬಾರ, ಅಣ್ಣಾರಾಯ ವಾಲಿ, ನಾಗರಾಜ ಚಾಬೂಕಸವಾರ, ಶಿವು ಅಗಸರ, ಪವನ ಪರಗೊಂಡ, ಲೋಕೇಸ ಬಾಮನೆ, ಮಹಾವೀರ ಕಾಮನಕೇರಿ, ಶಾಂತು ಲಾಳಸಂಗಿ, ಅಪ್ಪು ಚಂಡಕಿ, ಬಾಗೇಶ ಹಡಪದ, ಶ್ರೀಧರ ವಾಲಿ ಮತ್ತಿತರಿದ್ದರು.

ಫೋಟೋ-29 ಇಂಡಿ 01

ಇಂಡಿ ಪಟ್ಟಣದ ಕೃಷಿ ಇಲಾಖೆಯಿಂದ ಕರವೇ ಕಾರ್ಯಕರ್ತರು ಪ್ರತಿಭಟನೆ ನಡೆಸಿ ತೊಗರಿ ಬೆಳೆಗೆ ವಿಮಾ ಪರಿಹಾರ ಆಗ್ರಹಿಸಿ ಶೆಟ್ಟೆನವರ ರವರಿಗೆ ಮನವಿ ಸಲ್ಲಿಸಿದರು.


ಕರ್ನಾಟಕ ಸರ್ಕಾರ
ಗ್ರಾಮ ಪಂಚಾಯತ ಕಾರ್ಯಾಲಯ, ಆಲಗೂಡ
ಬಸವಕಲ್ಯಾಣ, ಜಿ:ಬೀದರ
ದಿನಾಂಕ: 28.01.2025
Email-algood.bkln.bdr@gmail.com
ಸಂಖ್ಯೆ: ಗ್ರಾ.ಪಂ.ಆಲ/ವಿ/ಬಕ/ತಾಪಾ/ಟೆಂಡರ/2024-25/

ಅಲ್ಪಾವಧಿ ಟೆಂಡರ್ ಪ್ರಕಟಣೆ
(ಇ-ಪ್ರೊಕ್ಯೂರ್‌ಮೆಂಟ್ ಮೂಲಕ)

ಕರ್ನಾಟಕ ರಾಜ್ಯದ ಮಾನ್ಯ ರಾಜ್ಯಪಾಲರ ಪರವಾಗಿ ಜಿಲ್ಲಾ ಪಂಚಾಯತ, ಬೀದರ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ ಆಲಗೂಡ ರವರು KW (Standard Bid Document) ನಿಬಂಧನೆಗಳೊಪಟ್ಟಂತೆ. H/A under MGNREGA for the year 2023-24 ಯೋಜನೆ ಯಡಿಯಲ್ಲಿನ ರೂ. 6.25 ರಿಂದ 12.10 ಲಕ್ಷಗಳ ಒಟ್ಟು 03 ಕಾಮಗಾರಿಗೆ ಅರ್ಹ ನೊಂದಾಯಿತ 4ನೇ ದರ್ಜೆ ಮೇಲ್ಪಟ್ಟ ಸಿವಿಲ್ ಗುತ್ತಿಗೆದಾರರು ಭಾಗವಹಿಸಬಹುದಾದ ಕಾಮಗಾರಿಗಳಿಗೆ ಐಟಂವಾರು ಇ-ಟೆಂಡರ್ ಆಹ್ವಾನಿಸಲಾಗಿದೆ.

ಸದರಿ ಕಾಮಗಾರಿಗಳ ಹೆಚ್ಚಿನ ವಿವರ, ಷರತ್ತು ಹಾಗೂ ನಿಬಂಧನೆಗಳಿಗಾಗಿ ಈ ಕೆಳಗೆ ಸಹಿ ಮಾಡಿರುವ ಕಛೇರಿಯಲ್ಲಿ, ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಹಾಗೂ ವೆಬ್ಸೈಟ್ https://kppp.karnataka.gov.in ಸಂಪರ್ಕಿಸಬಹುದಾಗಿದೆ.

| | | | |
|---|---|---|---|
| 1. | ಟೆಂಡರ ದಸ್ತಾವೇಜುಗಳನ್ನು ವೆಬ್ ಸೈಟನಿಂದ ಡೌನಲೋಡ ಮಾಡಿಕೊಳ್ಳಲ್ಲು ಪ್ರಾರಂಭವಾಗುವ ದಿನಾಂಕ | : | 28.01.2025 ರಿಂದ 05.02.2025 ವರೆಗೆ |
| 2 | ಭರ್ತಿ ಮಾಡಿದ ಟೆಂಡರ ಸಲ್ಲಿಸಲು ಕೊನೆಯ ದಿನಾಂಕ | : | 05.02.2025 ರಂದು 17:00 ಗಂಟೆಯುವರೆಗೆ |
| 3 | ತಾಂತ್ರಿಕ ಬಿಡ್ ತೆರೆಯುವ ದಿನಾಂಕ | : | 07.02.2025 ರಂದು 11.00 ಗಂಟೆಯ ನಂತರ |
| 4 | ಆರ್ಥಿಕ ಬಿಡ್ ತೆರೆಯುವ ದಿನಾಂಕ | : | ತಾಂತ್ರಿಕ ಬಿಡ್ ಅನುಮೋದನೆಯಾದ ನಂತರ |

ಪಂಚಾಯತ ಅಭಿವೃದ್ಧಿ ಅಧಿಕಾರಿಗಳು,
ಗ್ರಾಮ ಪಂಚಾಯತ ಆಲಗೂಡ
ತಾ.ಬಸವಕಲ್ಯಾಣ, ಜಿ:ಬೀದರ

# ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಗುಣಮಟ್ಟದ ಶಿಕ್ಷಣಕ್ಕೆ ವಿಶೇಷ ಗಮನ ನೀಡಿ: ಶಶಿಧರ್ ಕೋಸಂಬೆ



ಮಲ್ಲಮ ನುಡಿ ವಾರ್ತೆ
ಯಾದಗಿರಿ: ಜ: 29: ಮಕ್ಕಳ ಸಮಸ್ಯೆಗಳಿಗೆ ಚುರುಕಾಗಿ, ರಚನಾತ್ಮಕವಾಗಿ ಹಾಗೂ ಸಕಾಲಕ್ಕೆಸ್ಪಂದಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶ್ರೀ ಶಶಿಧರ್ ಕೋಸಂಬೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ,ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ತಾಲೂಕಪಂಚಾಯತ್,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಶಾಲೆಯ ಜೊತೆಗೆ ಶಿಕ್ಷಣದಲ್ಲಿದೆ ಮಕ್ಕಳ ರಕ್ಷಣೆ ಎಂಬ ಸಂವಾದ ಕಾರ್ಯಕ್ರಮವನ್ನುಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಅನುಭವಿಸುತ್ತಿರುವ ಸಂಕಷ್ಟಗಳನ್ನು ಅವರಿಂದಲೇ ನೇರವಾಗಿ ಪಡೆದು, ಅವುಗಳಿಗೆ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಇಂತಹ ವಿಶೇಷ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಬೀದರ್, ಚಾಮರಾಜನಗರ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆ ತಾಲೂಕ, ಹೋಬಳಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಹವಾಲಗಳನ್ನು ಸ್ವೀಕರಿಸಿ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಮಕ್ಕಳ ಮೇಲಾಗುವ ದೌರ್ಜನ್ಯ, ಶೋಷಣೆ, ಬಾಲ್ಯ ವಿವಾಹ, ಕಳ್ಳಸಾಗಾಣಿಕೆ, ಅತ್ಯಾಚಾರ ಮತ್ತು ಇನ್ನಿತರ ಕೌಟುಂಬಿಕ ಶೋಷಣೆಗಳಂತಹ ಸಮಸ್ಯೆಗಳ ಬಗ್ಗೆ ಮಕ್ಕಳಿಂದಲೇ ನೇರವಾಗಿ ಸಮಸ್ಯೆಗಳನ್ನು ಪಡೆದು ಪರಿಹರಿಸಲು ಸಂವಾದ ಹಮ್ಮಿಕೊಂಡಿದೆ.

ಮಕ್ಕಳು ಅನುಭವಿಸುವಂತಹ ಕಷ್ಟಗಳಿಗೆ ಅಧಿಕಾರಿಗಳು ಸಕಾಲಕ್ಕೆ ಪರಿಹಾರ ದೊರಕಿಸಬೇಕು. ಸಕಾಲಕ್ಕೆ ಪರಿಹಾರ ದೊರೆಯದಿದ್ದ ಸಂದರ್ಭದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮೂಲಕ ನ್ಯಾಯ ಒದಗಿಸಲು ಹಲವು ಕ್ರಮಗಳನ್ನುಕೈಗೊಳ್ಳಲಾಗುತ್ತಿದೆ. ಉಚಿತ ಕಡ್ಡಾಯ ಶಿಕ್ಷಣ ಕಾಯ್ದೆ 2009 ಸಮರ್ಪಕ ಜಾರಿ, ಮಕ್ಕಳ ಮೇಲಿನ ದೌರ್ಜನ್ಯ ನಿಯಂತ್ರಣ ಕಾಯ್ದೆಗಳ ಪರಿಣಾಮಕಾರಿ ಅನುಷ್ಠಾನ, ಮುಖ್ಯವಾಗಿದ್ದು ಅಧಿಕಾರಿಗಳ ಪಾತ್ರ ಅಪಾರವಾಗಿದೆ. ಈ ದಿಸೆಯಲ್ಲಿ ಮಕ್ಕಳ ಸಮಸ್ಯೆಗಳನ್ನು ಆದ್ಯತೆ ಮೇಲೆ ಅಧಿಕಾರಿಗಳು ಪರಿಹರಿಸಬೇಕು ಎಂದು ಸೂಚನೆ ನೀಡಿದರು.

ಶಾಲೆಗಳಲ್ಲಿ ನೂರರಷ್ಟು ಮಕ್ಕಳ ಹಾಜರಾತಿ ಇರಬೇಕು.ದ್ವಿ ದಾಖಲಾತಿ ಬಗ್ಗೆ ಸೂಕ್ತ ಕ್ರಮ ಆಗಬೇಕು.ಸುಮಾರು 54, 481ವಿದ್ಯಾರ್ಥಿಗಳ ಆಧಾರ್ ಮೌಲ್ಯಾಂಕನ ಸರಿಪಡಿಸಿದಲ್ಲಿ ಸರ್ಕಾರದಿಂದ ಮಕ್ಕಳಿಗೆ ಸಿಗಬಹುದಾದ ಸೌಲಭ್ಯಗಳು, ಶಿಷ್ಯವೇತನ ಸಮರ್ಪಕವಾಗಿ ತಲುಪಿಸಲು ಸಾಧ್ಯವಿದೆ. ಇದ-ರಿಂದ ಬಡ ವಿದ್ಯಾರ್ಥಿಗಳಿಗೆ ಆಗುವ ಅನ್ಯಾಯವನ್ನು ತಪ್ಪಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಶಾಲಾವ್ಯವಸ್ಥೆಸುಧಾರಣೆಯಾಗಬೇಕು. ಶಿಕ್ಷಕರು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿನಿರ್ವಹಿಸಬೇಕು. ಸುಶಿಕ್ಷಿತ ಭಾರತದಲ್ಲಿ ಶಿಕ್ಷಕರ ಪಾತ್ರ ಅಪಾರವಾಗಿದೆ. ಈ ದೇಶದ ಗೌರವ ಕಾಪಾಡಲು ವಿದ್ಯಾರ್ಥಿಗಳು ಶಾಲೆಯಿಂದ ವಿ ವ್ ು ಖ ರಾ ಗ ದ ಂ ತೆ ನೋಡಿಕೊಳ್ಳಬೇಕು. ಇದ-ರಿಂದ ಶಾಲೆ ಉಳಿದು ಶಿಕ್ಷಕರು ಉಳಿಯಲಿದ್ದು, ಮಕ್ಕಳೊಂದಿಗೆ ಮಕ್ಕಳಾಗಿ ಅವರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು. ಮಕ್ಕಳ ಹಕ್ಕುಗಳ ರಕ್ಷಣಾ ಕಾಯ್ದೆ 2016 ಹಾಗೂ ಮಕ್ಕಳ ಉಚಿತ ಹಾಗೂ ಕಡ್ಡಾಯ ಶಿಕ್ಷಣ 2009 ಕಾಯ್ದೆಗಳ ಪರಿಣಾಮಕಾರಿ ಅನುಷ್ಠಾನಕ್ಕೂ ನೆರವಾಗಬೇಕು. ಮಕ್ಕಳ ಸುರಕ್ಷಾ ಸಮಿತಿಗಳನ್ನು ರಚಿಸಬೇಕು. ಸಹಾಯವಾಣಿ 1098 ಬಗ್ಗೆ ಪ್ರಚುರಪಡಿಸಬೇಕು. ಪ್ರತಿ ಶಾಲೆ ವ್ಯಾಪ್ತಿಯಲ್ಲಿ ಇರುವ ಪೊಲೀಸ ಠಾಣೆಗಳ ವ್ಯಾಪ್ತಿಯಲ್ಲಿ ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮ ಏರ್ಪಡಿಸಿ ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಅವರು ಸಲಹೆ ನೀಡಿದರು.

ಮಕ್ಕಳೊಂದಿಗೆ ಸಂವಾದ : ಜಿಲ್ಲೆಯ ವಿವಿಧ ಶಾಲೆಗಳ ಮಕ್ಕಳೊಂದಿಗೆ ವಿವಿಧ ಸಮಸ್ಯೆಗಳ ಬಗ್ಗೆ ಸಂವಾದ ನಡೆಸಿ, ಸಮಸ್ಯೆಗಳ ಪರಿಹಾರಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಶ್ರೀ ಕೋಸಂಬೆ ಅವರು ಸೂಚನೆ ನೀಡಿದರು.

ಶಾಲಾ ಮಕ್ಕಳ ಅನುಕೂಲಕ್ಕಾಗಿ ಬೊಮ್ಮನಹಳ್ಳಿಗೆ ಎಕ್ಸ್‌ಪ್ರೆಸ್ ವಾಹನಗಳ ನಿಲುಗಡೆಗೆ, ನಂದಹಳ್ಳಿ,ಕರಡಗಿ,ಮುನ್ನುಟಗಿ, ರತ್ನಾಳ ವ್ಯಾಪ್ತಿಯಲ್ಲಿ ಹೆಚ್ಚುವರಿ ಬಸ್ಗಳ ವ್ಯವಸ್ಥೆ ಮಾಡಿ ವರದಿ ಸಲ್ಲಿಸಬೇಕು. ದೇವಿಕೇರಾ, ಕಲದೇವನಹಳ್ಳಿ, ಶಾಲೆಯ ಹತ್ತಿರ ಬಸ್ ನಿಲುಗಡೆಗೆ ಅವಕಾಶ ಕಲ್ಪಿಸಬೇಕು. ವಿವಿಧ ರಸ್ತೆ ದಾಟಲು ಮಾಹಿತಿ ಫಲಕ ಹಾಗೂ ರಸ್ತೆಯಲ್ಲಿ ಹಂಪ್ಸ ವ್ಯವಸ್ಥೆ ಮಾಡಬೇಕು. ವಿದ್ಯಾರ್ಥಿಗಳಿಗೆ ಯಾವುದೇ ಸಮಸ್ಯೆಗಳಿದ್ದಲ್ಲಿ ಪ್ರತಿ ತಿಂಗಳು ಮೊದಲನೇ ಸೋಮವಾರ ಮಧ್ಯಾಹ್ನ 3 ಗಂಟೆಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಹಮ್ಮಿಕೊಳ್ಳಲಾಗುವ ಫೋನ್ ಇನ್ ಕಾರ್ಯಕ್ರಮದಲ್ಲಿ ಮೊಬೈಲ್ ಸಂ 77 60 99 24 52 ಗೆ ಕರೆ ಮಾಡಿ ಪರಿಹಾರ ಕಂಡುಕೊಳ್ಳುವಂತೆ ಸೂಚಿಸಿದರು.

ಜಿಲ್ಲೆಯ ವಿವಿಧ ಶಾಲೆಗಳ ಮಕ್ಕಳಿಂದ ವಿಜ್ಞಾನ, ಕಂಪ್ಯೂಟರ್ ಹಾಗೂ ಪಿಟಿ ಶಿಕ್ಷಕರ ಬೇಡಿಕೆ ಬಂದಿರುವುದರಿಂದ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಚನ್ನಬಸಪ್ಪ ಮುಧೋಳ ಅವರು ಸೂಕ್ತ ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಮಕ್ಕಳುಭಯದವಾತಾವರಣದಲ್ಲಿ ಶಿಕ್ಷಣ ಪಡೆಯಬಾರದು. ಈ ಹಿನ್ನೆಲೆಯಲ್ಲಿ ಶಿಕ್ಷಣದ ಗುಣಮಟ್ಟ, ಶಾಲಾ ಪರಿಸರ ಅನುಕೂಲಕರ ವಾಗುವ ರೀತಿಯಲ್ಲಿ ಸಿದ್ಧಗೊಳಿಸಬೇಕು. ಯಾವುದೇ ಅಧಿಕಾರಿಗಳು ನಿರ್ಲಕ್ಷ್ಯತೋರುವ ಕ್ರಮವನ್ನು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಗಂಭೀರವಾಗಿ ಪರಿಗಣಿಸಲಿದ್ದು, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಾನೂನು ರೀತಿಯ ಸೂಕ್ತ ಕ್ರಮ ಕೈಗೊಳ್ಳದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ಶುದ್ಧ ಕುಡಿಯುವ ನೀರು ಪೂ-ರೈಕೆ, ಶೌಚಾಲಯ ವ್ಯವಸ್ಥೆ ಕಾಂಪೌಂಡ್, ಆಟದ ಮೈದಾನ, ಕ್ರೀಡಾ ಸಾಮಗ್ರಿಗಳ, ಗುಣಮಟ್ಟದ ಬಿಸಿ ಊಟ ಪೂರೈಕೆ, ಮತ್ತು ಸುರಕ್ಷತೆ ಬಗ್ಗೆ ಗಮನಕ್ಕೆ ತಂದಿದ್ದು, ಸಂಬಂಧ ಪಟ್ಟ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಶೌಚಾಲಯ, ವಿವಿಧ ಶಾಲೆಗಳ ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳ ಸುರಕ್ಷತೆಗಾಗಿ ನಿರಂತರ ಪೊಲೀಸ್ ಬೀಟ್ ಹೆಚ್ಚಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮರೆಯಪ್ಪ ಅವರು ಮಕ್ಕಳಿಗೆ ಶಿಕ್ಷಣದ ಜೊತೆಗೆ ರಕ್ಷಣೆ ಅತಿ ಮುಖ್ಯವಾಗಿದ್ದು, ಶಿಕ್ಷಕರ ಪಾಲಕರ, ಸಮಾಜದ ಹೊಣೆಯಾಗಿದೆ. ವಿವಿಧ ಶಾಲೆಗಳಲ್ಲಿ ಮೂಲ ಸೌಕರ್ಯ ಇಲ್ಲದ ಬಗ್ಗೆ ಅಧಿಕಾರಿಗಳು ಪರಿಶೀಲಿಸಿ, ನೈಜ ವರದಿ ಸಲ್ಲಿಸಬೇಕು. ಶಾಲೆಯ ವಾತಾವರಣ ಉತ್ತಮವಾಗಿರಬೇಕು. ಮಕ್ಕಳಿಗೆ ರಕ್ಷಣಾ ಹಕ್ಕು ದೊರೆಯುವ ಜೊತೆಗೆ ಅವರ ಭವಿಷ್ಯ ಉತ್ತಮಗೊಳಬೇಕು ಕನಿಷ್ಠಮೂಲಸೌಕರ್ಯಗಳನ್ನು ಒದಗಿಸಿ ಹಾಜರಾತಿ ಪ್ರಮಾಣವನ್ನು ಹೆಚ್ಚಿಸುವಂತೆ ಸಲಹೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಚನ್ನಬಸಪ್ಪ ಮುಧೋಳ ಅವರು ಇಲಾಖೆ ವತಿಯಿಂದ ಕೈಗೊಳ್ಳಲಾದ ಕ್ರಮಗಳ ಬಗ್ಗೆ ವಿವರಿಸಿದರು. ಪ್ರಭಾರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟ ಪೂರ್ವ ಸದಸ್ಯರಾದ ಹೆಚ್.ಸಿ, ರಾಘವೇಂದ್ರ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿದರು. ಡಿವೈಎಸ್ ಪಿ ಅರುಣಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೀರನಗೌಡ, ಮಕ್ಕಳ ರಕ್ಷಣಾಧಿಕಾರಿಗಳಾದ ಪ್ರೇಮಮೂರ್ತಿ ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ 118 ಸ್ಕ್ಯಾನಿಂಗ್ ಕೇಂದ್ರಗಳು

## ಲಿಂಗ ಪರೀಕ್ಷೆ ಕಂಡುಬಂದಲ್ಲಿ ಕ್ರಿಮಿನಲ್ ಪ್ರಕರಣ ದಾಖಲು



ಮಲ್ಲಮ ನುಡಿ ವಾರ್ತೆ
ಬೀದರ ಜ.29: ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಯಾವುದೇ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಪ್ರಸವಪೂರ್ವ ಲಿಂಗ ಪರೀ-ಕ್ಷೆ ವಿಧಾನ ಕಂಡುಬಂದಲ್ಲಿ ಯಾವುದೇ ಮುಲಾಜಿಲ್ಲದೇ ಅಂಥವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಕ್ರಮಕೈಗೊಳ್ಳುವುದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಧ್ಯಾನೇಶ್ವರ ನಿರಗುಡೆ ತಿಳಿಸಿದರು. ಡಿಎಚ್‌ಓ ಕಚೇರಿ ಸಭಾಂಗಣದಲ್ಲಿಂದು ಈ ಕುರಿತು ಜರುಗಿದ ಪಿ.ಸಿ. ಹಾಗೂ ಪಿ.ಎನ್.ಡಿ.ಟಿ. ಕಾಯ್ದೆ 1994(ಗರ್ಭಧಾರಣಾ ಹಾಗೂ ಪ್ರಸನ ಪೂರ್ವ ಪತ್ತೆ ತಂತ್ರ ವಿಧಾನಗಳ ಅಧಿನಿಯಮ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಮೂರು ತಿಂಗಳಿಗೊಮ್ಮೆ ಎಲ್ಲ ಸ್ಕ್ಯಾನಿಂಗ್ ಕೇಂದ್ರಗಳಿಗೆ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ದಿಲೀಪಡೊಂಗ್ರೆನೇತೃತ್ವದಲ್ಲಿ ತಪಾಸಣೆ ನಡೆಸಲಾಗುತ್ತದೆ. ಪ್ರತಿ ಸ್ಕ್ಯಾನಿಂಗ್ ಕೇಂದ್ರವು ಅಗತ್ಯ ದಾಖಲಾತಿಗಳನ್ನು ಇಡಬೇಕಾಗುತ್ತದೆ. ಒಟ್ಟು 72 ಕೇಂದ್ರಗಳಲ್ಲಿ ಗರ್ಭ ತಪಾಸಣೆ ನಡೆಸಲಾಗುತ್ತಿದೆ. ಗರ್ಭಕ್ಕೆ ಯಾವುದಾದರೂ ಲೋಪದೋಷ ಇರುವ ಬಗ್ಗೆ ತಪಾಸಣೆಗೆ ಒಳಪಡುವ ಮಹಿಳೆಯ ಎಲ್ಲ ವಿವರದ ರಜಿಸ್ಟರ್, ನಾಲ್ಕು ಕಾಲಂ ರಜಿಸ್ಟರ್, ಬಿಲ್ ಬುಕ್ ಕಡ್ಡಾಯವಾಗಿ ಇಡಬೇಕಾಗುತ್ತದೆ. ಕೆಲವೆಡೆ ಸಣ್ಣ ಪಟ್ಟ ಲೋಪದೋಷ ಕಂಡುಬಂದವರಿಗೆ ನೋಟೀಸ್ ಈಗಾಗಲೇ ನೀಡಲಾಗಿದೆಯೆಂದು ಸಭೆಗೆ ತಿಳಿಸಲಾಯಿತು.

ಗ್ರಾಮೀಣ ಪ್ರದೇಶದಲ್ಲಿ ಅನೇಕ ಲಂಬಾಣಿ ತಾಂಡಾಗಳಿದ್ದು, ಬಗದಲ್ ಹೊನ್ನಿಕೇರಿ ಅಂತಹ ತಾಂಡಾಗಳಲ್ಲಿ ಗಂಡು, ಹೆಣ್ಣು ಅನುಪಾತ ತೀರ ಕಡಿಮೆ ಇದೆ, ಹೆಣ್ಣು ಅನುಪಾತ ತೀರ ಕುಸಿತದ ಬಗ್ಗೆ ನಿಗಾ ವಹಿಸಿ ಮಾಹಿತಿ ಸಂಗ್ರಹಿಸಬೇಕೆಂದು ಜಿಲ್ಲಾ ತಪಾಸಣಾ ಹಾಗೂ ಪರಿಶೀಲನಾ ಸಮಿತಿ ಹಾಗೂ ಸಲಹಾ ಸಮಿತಿ ಸದಸ್ಯರಾದ ವಕೀಲರಾದ ಉಮೇಶ ಪಾಂಡ್ರೆ ಸಭೆಯ ಗಮನಕ್ಕೆ ತಂದರು. ಆಶಾ ಕಾರ್ಯಕರ್ತೆಯರು ಪ್ರತಿ ಗರಾಮದಲ್ಲಿ ಗರ್ಭಿಣಿ ಮಹಿಳೆಯರ ಬಗ್ಗೆ ನಿಗಾ ವಹಿಸಬೇಕು. ಭ್ರೂಣ ಹತ್ಯೆ ಲಿಂಗ ತಪಾಸಣೆ ನಿಷೇಧ ಬಗ್ಗೆ ಗರ್ಭಿಣಿ ಮಹಿಳೆಯರಲ್ಲಿ ಜಾಗೃತಿ ಮೂಡಿಸಲು ತಾಲ್ಲೂಕಾ ಮಟ್ಟದಲ್ಲಿ ಸಭೆ ನಡೆಸುವಂತೆ ಡಿಎ???ಓ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಉತ್ತಮ ಆರೋಗ್ಯ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡ ಬಗ್ಗೆ ರಾಜ್ಯ ಮಟ್ಟದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷ???ನಿಂದ ಚೈತನ್ಯಶ್ರೀ ಪ್ರಶಸ್ತಿ ಪಡೆದ ಡಿ.ಎನ್.ಡಿ.ಟಿ. ಜಿಲ್ಲಾ ಸಲಹಾ ಸಮಿತಿಯ ಸದಸ್ಯರಾಗಿರುವ ಖ್ಯಾತ ಸ್ತ್ರೀರೋಗ ತಜ್ಞೆ ಡಾ.ಆರತಿ ಕೃಷ್ಣಮೂರ್ತಿ ಅವರನ್ನು ಸನ್ಮಾನಿಸಲಾಯಿತು.

ಮಕ್ಕಳ ತಜ್ಞಡಾ.ಸೋಹೆಲ್, ರೆಡಿಯೋಲಾಜಿಸ್ಟ್,ಡಾ.ಅಮಿತ ಶಾಹ,ಮಲಿಕಾರ್ಜುನ,ಮಂಜುಳಾ ಮಾಳೆ,ವಿನಯಕುಮಾರಮಾಳಗೆ ಸಭೆಯಲ್ಲಿ ಪಾಲ್ಗೊಂಡಿದ್ದರು.

# ಅಲ್ಲಾನಗರ- ಗಿಣಿಗೇರಾ ಕಾರ್ಖಾನೆಯಲ್ಲಿ ಅಪಘಾತ : ಇಲಾಖೆ ಅಧಿಕಾರಿಗಳು ಭೇಟಿ



ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ :ಜ.29: ಮೆ॥ ಕಾಮಿನಿ ಐರನ್ & ಸ್ಟೀಲ್ ಎಲ್.ಎಲ್.ಪಿ ಸರ್ವೆ ಸಂ.-2 ಅಲ್ಲಾ ನಗರ ಗಿಣಿಗೇರಾ, ಕೊಪ್ಪಳ ಈ ಕಾರ್ಖಾನೆಯಲ್ಲಿ ಜನವರಿ 28ರಂದು ನಡೆದ ಮರಣಾಂತಿಕ ಅಪಘಾತದ ಹಿನ್ನೆಲೆಯಲ್ಲಿ ಕಾರ್ಖಾನೆ ಮತ್ತು ಬಾಯ್ಲರುಗಳ ಇಲಾಖೆಯ ಅಧಿಕಾರಿಗಳು ಕಾರ್ಖಾನೆಗೆ ಭೇಟಿ ನೀಡಿದರು.

ಜ. 28 ರಂದು ಸುಮಾರು ಮಧ್ಯಾಹ್ನ 3.30 ಗಂ-ಟೆಗೆ ಕೊಪ್ಪಳ ತಾಲ್ಲೂಕಿನ ಅಲ್ಲಾ ನಗರ ಗಿಣಿಗೇರಾದಲ್ಲಿ ಸ್ಥಾಪಿತವಾದ ಮೆ॥ ಕಾಮಿನಿ ಐರನ್ & ಸ್ಟೀಲ್ ಎಲ್.ಎಲ್.ಪಿ ಘಟಕದಲ್ಲಿನ ಕಿಲನ್-1 ರ ಮೆಂಟೆನೆನ್ಸ್ ಕಾರ್ಯವನ್ನು ಜ. 16 ರಿಂದ ಕೈಗೊಂಡಿದ್ದು, ಅಪಘಾತದ ದಿನ ಕೊನೆಯ ಹಂತದ ಕಾರ್ಯನಿರ್ವಹಣೆ ಮಾಡುತ್ತಿದ್ದ ಸಮಯದಲ್ಲಿ ಕಾರ್ಬನ್ ಮೊನಕ್ಸೈಡ್ ಗ್ಯಾಸ್ ಸೇವಿಸಿ ಒಬ್ಬ ಕಾರ್ಮಿಕ ಮೃತನಾಗಿದ್ದು ಮತ್ತೊಬ್ಬ ಕಾರ್ಮಿಕನ ಸ್ಥಿತಿ ಗಂಭೀರವಾಗಿರುತ್ತದೆ. ಉಳಿದ 9 ಜನರಿಗೆ ಚಿಕಿತ್ಸೆ ಪಡೆಯುತ್ತಿದ್ದು, ಆರೋಗ್ಯ ಸ್ಥಿರವಾಗಿದೆ. ಯಾವುದೇ ಅಪಾಯವಿಲ್ಲವೆಂದು ವೈದ್ಯರು ತಿಳಿಸಿದ್ದು, ವೈದ್ಯರ ಸಲಹೆ ಮೇರೆಗೆ ಅವರನ್ನು 24 ಗಂಟೆಗಳ ಕಾಲ ನಿಗಾದಲ್ಲಿ ಇರಿಸಲಾಗಿದೆ.

ಘಟನೆ ನಡೆದ ದಿನವೇ ಕಾರ್ಖಾನೆ ಮತ್ತು ಬಾಯ್ಲರುಗಳ ಇಲಾಖೆಯ ಅಧಿಕಾರಿಗಳು ಕಾರ್ಖಾನೆಗೆ ಭೇಟಿ ನೀಡಿ ಪರಿಶೀಲನೆ ಮತ್ತು ತನಿಖೆ ಮಾಡಿ ಕ್ರಮ ತೆಗೆದುಕೊಂಡಿರುತ್ತಾರೆ. ಕಾರ್ಖಾನೆಯಲ್ಲಿನ ಸುರಕ್ಷತೆಯ ಕುರಿತು ಕ್ರಮ ತೆಗೆದುಕೊಳ್ಳಲು ಮತ್ತು ಮುಂದಿನ ದಿನಗಳಲ್ಲಿ ಅಹಿತಕರ ಘಟನೆ ನಡೆ-ಯದಂತೆ ತಡೆಗಟ್ಟಲು ಕ್ರಮ ಮತ್ತು ಸುರಕ್ಷತಾ ಆಡಿಟ್ ಮಾಡಿಸಿ ಕೊಪ್ಪಳ ಜಿಲ್ಲಾ ಬಿಕ್ಕಟ್ಟು ಪರಿಹಾರ ಸಮಿತಿಗೆ ವರದಿ ಸಲ್ಲಿಸಲು ಸೂಚಿಸುತ್ತಾ ಉತ್ಪಾದನಾ ಕಾರ್ಯವನ್ನು ಸ್ಥಗಿತಗೊಳಿಸಲು "ನಿಷೇದಾಜ್ಞೆ ಆದೇಶ"ನೀಡಿರುತ್ತಾರೆ. ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರು ಮತ್ತು ಕೊಪ್ಪಳ ಜಿಲ್ಲಾ ಉಸುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿರವರು ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಿ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಿರುತ್ತಾರೆ ಮತ್ತು ಮೃತ ಕಾರ್ಮಿಕರ ಕುಟುಂಬಕ್ಕೆ ಹೆಚ್ಚಿನ ಪರಿಹಾರ ದೊರಕಿಸಲು ಕಾರ್ಮಿಕ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ.

ಕೊಪ್ಪಳ ಜಿಲ್ಲಾಡಳಿತವು ಭಾದಿತ ಕಾರ್ಮಿಕರ ಆರೋಗ್ಯ ಮತ್ತು ಕಾರ್ಖಾನೆಯಲ್ಲಿ ತೆಗೆದುಕೊಳ್ಳಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ, ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ಕಾರ್ಖಾನೆಗಳು, ಬಾಯ್ಲರುಗಳು, ಸುರಕ್ಷತಾ ಮತ್ತು ಸ್ವಾಸ್ಥ್ಯ ಇಲಾಖೆಯ ಹುಬ್ಬಳ್ಳಿ ವಲಯದ ಕಾರ್ಖಾನೆಗಳ ಜಂಟಿ ನಿರ್ದೇಶಕರಾದ ರವೀಂದ್ರನಾಥ ಏನ್.ರಾಠೋಡ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ. 30 ರಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಭೆ

ಮಲ್ಲಮ ನುಡಿ ವಾರ್ತೆ
ಕಲಬುರಗಿ:ಜ.29: ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸಭೆಯನ್ನು ಜನವರಿ 30 ರಂದು ಮಧ್ಯಾಹ್ನ 2 ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ. ಡಿ.ಎಂ. ನಂಜುಂಡಪ್ಪಾ ವರದಿಯು ಸುಮಾರು 22 ವರ್ಷಗಳಷ್ಟುಹಳೆಯಾದಗಿರುವುದರಿಂದ ಹಾಗೂ ಕರ್ನಾಟಕದಲ್ಲಿ ಹಿಂದೆ ಇದ್ದ 175 ತಾಲೂಕುಗಳು ಬದಲು ಪ್ರಸ್ತುತ 240 ತಾಲ್ಲೂಕುಗಳಾಗಿರುವುದರಿಂದ 2023ರಬೆಳಗಾವಿಅಧಿವೇಶನದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದಂತೆ ಡಾ. ಡಿ.ಎಂ. ನಂಜುಂಡಪ್ಪಾ ವರದಿಯು ಅನುಷ್ಠಾನದಿಂದ ತಾಲೂಕುಗಳು ಅಭಿವೃದ್ಧಿ ಹೊಂದಿರುವ ಬಗ್ಗೆ ಹಾಗೂ ಅಭಿವೃದ್ಧಿ ಹೊಂದದೆ ಇರುವ ತಾಲ್ಲೂಕುಗಳನ್ನು ಗುರುತಿಸಿ ಹೊಸದಾಗಿ ಸೂಚ್ಯಾಂಕವನ್ನು ಕಂಡು ಹಿಡಿದು ಪ್ರಾದೇಶಿಕ ಅಸಮತೋಲನವನ್ನು ನಿವಾರಣೆ ಮಾಡಲು ರಾಜ್ಯ ಸರ್ಕಾರದವು ಪ್ರೋ.ಎಂ.ಗೋವಿಂದರಾವ, ಆರ್ಥಿಕ ತಜ್ಞರು ಇವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಜ ನ ಪ್ರ ತಿ ನಿ ಧಿ ಗ ಳ ು , ಅಧಿಕಾರಿಗಳು, ಸಂಘ ಸಂಸ್ಥೆಗಳು, ಉದ್ದಿಮೆದಾರರು, ವರ್ತಕರು ಮತ್ತು ಸಾರ್ವಜನಿಕರಿಂದ ಮನವಿಗಳು, ಆಧಿಕಾರಿಗಳು ಸಂಘ ಸಂಸ್ಥೆಗಳು, ಉದಿಮೆದಾರರು, ವರ್ತಕರು, ಮತ್ತು ಸಾರ್ವಜನರಿಕರಿಂದ ಮನವಿಗಳು/ ಅಭಿಪ್ರಾಯಗಳು/ಸಲಹೆಗಳನ್ನು ಸ್ವೀಕರಿಸಲು ನಿರ್ಧರಿಸಲಾಗಿದೆ.

ಆದರಿಂದ ಕಲಬುರಗಿ ಜಿಲ್ಲೆಯ ವಿಧಾನಸಭಾ ಸದಸ್ಯರು/ವಿಧಾನ ಪರಿಷತ್ ಸದಸ್ಯರು, ಪ್ರಾದೇಶಿಕ ಆಯುಕ್ತರು, ಕಾರ್ಯದರ್ಶಿಗಳು ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳು ಕಲಬುರಗಿ, ಸರ್ಕಾರೇತರ ಸಂಸ್ಥೆಗಳು ಉದ್ದಿಮೆದಾರರು/ ಕೈಗಾರಿಕೋದ್ಯಮಗಳು ಜನಪ್ರತಿನಿಧಿಗಳು ಜಿಲ್ಲೆಯ ವಿವಿಧ ಕ್ಷೇತ್ರಗಳು ಇಬ್ಬರು ತಜ್ಞರನ್ನು ಆಹ್ವಾನಿಸಿ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಸಭೆ ನಿಗಧಿಪಡಿಸಲು ಸೂಚಿಸಿರುತ್ತಾರೆ.

ಇದರ ಪ್ರಯುಕ್ತ ಜಿಲ್ಲೆಯ ಎಲ್ಲಾ ಸಂಘ ಸಂಸ್ಥೆಗಳು, ಉದ್ದಿಮೆದಾರರು, ವರ್ತಕರು ಮತ್ತು ಸಾರ್ವಜನಿಕರಿಂದ ಮನವಿಗಳು/ ಅಭಿಪ್ರಾಯಗಳು/ಸಲಹೆಗಳು ಇದ್ದಲ್ಲಿ ಸದರಿ ಸಭೆ/ ಕಾರ್ಯಕ್ರಮಕ್ಕೆ ಖುದ್ದಾಗಿ ಬಂದು ಲಿಖಿತ ರೂಪದಲ್ಲಿ ಸಲ್ಲಿಸಲು ತಿಳಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ರಾಷ್ಟ್ರೀಯ ಆರೋಗ್ಯ ಅಭಿಯಾನ ನೇಮಕಾತಿಗೆ ಅರ್ಜಿ ಆಹ್ವಾನ

ಮಲ್ಲಮನುಡಿವಾರ್ತೆಯಾದಗಿರಿ : ಜ.29 : ರಾಷ್ಟ್ರೀಯ ಆರೋಗ್ಯಅಭಿಯಾನದಡಿಯಲ್ಲಿ ಖಾಲಿಯಿರುವಗುತ್ತಿಗೆಆಧಾರದ ಸಿಬ್ಬಂದಿಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಸಂಘ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಮಲ್ಲಪ್ಪ ಅವರು ತಿಳಿಸಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ರಾಷ್ಟ್ರೀಯ ಆರೋಗ್ಯಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಿದೆ. ಆಸಕ್ತ ಇರುವ ತಜ್ಞ ವೈದ್ಯರು, ಎಂ.ಬಿ.ಬಿ.ಎಸ್ ವೈದ್ಯಾಧಿಕಾರಿಗಳು ಹಾಗೂ ಇತರೆ ಹುದ್ದೆಗಳ ಅರ್ಹ ಅಭ್ಯರ್ಥಿಗಳು 2025ರ ಜನವರಿ 27 ರಿಂದ ಫೆಬ್ರವರಿ 10ರ ವರೆಗೆ ಕಛೇರಿಯ ಸಮಯದಲ್ಲಿ ಅರ್ಜಿ ಪಡೆದು ಭರ್ತಿಮಾಡಿ ಸಲ್ಲಿಸಬೇಕು.

ಹೆಚ್ಚಿನಮಾಹಿತಿಗಾಗಿವೈಬ್‌ಸೈಟ್ yadgiri.nic.in, zpy-adgiri.karnataka.gov.inನಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದರ್ ದಕ್ಷಿಣ ಕ್ಷೇತ್ರ ಅಭಿವೃದ್ಧಿ ಕ್ಷೇತ್ರ ಮಾಡುವುದೇ ನನ್ನ ಗುರಿ: ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಜಾತ್ರೆಗಳು, ಉತ್ಸವಗಳು, ಹಬ್ಬಹರಿದಿನಗಳು ಮನುಷ್ಯನ ಕಲಾತ್ಮಕ ಬದುಕಿಗೆ ಪೂರಕವಾಗಿದ್ದು, ಅಧ್ಯಾತ್ಮಿಕ ಹಂದರ ರೂಪಿಸಿಕೊಡುತ್ತವೆ ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ನುಡಿದರು.

ತಾಲೂಕಿನ ಕಾರಪಾಕಪಳ್ಳಿ ಗ್ರಾಮದ ಶ್ರೀ ಘಾಳಿಮರೆಯಮ್ಮ ದೇವಿಯ ಹಾಗೂ ಶ್ರೀ ಲಕ್ಷ್ಮಿ ದೇವಿಯ ಜಾತ್ರಾಮಹೋತ್ಸವದಲ್ಲಿ ಮಾತನಾಡಿದ ಅವರು, ಇಡೀ ವರ್ಷ ನೋವು ನಲಿವುಗಳ ಹೊಯ್ದಾಟದಲ್ಲಿ ಬಳಲಿದ ಮನಸ್ಸಿಗೆ ಧರ್ಮಕಾರ್ಯಗಳು ನೆಮ್ಮದಿ ನೀಡುತ್ತದೆ ಎಂದರು. ಶ್ರೀ ಲಕ್ಷ್ಮಿ ಮಾತೆಯ ದೇವಸ್ಥಾನ ಚೈತನ್ಯದ ಕೇಂದ್ರವಾಗಿದ್ದು, ದೇವಿಯ ಆರಾಧನೆ ಹಾಗೂ ದುಡಿಮೆಯಿಂದ ಬದುಕಿಗೆ ಹೊಸ ಹೊಳಪು ಬರುತ್ತದೆ. ಸತ್ಯ ಶುದ್ಧ ಶ್ರಮಕ್ಕೆ ಲಕ್ಷ್ಮೀ ದೇವಿಯ ಕೃಪಾಶೀರ್ವಾದ ಇರುತ್ತದೆ ಎಂಬುವುದು ಸಾರ್ವಕಾಲಿಕ ಸತ್ಯದ ಮಾತಾಗಿದೆ. ನಾನು ಈ ಕ್ಷೇತ್ರದ ಶಾಸಕನಾಗಿ ಹಲವಾರು ಅಭಿವೃದ್ಧಿ ಕಾರ್ಯಗಳು ಮಾಡುತ್ತಿದ್ದೇನೆ, ಮುಂದಿನ ದಿನಗಳಲ್ಲಿ ದೇವಸ್ಥಾನಕ್ಕೆ ನನ್ನ ಅನುದಾನದಲ್ಲಿ ಛಾವಣಿ(ಛತ) ಹಾಕಿಸಿಕೊಡುತ್ತೇನೆ ಎಂದು ಹೇಳಿದರು. ಬೀದರ್ ದಕ್ಷಿಣ ಕ್ಷೇತ್ರದ ಅಭಿವೃದ್ಧಿಯ ಕ್ಷೇತ್ರವಾಗಿ ಮಾಡುವುದಾಗಿ ಭರವಸೆ ನೀಡಿದರು. ದಕ್ಷಿಣ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮತ್ತು ಅರೆಸರ್ಕಾರಿ ಶಾಲೆಯ ಬಡ ಮಕ್ಕಳಿಗೆ ಬ್ಯಾಗ್ ವಿತರಣೆ ಮಾಡುತ್ತಿದ್ದೇನೆ, ಒಂದು ವಾರದಲ್ಲಿ ಕಾರಕಾಪಳ್ಳಿ ಗ್ರಾಮಕ್ಕೂ ಕಳುಹಿಸುತ್ತೇನೆ, ಬಡ ಮಕ್ಕಳಿಗೆ ವಿತರಿಸಿ ಎಂದು ಮುಖಂಡರು ತಿಳಿಸಿದರು. ಯುವಕರು ದಯಮಾಡಿ ಆನ್ಲೈನ್ ಜೂಜಾಟಕ್ಕೆ ಬಲಿಯಾಗಬೇಡಿ, ಆನ್ಲೈನ್ ರಮ್ಮಿ ಆಟ ಸೇರಿದಂತೆ ಯಾವುದೇ ಆನ್ಲೈನ್ ಆಟ ಆಡಬೇಡಿ, ತಮ್ಮ ಆಸ್ತಿ ಅಂತಸ್ತುಗಳು ಕಳೆದುಕೊಳ್ಳಬೇಡಿ ಎಂದು ಕಿವಿ ಮಾತು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಲೀಲಾವತಿ ಪಾಟೀಲ್, ದೇವಸ್ಥಾನ ಕಮಿಟಿ ಅಧ್ಯಕ್ಷ ಬಸವರಾಜ ಕಾಡವಾದ, ಪಂಚಾಯತ್ ಸದಸ್ಯರಾದ, ಶಾಂತಮ್ಮಾ ಶರಣಪ್ಪ, ಕುಮಾರ್ ಸ್ವಾಮಿ, ಸಂತೋಷ ಚೌಕಿ, ರಾಜಕುಮಾರ ನೆಲವಾಳ, ಶಿವಲೀಲಾ ಗುಂಡಪ್ಪ, ಷಣ್ಮುಖಪ್ಪ ನಿಂಗನಬಾಡ ವಿಜಯಕುಮಾರ್ ರಾಜ-ಗಿರಾ, ಶರಣುಗೌಡ ಪಾಟೀಲ್, ಪುಂಡಲೀಕಪ್ಪ ನಿಂಗನಬಾಡ, ವೈಜಿನಾಥ ಪಾಟೀಲ್, ಸಂತೋಷ ರೆಡ್ಡಿ ಅಣದುರೆ, ಕಾಶಿನಾಥ್ ರಾಜಗಿರ, ವೀರಪ್ಪ ಫುಲ್ಲಾ, ವೀರಶೆಟ್ಟಿ ಪಾಟೀಲ್, ರಾಜಕುಮಾರ ಮಾಲಿ ಪಾಟೀಲ್, ರಾಜಕುಮಾರ ಕಾಡವಾದ, ರಾಜಕುಮಾರ ಮೀನಕೇರಾ, ಆನಂದ ಮೀನಕೇರಾ, ರಾಜಕುಮಾರ್ ಮನ್ನಳ್ಳಿ, ಪ್ರಭು ಕಾಡವಾದ, ಶೈಲೇಶ ಮೇತ್ರಿ, ಸಂಜು ಮೊರೆ, ಬಸವರಾಜ ರಾಚೋಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿದ್ಯುತ್ ಶಾರ್ಟ್ ಸರ್ಕ್ಯೂಟ್, ಬಡ ಕುಟುಂಬ ಬೀದಿಪಾಲು



**ವಿದ್ಯುತ್ (ಶಾರ್ಟ್ ಸರ್ಕ್ಯೂಟ) ಹರಿವು ಹೆಚ್ಚಾಗುವುದಕ್ಕೆ ಕಾರಣ:**

ಮನೆಯಲ್ಲಿ ವಿದ್ಯುಚ್ಛಕ್ತಿಯ ಹರಿವಿಗಾಗಿ, ಅನೇಕ ತಂತಿಗಳು ಅಂತರ್ಸಂಪರ್ಕಿಸಲ್ಪಟ್ಟಿ, ಇದು ಮುಖ್ಯ ವಿದ್ಯುತ್ ನಿಯಂತ್ರಣ ಮಂಡಳಿಯಿಂದ ಎಲ್ಲಾ ಸ್ವಿಚ್ ಬೋರ್ಡ್ಗಳಿಗೆ ಪ್ರಸ್ತುತವನ್ನು ರವಾನಿಸುತ್ತದೆ.

ಅಂತಹ ಪರಿಸ್ಥಿತಿಯಲ್ಲಿ, ಹೆಚ್ಚಿನ ಶಕ್ತಿಯಿಂದ ಕಾರ್ಯನಿರ್ವಹಿಸುವ ಸಾಧನವನ್ನು ಬಳಸಿದಾಗ, ಹೆಚ್ಚಿನ ಹೊರೆಯಿಂದಾಗಿ ಈ ವಿದ್ಯುತ್ ಹರಿವು ಹದಗೆಡಲು ಪ್ರಾರಂಭಿಸುತ್ತದೆ. ಇದರಿಂದಾಗಿ ತಂತಿಗಳಲ್ಲಿ ಶಾರ್ಟ್ ಸರ್ಕ್ಯೂಟ್ ಸಂಭವಿಸುತ್ತದೆ.

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.29:ವಿದ್ಯುತ ಶಾರ್ಟ್ ಸರ್ಕ್ಯೂಟ್ ನಿಂದ ಬಡ ಕುಟುಂಬ ಮನೆಗೆ ಬೆಂಕಿ ತಗುಲಿ ವರ್ಷ ಪೂರ್ತಿ ಕೂಲಿ ಕೆಲಸಾ ಮಾಡಿ ಶೇಖರಣೆ ಮಾಡಿದ ತೊಗರಿ, ಜ್ವಾಳ, ಅಕ್ಕಿ, ಬೆಳೆ ದಾನ್ಯ ಸೇರಿದಂತೆ ದುಡ್ಡು ಒಡವೆ ಎಲ್ಲಾ ಅಗ್ನಿ ತೇವರಿಗೆ ಅನಾಹುತಿಯಾಗಿದೆ. ಇದರಿಂದ ಬಡ ಕುಟುಂಬ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿದೆ.

ಪಟ್ಟಣದ ಹಳೆ ಪೊಲೀಸ್ ಠಾಣೆ ಸಮೀಪದ ಶಾಲಿವಾನ ಶಾಮರಾವ ರಾಮಲೆ ಅವರಿಗೆ ಸೇರಿದ ಮನೆಗೆ ಮಂಗಳವಾರ ಬೆಳಗ್ಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ತಗಲಿ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಮತ್ತು ಇನ್ನಿತರ ವಸ್ತುಗಳು ಸುಟ್ಟು ಹೋಗಿವೆ.

ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಹತ್ತಿಕೊಂಡು ಮನೆಯಲ್ಲಿದ್ದ ಚಿನ್ನದ ಆಭರಣ, 55000 ರೂ. ನಗದು ಹಣ ಮತ್ತು ಮನೆ ಸಾಮಾನುಗಳು ಸಂಪೂರ್ಣ ಸುಟ್ಟು ಹೋಗಿವೆ. ಹೀಗಾಗಿ ಒಟ್ಟು 5 ಲಕ್ಷ ರೂ. ಮೌಲ್ಯದ ವಸ್ತುಗಳು ಬೆಂಕಿಯಿಂದ ಸುಟ್ಟಿರುತ್ತವೆ. ಯಾವುದೇ ಪ್ರಾಣ ಅಪಾಯ ಆಗಿಲ್ಲ, ಈ ಕುರಿತು ಶಾಲಿವಾನ ನೀಡಿದ ದೂರಿನ ಅನ್ವಯ ಕಮಲನಗರ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

# ವಿಜ್ಞಾನಿಗಳಾಗಲು ಆಸಕ್ತಿ ತೋರಿ:ನಾಯಕ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 29 : ವಿದ್ಯಾರ್ಥಿಗಳು ಭವಿಷ್ಯದಲ್ಲಿ ವಿಜ್ಞಾನಿಗಳಾಗಲು ಆಸಕ್ತಿ ತೋರಬೇಕು ಎಂದು ಪುಣೆ-ಯ ಡಿಆರ್‌ಡಿಒ ವಿಜ್ಞಾನಿ ಸುಭೋದಕುಮಾರ ನಾಯಕ್ ಹೇಳಿದರು.

ಭಾಲ್ಕಿ ತಾಲ್ಲೂಕಿನ ಕೇಸರಜವಳಗಾ ಗ್ರಾಮದ ಪಂಚಶೀಲ ಶಿಕ್ಷಣ ಸಂಸ್ಥೆ ಸಂಚಾಲಿತ ಸಂಗಮೇಶ್ವರ ಪ್ರೌಢಶಾಲೆಯಲ್ಲಿ ಬುಧವಾರ ನಡೆದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ವಿಜ್ಞಾನಿಗಳಾಗುವವರ ಸಂಖ್ಯೆ ಶೇ 1.5 ರಷ್ಟು ಮಾತ್ರ ಇದೆ. ಆದರೆ, ಅಮರಿಕದಲ್ಲಿ ಈ ಪ್ರಮಾಣ ಶೇ 58, ಜಪಾನನಲ್ಲಿ ಶೇ 48 ಹಾಗೂ ಚೀನಾದಲ್ಲಿ ಶೇ 42 ರಷ್ಟು ಇದೆ ಎಂದು ತಿಳಿಸಿದರು.

ಭವಿಷ್ಯದ ವಿಜ್ಞಾನಿಗಳನ್ನು ರೂಪುಗೊಳಿಸುವ ದಿಸೆಯಲ್ಲಿ ಮೂಲ ವಿಜ್ಞಾನ, ವಿಜ್ಞಾನ ಹಾಗೂ ಸಂಶೋಧನೆಯಲ್ಲಿ ತೊಡಗಲು ವಿದ್ಯಾರ್ಥಿಗಳನ್ನು ಹುರಿದುಂಬಿಸಬೇಕು ಎಂದು ತಿಳಿಸಿದರು.

ಪ್ರತಿ ಮಗುವಿನಲ್ಲೂ ತನ್ನದೇ ಆದ ಬುದ್ಧಿ ಶಕ್ತಿ ಹಾಗೂ ಕೌಶಲ ಇರುತ್ತದೆ. ಶಿಕ್ಷಕರು ಅದನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಎಂದು ಶಾಲೆಯ ಹಳೆಯ ವಿದ್ಯಾರ್ಥಿಯೂ ಆದ ವಿಜ್ಞಾನಿ ವಿದ್ಯಾವತಿ ಎಸ್. ನಾಯಕ್ ಹೇಳಿದರು.

ಬಳಿಕ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ವಿಜ್ಞಾನ ಕ್ಷೇತ್ರದ ಬಗ್ಗೆ ಆಸಕ್ತಿ ಮೂಡಿಸಿದರು.

ಶಾಲೆಯ ಶಿಕ್ಷಕರಾದ ಭೀಮ ಎಳ್ಳೂರೆ, ಸಂಜೀವಕುಮಾರ ಕೊಬ್ಬರಗಡೆ, ರತ್ನಮ್ಮ ಪರಷಣೆ, ಪ್ರಭಾವತಿ ರೊಟ್ಟೆ, ಸಾಯಿನಾಥ ಗೋರೆ, ಮಹೇಶ್ ನವಾಡೆ, ಅಶ್ವಿನಿ ಕರಕಲೆ, ಶ್ರೀಕಾಂತ ಖೇಳಗೆ, ಮಹಾದೇವ ವಾಗೆ, ವಿಮಲ್ ಸೂರ್ಯವಂಶಿ, ಪ್ರಭುರಾವ್ ಮಂಗಣೆ, ಮಾಧವರಾವ್ ತಾಂಬೋಳೆ, ಬಾಬುರಾವ್ ಕರಕಲೆ, ಚಂದ್ರಪ್ಪ ಕರಕಲೆ, ಮಾರುತಿ ಸಾಗರ್, ರಮೇಶ ಕಾಣಕೇರ್, ವಿಜಯಲಕ್ಷ್ಮಿ ಪೂಜಾರಿ, ಧರ್ಮವೀರ ಪಾಟೀಲ, ಪಂಡಿತ ಕೋಳಿಕರ್, ದತ್ತಾತ್ರಿ, ಇಂದ್ರಜೀತ್ ಗುಪ್ತಾ, ಉತ್ತಮ ವಾಗೆ, ಶ್ರೀಧರ, ದಿಲೀಪ್ ಗಂಟೆ, ರಮೇಶ್ ಧೋಲಿ ಇದ್ದರು.

# ಸಚಿವರು ಕೇವಲ ಶಹಾಪುರ,ಯಾದಗಿರಿಗೇ ಸಿಮಿತ



ಮಲ್ಲಮ್ಮ ನುಡಿ ವಾರ್ತೆ


ಯಾದಗಿರಿ:ಜ.29: ಇಲ್ಲಿನ ಜಿಲ್ಲಾ ಉಸ್ತುವಾರಿ ಸಚಿವರು ಕೇವಲ ಶಹಾಪುರ ಮತ್ತು ಆಗಾಗ ಯಾದಗಿರಿಗೆ ಮಾತ್ರ ಸೀಮಿತರಾಗಿದ್ದಾರೆಂದು ಆರೋಪಿಸಿರುವ ಭಾರತೀಯ ಜನತಾ ಪಕ್ಷದ ನೂತನ ಜಿಲ್ಲಾಧ್ಯಕ್ಷ ಬಸವರಾಜಪ್ಪ ವಿಭೂತಿಹಳ್ಳಿ, ಶಹಾಪುರದಲ್ಲಿ ಅವರ ಕುಟುಂಬದ್ದೇ ಒಂದು ಸಣ್ಣ ಕ್ಯಾಬಿನೆಟ್ ಕಟ್ಟಿಕೊಂಡಿ-ದ್ದಾರೆಂದು ಸಚಿವ ಶರಣಬಸಪ್ಪ ದರ್ಶನಾಪುರ ಹೆಸರು ಉಲ್ಲೇಖಿಸಿದೇ ವ್ಯಂಗ್ಯವಾಡಿದರು.

ಇಲ್ಲಿನ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಬುಧವಾರ ಜಿಲ್ಲಾಧ್ಯಕ್ಷರಾಗಿ ಪ್ರಥಮ ಭಾರಿಗೆ ಸುದ್ಧಿಗೊಷ್ಠಿ ನಡೆಸಿ ಮಾತನಾಡಿದ ಅವರು, ಆರು ತಾಲೂಕುಗಳ ದೊಡ್ಡ ಜಿಲ್ಲೆ ಇದಾಗಿದ್ದರೂ ಸಚಿವರು, ಕೇವಲ ಒಂದೆರಡು ತಾಲೂಕಿಗಳಿಗೆ ಭೇಟಿ ನೀಡುತ್ತಾರೆಯೇ ಹೊರತು ಇಲ್ಲಿಯವರೆಗೂ ಇಡಿ ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಿಗಾಗಲಿ, ಹೊಬಳಿ, ಹಳ್ಳಿಗಳಾಲಿ ಭೇಟಿ ನೀಡಿ ಜನರ ಕುಂದುಕೊರತೆ ಆಲಿಸಿಲ್ಲ, ಜಿಲ್ಲೆ ಅಭಿವೃದ್ಧಿಗೆ ಕೆಲಸ ಮಾಡದ ಸಚಿವರ ಹಿಂದೆ ಭ್ರಷ್ಟಾಚಾರ ಮಾಡುವ ಒಂದು ತಂಡವೇ ಇದೆ, ಅವರ ಅಣತಿಯಂತೆಯೇ ಕೆಲಸ ಮಾಡುತ್ತಿದ್ದಾರೆಂದು ಗಂಭಿರವಾಗಿ ಆರೋಪಿಸಿದರು.

ಬರುವ ದಿನಗಳಲ್ಲಿ ಅವರು ಮಾಡುತ್ತಿರುವ ಭ್ರಷ್ಟಾಚಾರದ ವಿರುದ್ಧ ಪಕ್ಷದಿಂದ ಹೋರಾಟ ಮಾಡಲಾಗುವುದೆಂದರು.

ಸಚಿವರ ಕುಟುಂಬಸ್ಥರೇ ಶಹಾಪುರ ಜಿಲ್ಲೆಯಲ್ಲಿ ಒಂದೊಂದು ಖಾತೆ ಸಂಬಳ್ಳಿಸುತ್ತಿದ್ದಾರೆ, ಅವರ ಕಾಕಾ ಗ್ರಾಮೀಣಾಭಿವೃದ್ಧಿ, ಅವರ ಸೊದರ ಗಣಿ ಮತ್ತು ಭೂವಿಜ್ಞಾನ, ಸಂಬಂಧಿಕರು ಲೋಕೋಪಯೋಗಿ ಹೀಗೆ ಇಡಿ ಜಿಲ್ಲೆ ತಮ್ಮ ಹಿಡಿತದಲ್ಲಿಬಿಟ್ಟು ಕೊಂಡು ಅಭಿವೃದ್ಧಿ ಶೂನ್ಯ ಮಾಡಿದ್ದಾರೆಂದು ಅಧ್ಯಕ್ಷ ವಿಭೂತಿಹಳ್ಳಿ ಆರೋಪಿಸಿದರು. ಮುಂಬರುವ ದಿನಗಳಲ್ಲಿ ಪಕ್ಷ ಬೂತ ಮಟ್ಟದಿಂದ ಸಂಘಟಿಸಿ, ಮುಂಬರುವ ಎಲ್ಲ ಚುನಾವಣೆಗಳಲ್ಲಿ ಗೆಲ್ಲುತ್ತೆವೆ ಎಂದರು. ಪಕ್ಷದ ಮುಖಂಡರು ಮತ್ತು ಜಿಲ್ಲೆಯ ಎಲ್ಲ ಪ್ರಮುಖರು ನನಗೆ ಈ ದೊಡ್ಡ ಹೊಣೆಗಾರಿಗೆ ನೀಡಿದ್ದಾರೆ. ನಾನು ಎಲ್ಲರ ಸಹಕಾರದಿಂದ ಕೆಲಸ ಮಾಡುವುದಾಗಿ ಹೇಳಿದರು

ಮಾಜಿ ಅಧ್ಯಕ್ಷರಾದ ಚಂದ್ರಶೇಖರ ಪಾಟೀಲ್ ಮಾಗನೂರ, ಅಮೀನ್ ರಡ್ಡಿ, ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಗುರು ಕಾಮಾ, ದೇವೇಂದ್ರನಾಥ ನಾದ್, ಎಚ್.ಸಿ.ಪಾಟೀಲ್, ಡಾ.ಚಂದ್ರಶೇಖರ ಸುಬೇದಾರ ಇತರರಿದ್ದರು.



**ಬಿಜೆಪಿ ನೂತನ ಅಧ್ಯಕ್ಷರಾಗಿ ಬಸವರಾಜಪ್ಪ ವಿಭೂತಿಹಳ್ಳಿ ಆಯ್ಕೆ.**

ಯಾದಗಿರಿ: ಜಿಲ್ಲಾ ಭಾರತೀಯ ಜನತಾ ಪಕ್ಷದ ನೂತನ ಅಧ್ಯಕ್ಷರಾಗಿ ಬಸವರಾಜಪ್ಪ ವಿಭೂತಿಹಳ್ಳಿ ಹಾಗೂ ರಾಜ್ಯ ಸಮಿತಿಗೆ ಜಿಲ್ಲಾ ಪ್ರತಿನಿಧಿಯಾಗಿ ಅಮೀನ್ ರಡ್ಡಿ ಯಾಳಗಿ ಅವರು ಆಯ್ಕೆಯಾಗಿದ್ದಾರೆ.

ಬುಧವಾರ ಪಕ್ಷದ ಜಿಲ್ಲಾ ಕಚೇರಿಯಲ್ಲಿ ಚುನಾವಣಾಧಿಕಾರಿಯಾಗಿ ಆಗಮಿಸಿದ್ದ ಮಾಜಿ ಶಾಸಕ ರಾಜಕುಮಾರ ಪಾಟೀಲ್ ಸಮ್ಮುಖದಲ್ಲಿ ಸೇರಿದ್ದ ಅಪಾರ ಮುಖಂಡರು, ಕಾರ್ಯಕರ್ತರು ಇವರ ಆಯ್ಕೆಗೆ ಸಮ್ಮತಿಸಿದಾಗ ಪಾಟೀಲ್ ಹೆಸರುಗಳನ್ನು ಘೋಷಣೆ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಕು.ಲಲಿತಾ ಅನಂತಪುರ, ನಿಕಟ ಪೂರ್ವ ಜಿಲ್ಲಾಧ್ಯಕ್ಷ ಅಮೀನ್ ರಡ್ಡಿ,

ಮಾಜಿ ಜಿಲ್ಲಾಧ್ಯಕ್ಷ ಡಾ.ಶರಣಭೂಪಾಲರಡ್ಡಿ ಮತ್ತು ಚಂದ್ರಶೇಖರ ಮಗನೂರ, ನಾಗರತ್ನ ಕುಪ್ಪಿ, ಡಾ.ಚಂದ್ರಶೇಖರ ಸುಬೇದಾರ, ದೇವೇಂದ್ರನಾಥ ನಾದ್, ಖಂಡಪ್ಪ ದಾಸನ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮಾ ಮತ್ತು ಮೆಲಪ್ಪ ಮುಳುಗಿ, ಪರುಶುರಾಮ ಕುರಕುಂದಿ, ಜಿಲ್ಲಾ ವಕ್ತಾರ ಹಣಮಂತ ಇಟಗಿ, ವೆಂಕಟರಡ್ಡಿ ಅಬ್ಬೆತುಮಕೂರು, ಎಚ್.ಸಿ.ಪಾಟೀಲ್, ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಕುಣಿ, ಚನ್ನುಗೌಡ ಬಿಳ್ಹಾರ, ಬಸವರಾಜಗೌಡ ಬಿಳ್ಹಾರ ಇತರರಿದ್ದರು.

# ರಾಯಚೂರಿನಲ್ಲಿ ಶಿಕ್ಷಣ ಭಾಗಿದಾರರ ಸಮಾವೇಶ ಆಯೋಜನೆ: ಫೆ. 7 ರೊಳಗಾಗಿ ನೋಂದಣಿಗೆ ಸೂಚನೆ

ಮಲ್ಲಮ ನುಡಿ ವಾರ್ತೆ

ಕಲಬುರಗಿ,ಜ.29:ಗುಣಾತ್ಮಕ ಶಿಕ್ಷಣಕ್ಕಾಗಿ ಮತ್ತು ಶಿಕ್ಷಣಕ್ಷೇತ್ರದಲ್ಲಿ ನವೀನ ವಿಧಾನಗಳ ಮೂಲಕ ಪರಿವರ್ತನೆಯನ್ನು ತರಲು ಶಿಕ್ಷಣ ತಜ್ಞರು, ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಶಿಕ್ಷಣ ಭಾಗಿದಾರರನ್ನು ಒಗ್ಗೂಡಿಸುವ ತನ್ಮೂಲಕ ಕಲ್ಯಾಣ ಕರ್ನಾಟಕದ ವಿಭಾಗದ ಶಿಕ್ಷಣ ಕ್ಷೇತ್ರದಲ್ಲಿ ಗುಣಾತ್ಮಕತೆಯನ್ನು ತರುವ ಹಿನ್ನೆಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ 2025ರ ಫೆಬ್ರವರಿ 14 ಹಾಗೂ 15 ರಂದು ಎರಡು ದಿನಗಳ ಕಾಲ ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಕ್ಯಾಂಪಸ್‌ದಲ್ಲಿ Knowledge Con-clave 2025 (Know-Con-2025) ಶಿಕ್ಷಣ ಭಾಗಿದಾರರ ಶಿಕ್ಷಣ ಸಮಾವೇಶವನ್ನು ಆಯೋಜಿಸಲಾಗುತ್ತಿದೆ ಎಂದು ಕಲಬುರಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಎಸ್. ಅವರು ತಿಳಿಸಿದ್ದಾರೆ.


**ಬೀದರ ನಗರಾಭಿವೃದ್ಧಿ ಪ್ರಾಧಿಕಾರ ಬೀದರ**

ಉದಗೀರ ರಸ್ತೆ, ನೌಬಾದ, ಬೀದರ-585402. Email : udabidar@gmail.com Telephone No. 08482-232707

ಸಂಖ್ಯೆ: ಬೀನಪ್ರಾ/ಭೂ.ಉ.ಬ/ತಾಂತ್ರಿಕ/ಚಿದ್ರಿ/ಸಿ.ಆರ್-13/2024-25/913 ದಿನಾಂಕ:28/01/2025

**:: ಪ್ರಕಟಣೆ ::**

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 14(ಎ) ರ ಪ್ರಕಾರ)**

ಬೀದರ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಯಾದ ಮಹಾಯೋಜನೆಯಲ್ಲಿ ಬೀದರ ಜಿಲ್ಲೆಯ ಬೀದರ ತಾಲೂಕಿನ ಕಮಠಾಣಾ ಹೋಬಳಿಯ ಚಿದ್ರಿ ಗ್ರಾಮದ ಸರ್ವೆ ನಂ.56/*/1 ರಲ್ಲಿ ವಿಸ್ತೀರ್ಣ 12 ಎಕರೆ 17 ಗುಂಟೆ ಜಮೀನು ಕೃಷಿ/ವ್ಯವಸಾಯ ವಲಯಕ್ಕಾಗಿ ಕಾಯ್ದಿರಿಸಲಾಗಿದೆ. ಕೆಟಿಸಿಪಿ ಕಾಯ್ದೆ 1961 ಕಲಂ 14(ಎ)ರನ್ವಯ ಅರ್ಜಿದಾರರು ತಮ್ಮ ಜಮೀನಿನ ಸುತ್ತಲು ವಸತಿ ಅಭಿವೃದ್ಧಿ ಬರುತ್ತಿರುವುದರಿಂದ ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಸದರಿ ಜಮೀನಿನಲ್ಲಿ ವಸತಿ ಉದ್ದೇಶಕ್ಕಾಗಿ ಭೂ-ಉಪಯೋಗ ಬದಲಾವಣೆ ಮಾಡಲು ಕೋರಿರುತ್ತಾರೆ.

**ಭೂ-ಉಪಯೋಗ ಬದಲಾವಣೆಗೊಳಿಸುವ ವಿವರ ಈ ಕೆಳಗಿನಂತಿವೆ.**

1) ಅರ್ಜಿದಾರರ ಹೆಸರು : ಶ್ರೀ ಸಂಗಮೇಶ ಹಾಲಹಳ್ಳಿ ತಂದೆ ಚನ್ನಬಸಪ್ಪ ಹಾಲಹಳ್ಳಿ ಸಾ:#ಜಿ308 ಎಸ.ಎಸ.ಎಸ.ಐ. ಎಚ. ಎಮ.ಎಸ, ಇಪಿಐಪಿ ಎರಿಯಾ ವೈಟ ಫಿಲ್ಡ ಬೆಂಗಳೂರು, 2) ಗ್ರಾಮ : ಚಿದ್ರಿ, 3) ಸರ್ವೆ ನಂ. : 56/*/1, 4) ವಿಸ್ತೀರ್ಣ : **12 ಎಕರೆ 17 ಗುಂಟೆ**, 5) ಮಹಾಯೋಜನೆ ಪ್ರಕಾರ ಭೂ ಉಪಯೋಗ : ಕೃಷಿ ವಲಯ, 6) ಅರ್ಜಿದಾರರು ಭೂ-ಉಪಯೋಗ ಬದಲಾವಣೆಗೆ ಕೋರಿರುವ ಭೂ-ಉಪಯೋಗ. : ವಸತಿ ಉದ್ದೇಶಕ್ಕಾಗಿ, 7) ಅರ್ಜಿದಾರರು ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅಂಶಗಳು : 1. ಸಾರ್ವಜನಿಕರಿಗೆ ನಿವೇಶನಗಳು ದೊರಕುವುದು, 2. ನಗರ ಯೋಜಿತ ಬೆಳವಣಿಗೆಗೆ ಸಾಧ್ಯ, 3. ಎಲ್ಲಾ ಮೂಲ ಭೂತ ಸೌಕರ್ಯಗಳನ್ನು ಒದಗಿಸುವುದು. 4. ವಿನ್ಯಾಸ ಅನುಮೋದನೆ ದೊರಕಿದರೆ ಕಾರ್ಮಿಕರಿಗೆ ಕೆಲಸ ಸಿಗುವುದು.

ಆದ್ದರಿಂದ ಪ್ರಸ್ತಾವನೆಯನ್ನು ಪರಿಶೀಲಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ)ರಂತೆ ಭೂ-ಉಪಯೋಗ ಬದಲಾವಣೆ ಕುರಿತು ಸಾರ್ವಜನಿಕರು ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳ ಒಳಗಾಗಿ ಈ ಕೆಳಗೆ ಸಹಿ ಮಾಡಿದ ಕಚೇರಿಗೆ ಲಿಖಿತವಾಗಿ ಸಲ್ಲಿಸತಕ್ಕದ್ದು, ನಿಗದಿತ ಅವಧಿಯ ನಂತರದ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/- ಆಯುಕ್ತರು
ಬೀದರ ನಗರಾಭಿವೃದ್ಧಿ ಪ್ರಾಧಿಕಾರ ಬೀದರ.

ವಾ.ಸಾ.ಸಂ.ಇ/ಬೀದರ/371/ಕೆ.ಎಸ್.ಎಂ.ಸಿ.&ಎ/2024-25


# ಕೆಯುಡಬ್ಲ್ಯೂಜೆ ದತ್ತಿನಿಧಿ ಮೊತ್ತ 2 ಲಕ್ಷಕ್ಕೆ ಏರಿಕೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜ.29:ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘವು ಸ್ಥಾಪಿಸಿರುವ ಕೆಯುಡಬ್ಲ್ಯೂಜೆ ಪ್ರಶಸ್ತಿ ಮೊತ್ತ 2 ಲಕ್ಷ ರೂಗೆ ಏರಿಕೆ ಆಗಿದೆ.

ಎರಡು ವರ್ಷದ ಹಿಂದೆ ಅಕಾಡೆಮಿಗೆ 1.50 ಲಕ್ಷ ರೂ ಚೆಕ್ ಮೂಲಕ ಹಣ ಪಾವತಿ ಮಾಡುವ ಮೂಲಕ ಕೆಯುಡಬ್ಲ್ಯೂಜೆ ಪ್ರಶಸ್ತಿಯನ್ನು ಸ್ಥಾಪಿಸಿತ್ತು. ಅದರ ಮುಂದುವರಿದ ಭಾಗವಾಗಿ 50 ಸಾವಿರ ಚೆಕ್‌ನ್ನು ಅಕಾಡೆಮಿಯ ಅಧ್ಯಕ್ಷೆ ಆಯೇಷಾ ಖಾನಂ ಮತ್ತು ಕಾರ್ಯದರ್ಶಿ ಸಹನ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಕೆಯುಡಬ್ಲ್ಯೂಟಿಜಜಜಿಟಿಜಜಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಖಜಾಂಚಿ ವಾಸುದೇವಹೊಳ್ಳ, ಅಕಾಡೆಮಿಯ ಮುನಿರಾಜ್ ಅವರು ಹಾಜರಿದ್ದರು.

ಕೆಯುಡಬ್ಲ್ಯೂಜೆ ಹೋರಾಟದ ಲವಾಗಿ ರಾಜ್ಯದಲ್ಲಿ 1982ರಲ್ಲಿ ಪತ್ರಿಕಾ ಅಕಾಡೆಮಿಯನ್ನು ರಾಜ್ಯ ಸರ್ಕಾರ ಪ್ರಾರಂಭಿಸಿತ್ತು. ನಾಲ್ಕು ದಶಕಗಳ ಇತಿಹಾಸ ಹೊಂದಿರುವ ಅಕಾಡೆಮಿಯು, ಕರ್ನಾಟಕ ಮಾಧ್ಯಮ ಅಕಾಡೆಮಿಯಾಗಿ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.